ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ   Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 59 ಸಂಚಿಕೆ- 59 | PAGE- 8 ಪುಟ-8 | ಬುಧವಾರ 09.04.2025 | RS.2/- ಬೆಲೆ 2/-

# ವಕ್ಫ್ ಮಸೂದೆ, ಮತಾಂತರ ವಿರೋಧಿ ಕಾನೂನಿಗೆ ಕಾಂಗ್ರೆಸ್ ವಿರೋಧ



ಮಲ್ಲಮ್ಮ ನುಡಿ ವಾರ್ತೆ ಅಹಮದಾಬಾದ್:ಏ.8: ವಿವಾದಾತ್ಮಕ ವಕ್ಫ್ ಮಸೂದೆ ಮತ್ತು ಮತಾಂತರ ವಿರೋಧಿ ಕಾನೂನುಗಳಿಗೆ ಕಾಂಗ್ರೆಸ್ ತನ್ನ ವಿರೋಧವನ್ನು ಪುನರುಚ್ಚರಿಸಿದ್ದು, ಕೊನೆಯವರೆಗೂ ಧಾರ್ಮಿಕ, ಭಾಷಾ, ಜಾತಿ ಆಧಾರಿತ ಮತ್ತು ಪ್ರಾದೇಶಿಕ ವಿಭಜನೆಯ ರಾಜಕೀಯದ ವಿರುದ್ಧ ಹೋರಾಡಲು ಬದ್ಧ ಎಂದು ಮಂಗಳವಾರ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ(ಸಿಡಬ್ಲ್ಯೂಸಿ) ಸಭೆ ನಿರ್ಣಯ ತೆಗೆದುಕೊಂಡಿದೆ.

"ನಾವು ಭಾರತವನ್ನು ವಿಭಜಿಸಲು ಬಿಡುವುದಿಲ್ಲ ಅಥವಾ ಅದನ್ನು ವಿಭಜಿಸಲು ಪ್ರಯತ್ನಿಸುವವರು ತಮ್ಮ ಪೈಶಾಚಿಕ ಯೋಜನೆಗಳಲ್ಲಿ ಯಶಸ್ವಿಯಾಗಲು ಅವಕಾಶ ನೀಡುವುದಿಲ್ಲ. ನಮ್ಮ ಮಾರ್ಗ ಸ್ಪಷ್ಟವಾಗಿದೆ: ದ್ವೇಷವನ್ನು ಬಿಟ್ಟುಬಿಡಿ, ಭಾರತವನ್ನು ಒಗ್ಗೂಡಿಸಿ" ಎಂದು ನಿರ್ಣಯ ತೆಗೆದುಕೊಂಡಿರುವುದಾಗಿ ಸಿಡಬ್ಲ್ಯೂಸಿಯಲ್ಲಿ ಭಾಗವಹಿಸಿದ್ದವರು ತಿಳಿಸಿದ್ದಾರೆ. ಮತಾಂತರ ವಿರೋಧಿ ಕಾನೂನು ಮತ್ತು ವಕ್ಫ್ ಮಂಡಳಿಯ ಕಾನೂನು ತಿದ್ದುಪಡಿ ಬಿಜೆಪಿಯ ಧ್ರುವೀಕರಣ ತಂತ್ರದ ಭಾಗವಾಗಿದೆ ಎಂದು ಮೂಲಗಳು ತಿಳಿಸಿವೆ.

ಇದಲ್ಲದೆ, ಭಾರತ ಮತ್ತು ಯುನೈಟೆಡ್ ಸ್ಟೇಟ್ಸ್ ನಡುವೆ ನಿಕಟ ಸಂಬಂಧ ಮುಂದುವರೆಸುವುದನ್ನು ಕಾಂಗ್ರೆಸ್ ಬೆಂಬಲಿಸುತ್ತದೆ. ಆದರೆ ಅದು ಎಂದಿಗೂ ಭಾರತದ ರಾಷ್ಟ್ರೀಯ ಹಿತಾಸಕ್ತಿ ಹಾಳುಮಾಡಬಾರದು ಎಂದು ನಿರ್ಣಯ ಹೇಳಿದೆ.

ವಿದೇಶಾಂಗ ನೀತಿಯ ವಿಷಯದಲ್ಲಿ, ಚರ್ಚೆಯ ನಂತರ ನಾಳೆ ಅಂಗೀಕರಿಸಬೇಕಾದ ನಿರ್ಣಯದಲ್ಲಿ, ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರದ ವಿದೇಶಾಂಗ ನೀತಿಯು ಅತ್ಯಂತ "ದುರ್ಬಲ" ಮತ್ತು "ಅಸಹಾಯಕ" ಎಂದು ಟೀಕಿಸಲಾಗಿದೆ ಮತ್ತು ಇದು "ಸ್ವೀಕಾರಾರ್ಹವಲ್ಲ" ಎಂದು ಹೇಳಿದ್ದಾರೆ. "ಪ್ರಧಾನಿ ಮೋದಿ ವಾಷಿಂಗ್ಟನ್ ಡಿ.ಸಿ.ಗೆ ಭೇಟಿ ನೀಡಿದ ಸಂದರ್ಭದಲ್ಲಿ, ಪ್ರಧಾನಿಯವರ ಸಮ್ಮುಖದಲ್ಲಿ ನಮ್ಮನ್ನು ಸಾರ್ವಜನಿಕವಾಗಿ ಅವಮಾನಿಸಲಾಯಿತು ಮತ್ತು ನಮ್ಮ ದೇಶವನ್ನು 'ಸುಂಕ ದುರುಪಯೋಗ ಮಾಡುವವರು' ಎಂದು ಹಣೆಪಟ್ಟಿ ಕಟ್ಟಲಾಯಿತು. ಭಾರತೀಯ ವಲಸಿಗರನ್ನು ಪ್ರಾಣಿಗಳಂತೆ ನಡೆಸಿಕೊಳ್ಳಲಾಯಿತು ಮತ್ತು ಅಮೆರಿಕದಿಂದ ಕೈಗೆ ಕೋಳಗಳನ್ನು ಹಾಕಿ ಗಡೀಪಾರು ಮಾಡಲಾಯಿತು. ದುರದೃಷ್ಟವಶಾತ್, ವಿದೇಶಾಂಗ ಸಚಿವರು ಸಹ ಸಂಸತ್ತಿನಲ್ಲಿ ಅಮೆರಿಕ ನಮ್ಮ ವಲಸಿಗರ ಮೇಲೆ ನಡೆಸಿದ ಈ ಅಮಾನವೀಯ ವರ್ತನೆಯನ್ನು ಸಮರ್ಥಿಸಿಕೊಂಡರು" ಎಂದು ಮೂಲಗಳು ತಿಳಿಸಿವೆ.

"ಏಪ್ರಿಲ್ 3, 2025 ರಿಂದ, ಅಮೆರಿಕಕ್ಕೆ ರಫ್ತು ಮಾಡುವ ಭಾರತೀಯ ಸರಕುಗಳ ಮೇಲೆ ಶೇ. 27ಕ್ಕೂ ಹೆಚ್ಚು ಸುಂಕವನ್ನು ವಿಧಿಸಿದೆ. ಇದು ಭಾರತದ ವಿದೇಶಿ ವ್ಯಾಪಾರದ ಮೇಲೆ ತೀವ್ರ ಪರಿಣಾಮ ಬೀರುತ್ತದೆ. ಮತ್ತೊಂದೆಡೆ, ಅಮೆರಿಕವು ಅಮೆರಿಕದ ಸರಕುಗಳ ಮೇಲಿನ ಆಮದು ಸುಂಕವನ್ನು ಕಡಿಮೆ ಮಾಡಲು ಒತ್ತಾಯಿಸುತ್ತಿದೆ. ವಿಶೇಷವಾಗಿ ಕೃಷಿ, ಮದ್ಯಪಾನ ಪಾನೀಯಗಳು, ಆಟೋಮೊಬೈಲ್‌ಗಳು ಮತ್ತು ಔಷಧೀಯ ವಸ್ತುಗಳಂತಹ ಕ್ಷೇತ್ರಗಳ ಮೇಲೆ ಪರಿಣಾಮ ಬೀರುತ್ತದೆ. ಇದು ಭಾರತೀಯ ರೈತರಿಗೆ ಮಾತ್ರವಲ್ಲದೆ ನಮ್ಮ ಕ್ರಿಯಾತ್ಮಕ ದೇಶಿ ಆಟೋಮೊಬೈಲ್ ಮತ್ತು ಔಷಧೀಯ ಕೈಗಾರಿಕೆಗಳಿಗೂ ಗಂಭೀರ ಹೊಡೆತ ನೀಡುತ್ತದೆ" ಎಂದು ಮೂಲಗಳು ತಿಳಿಸಿವೆ.

# ಅನುದಾನ ದುರ್ಬಳಕೆ: ಟೈಪಿಸ್ಟ್ ಚನ್ನಮ್ಮ ಯಾದವ್ ಅಮಾನತ್ತು

ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಏ.8: ತನ್ನ ಸಂಬಂಧಿಕರ ಮೂಲಕ ಸರ್ಕಾರದ ಅನುದಾನವನ್ನು ದುರ್ಬಳಕೆ ಮಾಡಿಕೊಳ್ಳಲು ನಕಲಿ ಸಂಸ್ಥೆ ಹುಟ್ಟುಹಾಕಲು ಕುಮ್ಮಕ್ಕು ನೀಡಿದ ಆರೋಪದ ಮೇರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಟೈಪಿಸ್ಟ್ ಚನ್ನಮ್ಮ ವಿ. ಯಾದವ್ ಅವರನ್ನು ಇಲಾಖೆಯ ನಿರ್ದೇಶಕಿ ಕೆ.ಎಂ. ಗಾಯತ್ರಿ ಅವರು ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ಜೊತೆಗೆ ಚನ್ನಮ್ಮ ಅವರ ಪತಿ ವೆಂಕಟರಾವ್ ಯಾದವ್ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.



ಶ್ರೀಮತಿ ಚನ್ನಮ್ಮ ವಿ. ಯಾದವ್ ಅವರು ರಾಯಚೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಬೆರಳಚ್ಚುಗಾರ್ತಿಯಾಗಿದ್ದು, ನಿಯೋಜನೆ ಮೇರೆಗೆ ನಗರದ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಕಳೆದ 2012-2013ರಲ್ಲಿ ಬೀದರ್ ಜಿಲ್ಲೆ ಬಸವಕಲ್ಯಾಣ ತಾಲ್ಲೂಕಿನ ಮುಡಬಿವಾಡಿಯಲ್ಲಿ

(2ನೇ ಪುಟ ನೋಡಿ)

# ರಾಜ್ಯದ 6 ನಗರ ವಿಮಾನ ಸೇವೆ ಬಲವರ್ಧನೆಗಾಗಿ ಸಚಿವರ ಸುದೀರ್ಘ ಸಭೆ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಏ.8: ಕಲಬುರ್ಗಿ ಸೇರಿದಂತೆ ರಾಜ್ಯದ ಎರಡನೇ ಹಂತದ ಆರು ನಗರಗಳಿಗೆ ವಿಮಾನಯಾನ ಸೇವೆಯನ್ನು ಮತ್ತಷ್ಟು ಬಲಪಡಿಸುವ ಸಂಬಂಧ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಮತ್ತು ರಾಜ್ಯದ ಐಟಿಬಿಟಿ ಮತ್ತು ಗ್ರಾಮೀನಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಮಂಗಳವಾರ ಬೆಂಗಳೂರಿನ ಖನಿಜ ಭವನದಲ್ಲಿ ವಿವಿಧ ವಿಮಾನಯಾನ ಸಂಸ್ಥೆಗಳ ಪ್ರತಿನಿಧಿಗಳ (ಉನ್ನತಾಧಿಕಾರಿಗಳು) ಜತೆ ಸಭೆ ನಡೆಸಿದರು. ಕಲಬುರಗಿ, ಮೈಸೂರು, ಬೀದರ್, ಹುಬ್ಬಳ್ಳಿ, ಬೆಳಗಾವಿ, ವಿದ್ಯಾನಗರ (ಜಿಂದಾಲ್ ಟೌನ್ ಶಿಪ್) ಮತ್ತು ಉದ್ಘಾಟನೆಗೆ ಸಿದ್ಧವಾಗಿರುವ ವಿಜಯಪುರ ವಿಮಾನ ನಿಲ್ದಾಣಗಳಿಂದ ರಾಜ್ಯ ಸೇರಿದಂತೆ ಇತರ ರಾಜ್ಯಗಳಿಗೆ ವಿಮಾನಯಾನ ಸಂಪರ್ಕ ಹೆಚ್ಚಿಸುವ ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು. ಸಭೆಯಲ್ಲಿ ಇಂಡಿಗೋ, ಸ್ಟಾರ್ ಏರ್, ಏರ್ ಇಂಡಿಯಾ, ಆಕಾಶ್, ಅಲೈಯನ್ಸ್ ಏರ್ ವೇಸ್, ಸ್ಪೈಸ್ ಜೆಟ್ ಸೇರಿದಂತೆ ಎಲ್ಲ ಪ್ರಮುಖ ವಿಮಾನ ಯಾನ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ವಿಮಾನ ಸಂಚಾರಕ್ಕೆ ಕಲಬುರ್ಗಿ ಹೆಚ್ಚು ಲಾಭದಾಯಕ ಮಾರ್ಗವಾಗಿದ್ದರೂ ಅಲ್ಲಿಗೆ ಬೆಂಗಳೂರಿನಿಂದ ವಾರಕ್ಕೆ ಕೇವಲ ಮೂರು ದಿನ ಮಾತ್ರ ವಿಮಾನ ಸಂಚಾರ ಇದೆ. ಇದನ್ನು ಮತ್ತಷ್ಟು ಹೆಚ್ಚಿಸಬೇಕು. ಕೇವಲ ಬೆಂಗಳೂರು ಮಾತ್ರವಲ್ಲದೆ ರಾಜ್ಯದ ಇತರ ನಗರ ಹಾಗೂ ಅನ್ಯ ರಾಜ್ಯಗಳ ಪ್ರಮುಖ ನಗರಗಳಿಗೂ ಸಂಪರ್ಕ ಕಲ್ಪಿಸಬೇಕು ಎನ್ನುವ ಬೇಡಿಕೆಯನ್ನು ಇಬ್ಬರೂ ಸಚಿವರು ಸಭೆಯಲ್ಲಿ ಮಂಡಿಸಿದರು. ಇದಕ್ಕೆ ವಿಮಾನಯಾನ ಸಂಸ್ಥೆಗಳ ಪ್ರತಿನಿಧಿಗಳು ಸಕಾರಾತ್ಮಕ ವಾಗಿ ಸ್ಪಂದಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವ ಭರವಸೆ ನೀಡಿದರು.

ಎಂಆರ್‌ಓ ಸೇವೆಗೂ ಸಿದ್ಧ:

ವಿಮಾನ ಸಂಚಾರದ ಜತೆಗೆ ಈ ವಿಮಾನ ನಿಲ್ದಾಣಗಳನ್ನು ವಿಮಾನಗಳ ನಿರ್ವಹಣೆ ಮತ್ತು ರಿಪೇರಿ (ಎಂಆರ್‌ಓ) ಕೇಂದ್ರಗಳಾಗಿಯೂ ಬಳಸಬಹುದು. ದೊಡ್ಡ ದೊಡ್ಡ ನಗರಗಳಲ್ಲಿ ಈ ಸೇವೆ ದುಬಾರಿ ಕೂಡ ಆಗುತ್ತದೆ. ಹೀಗಾಗಿ ಬೆಳಿಗ್ಗೆ ಇಂತಹ ನಗರಗಳಿಂದ ಪ್ರಯಾಣಿಕರನ್ನು

(2ನೇ ಪುಟ ನೋಡಿ)

# ಬೆಲೆ ಏರಿಕೆ ಖಂಡಿಸಿ ಏ.12ರಂದು ಹೆಚ್‌ಡಿಕೆ ನೇತೃತ್ವದಲ್ಲಿ ಜೆಡಿಎಸ್ ಬೃಹತ್ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ ಶ್ರವಣಬೆಳಗೊಳ, ಏ.8: ಬೆಲೆ ಏರಿಕೆ ವಿರುದ್ಧ ಜನರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಏ.12ರಂದು ಬೆಂಗಳೂರು ನಗರದಲ್ಲಿ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ಹಮಿಕೊಳ್ಳಲಾಗುವುದು ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರು ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್? ಪಕ್ಷ ಆಡಳಿತಕ್ಕೆ ಬಂದು ಎರಡು ವರ್ಷ ತುಂಬುತ್ತಿದೆ. ರಾಜ್ಯ ಸರ್ಕಾರ ನಿರಂತರವಾಗಿ ಬೆಲೆ ಏರಿಕೆ ಬರೆಯ ಶಾಕ್ ನೀಡುತ್ತಿದೆ. ಇತ್ತಿ?ಚಿನ ದಿನಗಳಲ್ಲಿ ಬೆಲೆ ಏರಿಕೆ ವಿಚಾರಕ್ಕೆ ಸಂಬಂಧಿಸಿದಂತೆ ಸಾಕಷ್ಟು ಚರ್ಚೆಗಳು ರಾಜ್ಯದಲ್ಲಿ ಪ್ರಾರಂಭವಾಗಿದೆ ಎಂದು ಅವರು ಹೇಳಿದ್ದಾರೆ. ಬೆಂಗಳೂರು ನಗರದಲ್ಲಿ ಬೃಹತ್ ರ್‍ಯಾಲಿ ಮೂಲಕ ಬೆಲೆ ಏರಿಕೆ ಖಂಡಿಸಿ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗುವುದು. ನಮ ಮಿತ್ರ ಪಕ್ಷವಾದ ಬಿಜೆಪಿಯು ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ಮಾಡಿ ಸರ್ಕಾರಕ್ಕೆ ಎಚ್ಚರಿಕೆ ನೀಡುತ್ತಿದೆ ಎಂದಿದ್ದಾರೆ.



ವೈಯಕ್ತಿಕವಾಗಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಕುಟುಂಬವನ್ನು ಟಾರ್ಗೆಟ್ ಮಾಡುತ್ತಿದ್ದಾರೆ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಕೇತಗಾನಹಳ್ಳಿಯಲ್ಲಿ ಜಮೀನನ್ನು ಕುಮಾರಣ್ಣ ಅವರು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ತನಿಖೆಗೆ ಎಸ್ ಐ ಟಿ ತಂಡವನ್ನು ರಚನೆ ಮಾಡಿದ್ದಾರೆ. ಇದು ನ್ಯಾಯಾಲಯದ ಅಂಗಳದಲ್ಲಿದೆ, ನಮ ಆತ್ಮಸಾಕ್ಷಿಗೆ ಅನುಗುಣವಾಗಿ ಕುಮಾರಣ್ಣ ಅವರು ಸರ್ಕಾರಿ ಭೂಮಿಯನ್ನು ಒತ್ತುವರಿ ಮಾಡಿಲ್ಲ. ಅವರ ಹೆಸರಿಗೆ ಕಳಂಕ ತರಬೇಕೆಂಬ ಕಾಂಗ್ರೆಸ್?ನ ಉದ್ದೇಶ ಸಂಪೂರ್ಣ ವಿಫಲವಾಗುತ್ತದೆ ಎಂದು ನಿಖಿಲ್ ತಿಳಿಸಿದ್ದಾರೆ.

# ಮುದ್ರಾ ಯೋಜನೆ ಲಕ್ಷಾಂತರ ಜನರ ಕನಸುಗಳಿಗೆ ರೆಕ್ಕೆ ತಂದಿದೆ: ಮೋದಿ



ನವದೆಹಲಿ:ಏ.8: ಮುದ್ರಾ ಯೋಜನೆಯ ಸಾಲ ಲಕ್ಷಾಂತರ ಜನರ ಕನಸುಗಳಿಗೆ ರೆಕ್ಕೆ ತಂದಿದೆ. ಈ ಯೋಜನೆ ಇದೀಗ 10 ವರ್ಷ ಪೂರ್ಣಗೊಳಿಸಿದ್ದು, ಈ ಸಂಭ್ರಮಾಚರಣೆಯ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ನಿವಾಸದಲ್ಲಿ ದೇಶದ ವಿವಿಧ ಭಾಗಗಳಿಂದ

(2ನೇ ಪುಟ ನೋಡಿ)

# ವಾಟರ್ ಬಾಟಲ್ ಆರೋಗ್ಯಕ್ಕೆ ಹಾನಿಕರ; ಅಸುರಕ್ಷಿತ ಬಾಟಲ್ ನೀರು ಪೂರೈಕೆದಾರರ ವಿರುದ್ಧ ಕ್ರಮ: ದಿನೇಶ್ ಗುಂಡೂರಾವ್



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು:ಏ.8: ಮಿನರಲ್ ವಾಟರ್ ಬಾಟಲ್‌ಗಳಲ್ಲಿಯೂ ಬ್ಯಾಕ್ಟೀರಿಯಾ ಪತ್ತೆಯಾಗಿದ್ದು, "ಅಸುರಕ್ಷಿತ" ಮತ್ತು "ಕಳಪೆ ಗುಣಮಟ್ಟದ" ಬಾಟಲ್ ಕುಡಿಯುವ ನೀರು ಪೂರೈಸುವ ಕಂಪನಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಂಗಳವಾರ ಎಚ್ಚರಿಸಿದ್ದಾರೆ.

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಇತ್ತೀಚೆಗೆ ನಡೆಸಿದ ಸಮೀಕ್ಷೆಯ ಪ್ರಕಾರ, ಪರೀಕ್ಷಿಸಲಾದ 255 ಬಾಟಲ್ ನೀರಿನ ಮಾದರಿಗಳಲ್ಲಿ 72 ಬಾಟಲ್ ಗಳು ಮಾತ್ರ ಸುರಕ್ಷಿತವಾಗಿದ್ದು, ಉಳಿದ ಬಾಟಲಿಯಲ್ಲಿ ಬ್ಯಾಕ್ಟೀರಿಯಾ ಪತ್ತೆಯಾಗಿವೆ. ವಾಟರ್ ಬಾಟಲ್ ಆರೋಗ್ಯ-ಕ್ಕೆ ಹಾನಿಕರ ಎಂದು ತಿಳಿದುಬಂದಿದೆ. ಇಂದು ನಗರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತಾಡಿದ ದಿನೇಶ್ ಗುಂಡೂರಾವ್? ಅವರು, ವಿಶೇಷ ಅಭಿಯಾನದ ಭಾಗವಾಗಿ, ಆಹಾರ ಸುರಕ್ಷತೆ ಸಂಬಂಧಿಸಿದಂತೆ

(2ನೇ ಪುಟ ನೋಡಿ)

# ರಾಹುಲ್ ಗಾಂಧಿ ಪ್ರಧಾನಿ ಆಗಿದ್ದಿದ್ರೆ, ಎಲ್‌ಪಿಜಿ ಸಿಲಿಂಡರ್ ಬೆಲೆ 2,500 ರೂ ದಾಟುತ್ತಿತ್ತು: ಬಿವೈ ವಿಜಯೇಂದ್ರ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು:ಏ.8: ರಾಹುಲ್ ಗಾಂಧಿ ಅಂತವರು ಪ್ರಧಾನಿ ಇದ್ದಿದ್ರೆ, ಅಡುಗೆ ಅನಿಲದ ಬೆಲೆ ರೂ. 850 ರ ಬದಲಿಗೆ 2,500 ದಾಟುತ್ತಿತ್ತು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳುವ ಮೂಲಕ ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಅಡುಗೆ ಅನಿಲ ಸಿಲಿಂಡರ್ ಬೆಲೆ ಏರಿಕೆ ಕುರಿತು ಟೀಕೆಗಳ ಬಗ್ಗೆ ಪ್ರತಿಕ್ರಿಯಿಸಿದ ವಿಜಯೇಂದ್ರ, ರೂ. 50 ಹೆಚ್ಚಳದ ನಂತರವೂ ಗ್ಯಾಸ್ ಬೆಲೆ ರೂ. 850 ಆಗಿದೆ. ಆಗಸ್ಟ್ 2023ರಲ್ಲಿ ರೂ. 907 ಬೆಲೆಯಲ್ಲಿ ರೂ. 200 ಕಡಿಮೆಮಾಡಲಾಗಿತ್ತು. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಹೆಚ್ಚಳ ಹಿನ್ನೆಲೆಯಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಕೇಂದ್ರ ಸರ್ಕಾರ ಏರಿಕೆ ಮಾಡಿದೆ. ಆದರೆ, ಜನರಿಗೆ ಹೊರೆಯಾಗಲ್ಲ ಎಂದರು. ಉಜ್ವಲ ಯೋಜನೆಯಡಿ ಗುಡಿಸಲುಗಳಲ್ಲಿ ವಾಸಿಸುವ ಬಡವರೂ ಸಹ ಎಲ್‌ಪಿಜಿ ಬಳಸುವಂತಾಗಲು ಪ್ರಧಾನಿ ನರೇಂದ್ರ ಮೋದಿ ಕಾರಣ. ಮಾರ್ಚ್ 2023 ರಲ್ಲಿ ಗ್ಯಾಸ್ ಸಿಲಿಂಡರ್ ಬೆಲೆ ರೂ. 1107 ಇತ್ತು. ರಾಹುಲ್ ಗಾಂಧಿಯಂತಹವರು ಪ್ರಧಾನಿಯಾಗಿದ್ದರೆ ಸಿಲಿಂಡರ್ ಬೆಲೆ 2,500 ರೂ. ಆಗಿರುತಿತ್ತು ಎಂದು ಟೀಕಾ ಪ್ರಹಾರ



(2ನೇ ಪುಟ ನೋಡಿ)

# ಪಿಯುಸಿ ಫಲಿತಾಂಶದಲ್ಲಿ ಕಲ್ಯಾಣ ಕರ್ನಾಟಕದ ಕಳಪೆ ಸಾಧನೆ: ರಾಜಕಾರಣಿಗಳಿಗೆ ಜನರ ಹಿಗ್ಗಾಮುಗ್ಗಾ ತರಾಟೆ




ಮಲ್ಲಮ್ಮನುಡಿ ವಾರ್ತೆ ಬೀದರ. ಏ. 08 : ಕರ್ನಾಟಕ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು, ಕಲ್ಯಾಣ ಕರ್ನಾಟಕದ ಜಿಲ್ಲೆಗಳು ಕಳಪೆ ಸಾಧನೆ ಮಾಡಿವೆ. ಪ್ರಮುಖ ರಾಜಕಾರಣಿಗಳಾದ ಪ್ರಿಯಾಂಕ್ ಖರ್ಗೆ, ಈಶ್ವರ ಖಂಡ್ರೆ, ಶರಣಬಸಪ್ಪ ದರ್ಶನಾಪುರ, ಡಾ. ಶರಣಪ್ರಕಾಶ್ ಪಾಟೀಲ್.ಶಿವರಾಜ ತಂಗಡಗಿ, ಎನ್.ಎಸ್.ಬೋಸರಾಜು ಇರುವ ಜಿಲ್ಲೆಗಳಲ್ಲಿನ ಪಿಯುಸಿ ಫಲಿತಾಂಶದ ಸಾಧನೆಗೆ ಜನರ ತೀವ್ರ ಆಕ್ರೋಶ ಹೊರ ಹಾಕಿದ್ದಾರೆ. ರಾಜಕಾರಣಿಗಳ ಅನಾದಾರದಿಂದಲೇ ನಮ್ಮ ಭಾಗದ ಜಿಲ್ಲೆಗಳಲ್ಲಿನ ಮಕ್ಕಳು ನಿರೀಕ್ಷಿತ ಫಲಿತಾಂಶ ಪಡೆಯಲು ಆಗುತ್ತಿಲ್ಲ. ಜಿಲ್ಲೆಗಳು ಹಿಂದೆ ಬೀಳಲು ರಾಜಕಾರಣಿಗಳೇ ಕಾರಣ ಎಂದು ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡಿದ್ದಾರೆ. ಫಲಿತಾಂಶದ ಪ್ರತಿಯನ್ನು ಉಲ್ಟಾ

(2ನೇ ಪುಟ ನೋಡಿ)

# ವಸತಿ ರಹಿತರ ಆ್ಯಪ್ ಸರ್ವೆ ಕಾರ್ಯ ಪ್ರಾರಂಭ 43700 ಕುಟುಂಬಗಳ ಸರ್ವೆಗೊಳಪಟ್ಟು ಮೊದಲ ರ್‍ಯಾಂಕ್ ಪಡೆದ ಬೀದರ ಜಿಲ್ಲೆ:ಸಂಸದ ಸಾಗರ ಈಶ್ವರ ಖಂಡ್ರೆ

ಮಲ್ಲಮ್ಮನುಡಿ ವಾರ್ತೆ ಬೀದರ: ಏ.8: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ "ಸರ್ವರಿಗೂ ಸೂರು" ಕಲ್ಪಿಸುವ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಗ್ರಾಮೀಣ ಪ್ರದೇಶದ ನಿವೇಶನ ರಹಿತರ, ವಸತಿ ರಹಿತ ಕುಟುಂಬಗಳ ಸರ್ವೆ ಕಾರ್ಯ ಆರಂಭಗೊಂಡಿದೆ, ರಾಜೀವ್ ಗಾಂಧಿ ವಸತಿ ನಿಗಮದ ಎಪ್ರಿಲ್.8 ರ ಅಂಕಿ ಅಂಶಗಳ ಪ್ರಕಾರ ರಾಜ್ಯದಲ್ಲಿ ಬೀದರ ಜಿಲ್ಲೆಯು 43,700 ಕುಟುಂಬಗಳ ಸರ್ವೆಗೊಳಪಟ್ಟು ಮೊದಲ ರ್‍ಯಾಂಕ್ ಪಡೆದಿದೆ ಎಂದು ಬೀದರ ಲೋಕಸಭಾ ಸಂಸದರಾದ ಸಾಗರ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಬೀದರ ಜಿಲ್ಲೆಯಲ್ಲಿ 2024-25ನೇ ಸಾಲಿನ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ 40546 ಮನೆ ಹಂಚಿಕೆ ಗುರಿ ನೀಡಲಾಗಿದೆ. ಈ ಪೈಕಿ 14627 ಮನೆ ಮಂಜೂರಾತಿ ಪಡೆಯಲಾಗಿದ್ದು, ರಾಜ್ಯದಲ್ಲಿ ಮೊದಲನೆ ಸ್ಥಾನದಲ್ಲಿದ್ದೆವೆ. ಇಡೀ ದೇಶದಲ್ಲಿಯೇ ಮೊದಲ ಬಾರಿಗೆ ಆ್ಯಪ್ ಮೂಲಕ ಸರ್ವೆ ಕೈಗೆತ್ತಿ-ಕೊಂಡ ರಾಜ್ಯ ಎಂಬ ಹೆಗ್ಗಳಿಕೆಗೆ ಕರ್ನಾಟಕ ಪಾತ್ರವಾಗಿದೆ.

ಬೀದರ ಜಿಲ್ಲೆಯು ರಾಜ್ಯದಲ್ಲಿ ಮೊದಲನೆ ಸ್ಥಾನ ಪಡೆಯುವುದರಲ್ಲಿ, ಜಿಲ್ಲಾ ಪಂಚಾಯತಿಯ ವಸತಿ ಶಾಖೆಯ ಯೋಜನಾ ನಿರ್ದೇಶಕರು, ಸಹಾಯಕ ಯೋಜನಾಧಿಕಾರಿಗಳು, ಜಿಲ್ಲಾ ವಸತಿ ನೋಡಲ್ ಅಧಿಕಾರಿ ಹಾಗೂ ಸಿಬ್ಬಂದಿಗಳು, ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ, ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು(ಪಂ.ರಾ), ತಾಲ್ಲೂಕು ಪಂಚಾಯತ ವಸತಿ ನೋಡಲ್ ಅಧಿಕಾರಿ, ಪಂಚಾಯತ ಅಭಿವೃದ್ಧಿ ಅಧಿಕಾರಿ, ಗ್ರೇಡ್-1 &2 ಕಾರ್ಯದರ್ಶಿ, ದ್ವಿತಿಯ ದರ್ಜೆ ಲೆಕ್ಕ ಸಹಾಯಕರು, ಹಾಗೂ ಗ್ರಾಮ ಪಂಚಾಯತಿಯ ಸಿಬ್ಬಂದಿಗಳಾದ ಡಿ.ಇ.ಓ. ಕರ ವಸೂಲಿಗಾರರು ಇವರುಗಳ ಕಾರ್ಯ ಶ್ಲಾಘನೀಯ ಎಂದು ತಿಳಿಸಿದ್ದಾರೆ.

ಸ್ವಯಂ ಸಮೀಕ್ಷೆ: ಬೀದರ ಜಿಲ್ಲೆಯಲ್ಲಿ 10,471 ಕುಟುಂಬಗಳು ಸ್ವಯಂ ಸಮೀಕ್ಷೆ ಮಾಡಿದರೆ, 33,229 ಗ್ರಾಮ ಪಂಚಾಯತ ಸಿಬ್ಬಂದಿ ಸಹಕಾರದಿಂದ ಸಮೀಕ್ಷೆ ನಡೆದಿದೆ. ಇನ್ನೂ ಬಾಕಿ ಉಳಿದ ವಸತಿ ರಹಿತರು ಹಾಗೂ ನಿವೇಶನ ರಹಿತರು ಸಂಬಂದಪಟ್ಟ ದಾಖಲೆಗಳನ್ನು ಗ್ರಾಮ ಪಂಚಾಯತಿಗೆ ಸಲ್ಲಿಸಿ ವಸತಿ ರಹಿತರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳಬಹುದು ಅಥವಾ ವಸತಿ ರಹಿತರು/ನಿವೇಶನ ರಹಿತರು ತಾವೇ ಖುದ್ದಾಗಿ ಮೊಬೈಲ್ ಆಪ್ಪ ಮೂಲಕ ನೊಂದಣಿ ಮಾಡಿಕೊಳ್ಳಬಹುದಾಗಿದೆ. ಪ್ರತಿ ಐದು ವರ್ಷಕೊಮ್ಮೆ ರಾಜೀವಗಾಂಧಿ ವಸತಿ ನಿಗಮವು ವಸತಿ ಸರ್ವೆ ಕಾರ್ಯ ಮುಂದಾಗಿದ್ದು, 2017-18ರ ಬಳಿಕೆ ಈಗ ಮತ್ತೊಂದು ಸರ್ವೆ ಕಾರ್ಯ ಪ್ರಗತಿಯಲ್ಲಿದೆ. ಏಪ್ರಿಲ್ 30 ರವರೆಗೆರ ನಿವೇಶನರಹಿತ, ವಸತಿರಹಿತ ಕುಟುಂಬಸ್ಥರು ಸರ್ವೆದಲ್ಲಿ ಪಾಲ್ಗೊಂಡು ಸೂರು ಪಡೆದುಕೊಳ್ಳಲು ಸುವರ್ಣಾವಕಾಶವಿದೆ ಎಂದು ಸಂಸದರು ತಿಳಿಸಿದ್ದಾರೆ.

ಯಾರು ಅರ್ಹರು: ವಸತಿ ರಹಿತರು ಹಾಗೂ ನಿವೇಶನ ರಹಿತರು, ಕಚ್ಚಾ ಮನೆ ಹೊಂದಿರುವವರು, ಕುಟುಂಬ ವಾರ್ಷಿಕ ಆದಾಯ 1.80 ಲಕ್ಷಕ್ಕಿಂತ ಮೀರಿರಬಾರದು, ಆಯಾ ಜಿಲ್ಲಾ ಮತ್ತು ತಾಲ್ಲೂಕು ವ್ಯಾಪ್ತಿಯಲ್ಲಿ ವಸತಿ ನೋಡಲ್ ಅಧಿಕಾರಿಗಳನ್ನಾಗಿ ನಿಯೋಜಿಸಲಾಗಿದೆ. ಪಂಚಾಯತಿ ಮಟ್ಟದಲ್ಲಿ ಬಿಲ್ ಕಲೆಕ್ಟರ್, ಗ್ರೇಡ್-1 ಕಾರ್ಯದರ್ಶಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪಿಡಿಓ)ಗಳನ್ನು ಸರ್ವೆಕ್ಷಕರೆಂದು ನಿಯೋಜಿಸಲಾಗಿದೆ. ಅಲ್ಲದೆ ನಿವೇಶನರಹಿತ ಮತ್ತು ವಸತಿರಹಿತರಾಗಿದ್ದವರು ಸ್ವಯಂ ಸಮೀಕ್ಷೆಯೂ ನಡೆಸಬಹುದು. ಹಿಂದುಳಿದ ವರ್ಗ, ಸಾಮಾನ್ಯ ವರ್ಗದ ಫಲಾನುಭವಿಗಳಾಗಿದ್ದರೆ ಸುಸಜ್ಜಿತ ಮನೆ ನಿರ್ಮಾಣಕ್ಕೆ 1.20 ಲಕ್ಷ ರೂ. ಅನುದಾನ ನೀಡಿದರೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ 1.75 ಲಕ್ಷ ರೂ ಅನುದಾನ ನೀಡಲಾಗುತ್ತದೆ ಎಂದು ತಿಳಿಸಿದ್ದಾರೆ.

## ಒಂದನೇ ಪುಟದಿಂದ

# ರಾಜಕಾರಣಿಗಳಿಗೆ ಜನರ ಹಿಗ್ಗಾಮುಗ್ಗಾ ತರಾಟೆ

ಪೋಸ್ಟ್ ಮಾಡುವ ಮೂಲಕ ಈ ರೀತಿಯಲ್ಲಾದರೂ ನಮ್ಮ ಜಿಲ್ಲೆಗಳನ್ನು ಟಾಪ್ ಸ್ಥಾನದಲ್ಲಿ ನೋಡೋಣ ಎಂದು ಕಾಲೆಳೆದಿದ್ಧಾರೆ. ಕಲ್ಯಾಣ ಕರ್ನಾಟಕ ಭಾಗದವರೇ ಆಗಿರುವ ಪತ್ರಕರ್ತ ಮಲ್ಲಿಕಾರ್ಜುನ ನಾಲವಾರ ಅವರು ಫೇಸ್‌ಬುಕ್‌ನಲ್ಲಿ ಪೋಸ್ಟ್ ಒಂದನ್ನು ಪಿಯುಸಿ ಫಲಿತಾಂಶಕ್ಕೆ ಸಂಬಂಧಿಸಿ ಹಾಕಿದ್ದಾರೆ. ಪಿಯುಸಿ ಪರೀಕ್ಷೆ ಫಲಿತಾಂಶದಲ್ಲಿ ಯಾದಗಿರಿ ಟಾಪ್–32, ಕಲಬುರಗಿ– ಟಾಪ್ 31. ಜೈ ಕಲ್ಯಾಣ ಕರ್ನಾಟಕ, ಜೈ ಪಿಯು ಶಿಕ್ಷಣ, ಜೈ ಜನಪ್ರತಿನಿಧಿಗಳು ಎಂದು ಕಾಲೆಳೆದಿದ್ದಾರೆ.

ಕೊನೆಯ ಸ್ಥಾನದಲ್ಲಿ ಯಾದಗಿರಿ, ಇದಕ್ಕೂ ಮೊದಲಿನ ಕೊನೆಯ ಸ್ಥಾನದಲ್ಲಿ ಕಲಬುರಗಿ,. ರಾಯಚೂರು, ಬಳ್ಳಾರಿ, ಕೊಪ್ಪಳ, ಬೀದರ್ ಜಿಲ್ಲೆಗಳು ಇರುವ ಫಲಿತಾಂಶದ ಪಟ್ಟಿಯನ್ನು ಅವರು ಹಾಕಿದ್ದಾರೆ. ಅದೂ ತಲೆಕೆಳಗೆ ಹಾಕುವ ಮೂಲಕ ಆಕ್ರೋಶ ಹೊರ ಹಾಕಿದ್ದಾರೆ. ಇದಕ್ಕೆ ಭಾರೀ ಪ್ರತಿಕ್ರಿಯೆಯೇ ಬಂದಿದೆ.

ಅನಿಲ್ ಸ್ವಾಮಿ ಎಂಬುವವರು , ಪ್ರತಿವರ್ಷ ಇದೇ ಪೋಸ್ಟ್ ಶೇರ್ ಮಾಡ್ತಾನೆ ಇರಿ.. ವರ್ಷಗಳೇ ಬದಲಾದರೂ ಫಲಿತಾಂಶ ಬದಲಾಗಲ್ಲ ಎಂದು ಪ್ರತಿಕ್ರಿಯೆ ನೀಡಿದ್ದಾರೆ.

ಫೋಟೋ ಉಲ್ಟಾ ಹಾಕಿದ್ದಿರಿ ನೋಡ್ರಿ ಎಂದು ಪರಗೊಂಡ ಭೀಮನಗೌಡ ಕೇಳಿದಾಗ, ಉದ್ದೇಶ ಪೂರ್ವಕವಾಗಿ ಹಾಕಿದ್ದು ಫಲಿತಾಂಶ ಕಾಪಿ ಉಲ್ಟಾ ಮಾಡಿ ನೋಡಿಯಾದ್ರು ಟಾಪ್‌ಲ್ಲಿದ್ದೀವೆ ನೋಡಿ ಮಲ್ಲಿಕಾರ್ಜುನ ವ್ಯಂಗ್ಯವಾಡಿದ್ದಾರೆ. ಹಾಗಾದರೆ ನಿಮ್ಮ ಉದ್ದೇಶ ಸರಿಯಾಗಿದೆ. ಹೆಮ್ಮೆ ಪಡೋಣ ನಾಡಿಗೆ 2ನೆಯ ಅಧಿಕ ಕಮ್ ಕೊನೆಯ ಒಂದು ಸ್ಥಾನಕ್ಕಿಂತ ಕಡಿಮೆ ಸ್ಥಾನದಲ್ಲಿ ಇದ್ದೇವೆ ಅಂತಾ ಅಲ್ಲವೇ ಎಂದು ಪರಗೊಂಡ ಭೀಮನಗೌಡ ಪ್ರಶ್ನಿಸಿದ್ದಾರೆ. ಕಲಬುರಗಿ ಜಿಲ್ಲೆಗೆ ಕೊನೆಯ ಸ್ಥಾನ ಕೂದಲೆಳೆಯಲ್ಲಿ ತಪ್ಪಿದೆ ಎಂದು ಮಲ್ಲಿಕಾರ್ಜುನ ನಾಲವಾರ ಕಾಲಳೆದಿದ್ದಾರೆ.

ಯಾದಗಿರಿ ಮೊದಲು ಎಂದು ಎಂ.ವಿಜಯಭಾಸ್ಕರ್ ಅವರು ಪ್ರತಿಕ್ರಿಯೆ ನೀಡಿರುವುದಕ್ಕೆ ಸಕ್ರೆ ಹಂಚಿ, ಉಪನ್ಯಾಕರು, ಪಿಯು ಅಧಿಕಾರಿಗಳಿಗೆ ಎಂದು ನಾಲವಾರ ಮಾತಿನ ತಪರಾಕಿಯನ್ನೇ ನೀಡಿದ್ದಾರೆ.

ಮೊದಲು ಅವರು ಕಾಲ್ ತೆಗೆದುಕೊಳ್ಳಲಿ, ಆಮೇಲೆ ಸಕ್ಕರೆ, ಸಿಹಿ ಎಲ್ಲಾ ಎಂದು ವಿಜಯಭಾಸ್ಕರ್ ಹೇಳಿದರೆ, ಫಲಿತಾಂಶ ಸುಧಾರಣೆ ಚಿಂತನೆಗೆ ಮೀಟಿಂಗ್ ಮಾಡುತ್ತಿದ್ದಾರೆ. ನಾಟ್‌ರೀಚೆಬಲ್ ಇದ್ದಾರೆ ಎಂದು ಮಲ್ಲಿಕಾರ್ಜುನ್ ವ್ಯಂಗ್ಯವಾಡಿದ್ದಾರೆ

# ಕನಸುಗಳಿಗೆ ರೆಕ್ಕೆ ತಂದಿದೆ: ಮೋದಿ

ಬಂದ ಫಲಾನುಭವಿಗಳೊಂದಿಗೆ ಸಂವಾದ ನಡೆಸಿದರು. ಸಭೆಯಲ್ಲಿ ಉದ್ಯಮಿಗಳಿಂದ ಅಭಿಪ್ರಾಯ ಸಂಗ್ರಹಿಸಿದರು.

ಸಂವಾದದಲ್ಲಿ ಭಾಗವಹಿಸಿದ ಫಲಾನುಭವಿಗಳೊಂದಿಗೆ ಮಾತನಾಡಿದ ಅವರು, ಮುದ್ರಾ ಯೋಜನೆಯು ಕಳೆದ 10 ವರ್ಷಗಳಲ್ಲಿ ಲಕ್ಷಾಂತರ ಜನರ ಕನಸುಗಳಿಗೆ ರೆಕ್ಕೆ ತಂದಿದೆ. ಇದು ಕೇವಲ ಸಾಲದ ಯೋಜನೆಯಷ್ಟೇ ಅಲ್ಲ, ಇದು ಜನರ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರುವ ಸಾಧನವಾಗಿದೆ. ಸಣ್ಣ ಉದ್ಯಮಿಗಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಮತ್ತು ಆರ್ಥಿಕವಾಗಿ ಸ್ವತಂತ್ರರಾಗಲು ಈ ಯೋಜನೆ ಸಹಾಯ ಮಾಡಿದೆ ಎಂದು ಹೇಳಿದರು.

ಈ ಯೋಜನೆಯ ಮೂಲಕ ದೇಶದ ಆರ್ಥಿಕತೆಗೆ ಸಣ್ಣ ಉದ್ಯಮಿಗಳ ಕೊಡುಗೆಯನ್ನು ಶ್ಲಾಘಿಸಿದ ಅವರು, ಭವಿಷ್ಯದಲ್ಲಿ ಇದನ್ನು ಮತ್ತಷ್ಟು ವಿಸ್ತರಿಸುವ ತಮ್ಮ ಉದ್ದೇಶವನ್ನು ಸಹ ವ್ಯಕ್ತಪಡಿಸಿದರು. ನಮ್ಮ ಗುರಿ ಪ್ರತಿಯೊಬ್ಬ ಭಾರತೀಯನನ್ನು ಸಬಲರನ್ನಾಗಿ ಮಾಡುವುದು. ಮುದ್ರಾ ಯೋಜನೆಯ ಮೂಲಕ ನಾವು ಆ ದಿಕ್ಕಿನಲ್ಲಿ ದೊಡ್ಡ ಹೆಜ್ಜೆ ಇಟ್ಟಿದ್ದೇವೆ ಎಂದರು.ಕಾರ್ಯಕ್ರಮದಲ್ಲಿ ಭಾಗವಹಿಸಿದ ಫಲಾನುಭವಿಗಳು ತಮ್ಮ ಯಶಸ್ಸಿನ ಕಥೆಗಳನ್ನು ಹಂಚಿಕೊಂಡರು. ಉದಾಹರಣೆಗೆ, ಒಬ್ಬ ಮಹಿಳಾ ಉದ್ಯಮಿ ತಾನು ಮುದ್ರಾ ಸಾಲದ ಮೂಲಕ ತನ್ನ ಸಣ್ಣ ಉದ್ಯಮವನ್ನು ಆರಂಭಿಸಿ, ಇಂದು ಹಲವರಿಗೆ ಉದ್ಯೋಗ ಒದಗಿಸುವ ಸ್ಥಿತಿಗೆ ತಲುಪಿದ್ದೇನೆ ಎಂದು ತಿಳಿಸಿದರು. ಇನ್ನೊಬ್ಬ ಯುವ ಉದ್ಯಮಿ, ಪ್ರಧಾನ ಮಂತ್ರಿಯವರ ಈ ಯೋಜನೆ ನನಗೆ ಒಂದು ಹೊಸ ಜೀವನ ನೀಡಿದೆ. ಇದರಿಂದ ನನ್ನ ಕುಟುಂಬದ ಆರ್ಥಿಕ ಸ್ಥಿತಿ ಸುಧಾರಿಸಿದೆ ಮತ್ತು ನಾನು ಸ್ವಾವಲಂಬಿಯಾಗಿದ್ದೇನೆ ಎಂದು ತಮ್ಮ ಅನುಭವವನ್ನು ವಿವರಿಸಿದರು.ಬಳಿಕ ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡ ಪ್ರಧಾನಿ ಮೋದಿ, ಮುದ್ರಾ ಫಲಾನುಭವಿಗಳಲ್ಲಿ ಅರ್ಧದಷ್ಟು ಜನರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಒಬಿಸಿ ಸಮುದಾಯಗಳಿಗೆ ಸೇರಿದವರು ಮತ್ತು 70% ಕ್ಕಿಂತ ಹೆಚ್ಚು ಫಲಾನುಭವಿಗಳು ಮಹಿಳೆಯರಾಗಿರುವುದು ವಿಶೇಷವಾಗಿ ಉತ್ತೇಜನಕಾರಿಯಾಗಿದೆ. ಪ್ರತಿಯೊಂದು ಮುದ್ರಾ ಸಾಲವು ಘನತೆ, ಸ್ವಾಭಿಮಾನ ಮತ್ತು ಅವಕಾಶವನ್ನು ತರುತ್ತದೆ. ಆರ್ಥಿಕ ಸೇರ್ಪಡೆಯ ಜೊತೆಗೆ, ಈ ಯೋಜನೆಯು ಸಾಮಾಜಿಕ ಸೇರ್ಪಡೆ ಮತ್ತು ಆರ್ಥಿಕ ಸ್ವಾತಂತ್ರವನ್ನು ಸಹ ಖಚಿತಪಡಿಸಿದೆ.ಮುಂಬರುವ ದಿನಗಳಲ್ಲಿ ನಮ್ಮ ಸರ್ಕಾರವು ಬಲವಾದ ಪರಿಸರ ವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳುವತ್ತ ಗಮನಹರಿಸುವುದನ್ನು ಮುಂದುವರಿಸುತ್ತದೆ. ಅಲ್ಲಿ ಪ್ರತಿಯೊಬ್ಬ ಮಹತ್ವಾಕಾಂಕ್ಷಿ ಉದ್ಯಮಿಗೂ ಸಾಲ ಲಭ್ಯವಿರುತ್ತದೆ. ಅದು ಅವರಿಗೆ ಆತ್ಮವಿಶ್ವಾಸದಿಂದ ಮುಂದುವರಿಯಲು ಅವಕಾಶ ನೀಡುತ್ತದೆ ಎಂದು ಉಲ್ಲೇಖಿಸಿದ್ದಾರೆ.

## ನೀರು ಪೂರೈಕೆದಾರರ ವಿರುದ್ಧ ಕ್ರಮ: ದಿನೇಶ್ ಗುಂಡೂರಾವ್

ಕಳೆದ ಫೆಬ್ರವರಿಯಲ್ಲಿ 296 ಮಾದರಿಗಳ ವಾಟರ್ ಬಾಟಲ್‌ಗಳ ತಪಾಸಣೆ ಮಾಡಲಾಗಿದೆ. ಆ ಪೈಕಿ 72 ಮಾದರಿಗಳು ಸುರಕ್ಷಿತ, 95 ಅಸುರಕ್ಷಿತ, 88 ಕಳಪೆ ಗುಣಮಟ್ಟದ ಬಾಟೆಲ್‌ಗಳು ಅಂತ ಗುರುತಿಸಲಾಗಿದೆ. ಕೆಮಿಕಲ್, ಬಯೋಗ್ರಾಫಿಕಲ್ ರಿಪೋರ್ಟ್ ಕೂಡ ಬಂದಿದೆ ಎಂದು ತಿಳಿಸಿದರು."ಕೆಲವು ಬಾಟಲ್ ಗಳು ಅಸುರಕ್ಷಿತವಾಗಿವೆ ಮತ್ತು ಆರೋಗ್ಯಕ್ಕೆ ಅಪಾಯವನ್ನುಂಟುಮಾಡುತ್ತವೆ. ಇದು ತುಂಬಾ ಗಂಭೀರವಾದ ವಿಚಾರ. ನಾವು ಈಗ ಈ ಎಲ್ಲಾ ಬಾಟಲಿಗಳ ಪರೀಕ್ಷಿಸುತ್ತಿದ್ದೇವೆ ಮತ್ತು ಇಲ್ಲಿಯವರೆಗೆ ನಾವು ಕಂಡುಕೊಂಡದ್ದನ್ನು ವಶಪಡಿಸಿಕೊಂಡಿದ್ದೇವೆ. ನಾವು ಕಾನೂನು ಕ್ರಮ ಕೈಗೊಳ್ಳುತ್ತೇವೆ ಮತ್ತು ಈ ಅಸುರಕ್ಷಿತ ನೀರಿನ ಬಾಟಲಿಗಳನ್ನು ಪೂರೈಸುವ ಎಲ್ಲಾ ಕಂಪನಿಗಳ ವಿರುದ್ಧ ಪ್ರಕರಣ ದಾಖಲಿಸುತ್ತೇವೆ" ಎಂದು ಹೇಳಿದರು.ಇನ್ನು ಐಸ್‌ಕ್ರೀಂ, ಪನ್ನೀರ್ ಬಳಿಕ ಕೋವಾದಲ್ಲೂ ಕಲಬೆರಕೆ ಪತ್ತೆಯಾಗಿದೆ. ಜ್ಯೂಸ್, ಐಸ್ ಕ್ಯಾಂಡಿ ಮತ್ತು ಐಸ್ ಕ್ರೀಮ್ ತಯಾರಿಸುವ 92 ಆಹಾರ ಉತ್ಪಾದನೆ ಮತ್ತು ಮಾರಾಟ ಮಳಿಗೆಗಳು ನಿಯಮಗಳನ್ನು ಉಲ್ಲಂಘಿಸಿದ್ದು ಕಂಡುಬಂದ ನಂತರ ನೋಟಿಸ್ ನೀಡಲಾಗಿದೆ. ಆರು ಘಟಕಗಳಿಗೆ ಒಟ್ಟು 38,000 ರೂ. ದಂಡ ವಿಧಿಸಲಾಗಿದೆ ಎಂದು ಗುಂಡೂರಾವ್ ಹೇಳಿದರು.ಆಹಾರ ಇಲಾಖೆ ಐಸ್‌ಕ್ರೀಂ, ಪನ್ನೀರ್ ಹಾಗೂ ಕೋವಾ ಸ್ಯಾಂಪಲ್ ಪಡೆದು ಲ್ಯಾಬ್‌ಗೆ ಕಳುಹಿಸಿತ್ತು. ಪರೀಕ್ಷೆಯಲ್ಲಿ ಐಸ್‌ಕ್ರೀಂ, ಪನ್ನೀರ್ ಹಾಗೂ ಕೋವಾದಲ್ಲಿ ಅಪಾಯಕಾರಿ ರಾಸಾಯನಿಕ ಅಂಶ ಬಳಕೆ ಮಾಡಿರುವುದು ಗೊತ್ತಾಗಿದೆ. ಅಲ್ಲದೆ ಇದರ ಬಣ್ಣ ಕಾಪಾಡಲು ಯೂರಿಯಾ ಬಳಕೆ ಮಾಡಿರುವುದು ಕಂಡುಬಂದಿದೆ. ಇದರ ಬಳಕೆ ಹಾಗೂ ಸೇವನೆ ಕ್ಯಾನ್ಸರ್‌ಗೆ ಕಾರಣವಾಗಲಿದೆ ಎಂದು ತಜ್ಞರು ಎಚ್ಚರಿಕೆ ಕೊಟ್ಟಿದ್ದಾರೆ.ಹುರಿದ ಹಸಿರು ಬಟಾಣಿಗಳಲ್ಲಿ ಕೃತಕ ಬಣ್ಣಗಳ ಬಳಕೆಯನ್ನು ಪರಿಶೀಲಿಸಲು 115 ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಕಳುಹಿಸಲಾಗಿದೆ. ಇವುಗಳಲ್ಲಿ 46 ಮಾದರಿಗಳು ಸುರಕ್ಷಿತವೆಂದು ಕಂಡುಬಂದರೆ, 69 ಮಾದರಿಗಳು ಅಸುರಕ್ಷಿತವೆಂದು ಕಂಡುಬಂದಿದೆ. ಉಳಿದ ಮಾದರಿಗಳ ವಿಶ್ಲೇಷಣೆ ಇನ್ನೂ ನಡೆಯುತ್ತಿದೆ ಎಂದು ಅವರು ಹೇಳಿದರು.

ಹುರಿದ ಹಸಿರು ಬಟಾಣಿ ಮಾದರಿಗಳಲ್ಲಿ ಸುಮಾರು 60 ಪ್ರತಿಶತ ಅಸುರಕ್ಷಿತವಾಗಿವೆ ಎಂದು ಗಮನಿಸಿದ ಅವರು, ನಿಷೇಧಿತ ಕೃತಕ ಬಣ್ಣ ಬಳಸುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

"ನಾವು ಸಾರ್ವಜನಿಕರಿಗೆ ಮತ್ತು ತಯಾರಕರಿಗೆ ಅರಿವು ಮೂಡಿಸಲಿದ್ದೇವೆ ಮತ್ತು ಕರ್ನಾಟಕದಾದ್ಯಂತ ಸಿಹಿತಿಂಡಿಗಳು, ತಿಂಡಿಗಳು ಮತ್ತು ಅಂತಹುದೇ ವಸ್ತುಗಳನ್ನು ಉತ್ಪಾದಿಸುವ ಎಲ್ಲರಿಗೂ ಸಲಹೆಗಳನ್ನು ನೀಡಲಿದ್ದೇವೆ. ಈ ಸಲಹೆಗಳು ಹಾನಿಕಾರಕ ಅಭ್ಯಾಸಗಳನ್ನು ಎತ್ತಿ ತೋರಿಸುತ್ತವೆ ಮತ್ತು ನಿಷೇಧಿತ ಕೃತಕ ಬಣ್ಣ ಏಜೆಂಟ್‌ಗಳನ್ನು ಬಳಸುವುದನ್ನು ತಪ್ಪಿಸುವ ಅಗತ್ಯವನ್ನು ಒತ್ತಿ ಹೇಳುತ್ತವೆ" ಎಂದು ರಾವ್ ಹೇಳಿದರು.

"ನಾವು ಈ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಅದೇ ಸಮಯದಲ್ಲಿ ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದು ನಮ್ಮ ಆದ್ಯತೆಯಾಗಿದೆ. ಆಹಾರ ಉತ್ಪಾದನೆಯ ಗುಣಮಟ್ಟ ಸುಧಾರಿಸುವುದನ್ನು ನಾವು ಖಚಿತಪಡಿಸಿಕೊಳ್ಳಲು ಬಯಸುತ್ತೇವೆ. ಈ ಆಹಾರ ಪದಾರ್ಥಗಳನ್ನು ತಯಾರಿಸುವವರು ಅವು ಉತ್ತಮ ಗುಣಮಟ್ಟದ್ದಾಗಿವೆ ಎಂದು ಖಚಿತಪಡಿಸಿಕೊಳ್ಳಬೇಕು" ಎಂದು ಸಚಿವರು ಹೇಳಿದರು.

## ಬೆಲೆ 2,500 ರೂ ದಾಟುತ್ತಿತ್ತು: ಬಿವೈ ವಿಜಯೇಂದ್ರ

ನಡೆಸಿದರು.ಅಂತಾರಾಷ್ಟ್ರೀಯ ಕಚ್ಚಾ ತೈಲ ಬೆಲೆ ಏರಿಕೆಯ ಆಧಾರದ ಮೇಲೆ ಪೆಟ್ರೋಲ್, ಡೀಸೆಲ್ ಮತ್ತು ಗ್ಯಾಸ್ ಸಿಲಿಂಡರ್‌ಗಳ ಮೇಲೆ ಕೇಂದ್ರ ಸರ್ಕಾರ ನಿರ್ಧಾರಗಳನ್ನು ತೆಗೆದುಕೊಂಡಿದೆ. ಆದರೆ ಹಾಲಿನ ದರವನ್ನು ಹೆಚ್ಚಿಸಿದ್ದು ರಾಜ್ಯ ಸರ್ಕಾರ, ನೀವು ಕಸದ ಮೇಲೆ ತೆರಿಗೆ ವಿಧಿಸುತ್ತಿಲ್ಲವೇ? ನೀರಿನ ಶುಲ್ಕವನ್ನು ಹೆಚ್ಚಿಸಿಲ್ಲವೇ? ಅಂತಾರಾಷ್ಟ್ರೀಯ ಮಾರುಕಟ್ಟೆಯಿಂದ ಹಾಲನ್ನು ಆಮದು ಮಾಡಿಕೊಳ್ಳುತ್ತಿದ್ದೀರಾ?" ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರ 48 ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ್ದು, ಕೇವಲ ಬೆಲೆ ಏರಿಕೆಗಾಗಿಯೇ ಸಿಎಂ ಸಿದ್ದರಾಮಯ್ಯ ತಜ್ಞರ ಸಮಿತಿ ರಚಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ ಎಂದು ವಿಜಯೇಂದ್ರ ಟೀಕಿಸಿದರು.ಈ ರೀತಿ ಬೇರೆ ಯಾವುದೇ ರಾಜ್ಯ ಸರ್ಕಾರ ಜನರನ್ನು ಆರ್ಥಿಕ ಸಂಕಷ್ಟಕ್ಕೆ ತಳ್ಳಿಲ್ಲ. ಕರ್ನಾಟಕದಲ್ಲಿ ಕಾಂಗ್ರೆಸ್ ಮತ್ತು ಸಿದ್ದರಾಮಯ್ಯ ಅದನ್ನೇ ಮಾಡುತ್ತಿದ್ದಾರೆ. "ಈ ಸರ್ಕಾರಕ್ಕೆ ದಿಕ್ಕೇ ಇಲ್ಲದಂತಾಗಿದೆ. ಪೆಟ್ರೋಲ್, ನೀರು ಮತ್ತು ಡೀಸೆಲ್ ಬೆಲೆಯನ್ನು ಹೆಚ್ಚಿಸಿದ್ದಾರೆ. ಕಸದ ಮೇಲೂ ತೆರಿಗೆ ವಿಧಿಸುತ್ತಿದ್ದಾರೆ. ಹಾಲಿನ ಬೆಲೆ 9 ರೂ. ಏರಿಕೆಯಾಗಿದೆ. ಪೆಟ್ರೋಲ್ ಮತ್ತು ಡೀಸೆಲ್ ಮೇಲೆ 7.50 ರೂ. ತೆರಿಗೆ ಹೆಚ್ಚಿಸಿದ್ದಾರೆ" 48 ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುವ ಮೂಲಕ ಜನರಿಗೆ ಹೊರೆಯಾಗುತ್ತಿರುವವರು ಸಿದ್ದರಾಮಯ್ಯ ಅಥವಾ ಪ್ರಧಾನಿ ಮೋದಿಯೋ? ನೀವೇ ಹೇಳಿ," ಎಂದು ಜನರನ್ನು ಪ್ರಶ್ನಿಸಿದರು.

# ಚನ್ನಮ್ಮ ಯಾದವ್ ಅಮಾನತ್ತು

ರಾಧಾಕೃಷ್ಣ ಕಲಾ ಮತ್ತು ಸಾಂಸ್ಕೃತಿಕ ಗಡಿನಾಡು ಸೇವಾ ಸಂಸ್ಥೆಯ ಹೆಸರಿನ ಸಂಸ್ಥೆಯನ್ನು ಹುಟ್ಟು ಹಾಕಲು ಚನ್ನಮ್ಮ ಸಂಬಂಧಿಕರಿಗೆ ಸಹಾಯ ಮಾಡಿದ್ದರು. ಆ ಸಂಸ್ಥೆಗೆ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ 10 ಲಕ್ಷ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 2.50 ಲಕ್ಷ ಹಾಗೂ ಬೀದರ್ ಜಿಲ್ಲಾ ಪರಿಶಿಷ್ಟ ಪಂಗಡಗಳ ಸಾಂಸ್ಕೃತಿಕ ಸಂಸ್ಥೆಗೆ 2.50 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿತ್ತು.

ಅನುದಾನ ದುರುಪಯೋಗವಾದ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಅಲ್ಲದೇ, ವಿಧಾನಪರಿಷತ್ ಭರವಸೆಗಳ ಸಮಿತಿಯ ಅಧ್ಯಕ್ಷರು ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಶಿಫಾರಸು ಮಾಡಿದ್ದರು. ಅದರಂತೆ ಇಲಾಖೆ ಅಮಾನತು ಆದೇಶ ಹೊರಡಿಸಿದೆ. ಶ್ರೀಮತಿ ಚನ್ನಮ್ಮ ಪತಿ ವೆಂಕಟರಾವ್ ಯಾದವ್ ಚಿಂಚೋಳಿ ತಾಲ್ಲೂಕಿನ ದುತ್ತರಗಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕರಾಗಿದ್ದು, ಅವರ ವಿರುದ್ಧವೂ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಕರಣ ದಾಖಲಾಗಿದೆ.

# ಬಲವರ್ಧನೆಗಾಗಿ ಸಚಿವರ ಸುದೀರ್ಘ ಸಭೆ

ಹೊತ್ತೊಯ್ದು ರಾತ್ರಿ ನಿಲುಗಡೆಗೆ ವಾಪಸ್ಸಾಗಬಹುದು. ಬೇಕಾದರೆ ನಿಲುಗಡೆ ಶುಲ್ಕದಿಂದ ವಿನಾಯಿತಿ ನೀಡಬಹುದು ಎಂದು ಸಚಿವರು ವಿಮಾನಯಾನ ಸಂಸ್ಥೆಗಳ ಪ್ರತಿನಿಧಿಗಳಿಗೆ ಮನವರಿಕೆ ಮಾಡಿಕೊಟ್ಟರು. ಕಲಬುರ್ಗಿಯಲ್ಲಿ ಈ ವ್ಯವಸ್ಥೆ ಮಾಡಿಕೊಡಲು ತಾವು ಸಿದ್ಧ ಇರುವುದಾಗಿಯೂ ಸಚಿವ ಖರ್ಗೆ ಹೇಳಿದರು. ಇದಕ್ಕೆ ವಿಮಾನಯಾನ ಸಂಸ್ಥೆಗಳ ಪ್ರತಿನಿಧಿಗಳು ಸಕಾರಾತ್ಮಕವಾಗಿ ಸ್ಪಂದಿಸಿದರು.

ಮೈಸೂರು, ಕಲಬುರ್ಗಿ, ಬೀದರ್, ವಿದ್ಯಾ ನಗರ ವಿಮಾನ ನಿಲ್ದಾಣಗಳ ಉಪಯೋಗ ಗರಿಷ್ಠ ಮಟ್ಟದಲ್ಲಿ ಆಗುತ್ತಲೇ ಇಲ್ಲ. ಕಲಬುರ್ಗಿ–ಬೆಂಗಳೂರು–ಕಲಬುರ್ಗಿ ಮಾರ್ಗದಲ್ಲಿ ವಾರಕ್ಕೆ ಮೂರು ದಿನ ಮಾತ್ರ ವಿಮಾನ ಓಡಾಡುತ್ತಿದೆ. ಸ್ಟಾರ್ ಮತ್ತು ಅಲೈಯನ್ಸ್ ವಿಮಾನಯಾನ ಸಂಸ್ಥೆಗಳು ಮೂರು ವರ್ಷಗಳಿಂದ ಹಾರಾಟ ನಿಲ್ಲಿಸಿವೆ. ಕಲಬುರ್ಗಿ ಪ್ರವಾಸೋದ್ಯಮ ಕೇಂದ್ರವಾಗಿದೆ. ಇಲ್ಲಿಂದ ಪುಣೆ, ತಿರುಪತಿ, ಚೆನ್ನೈ, ಮುಂಬೈ ಹೀಗೆ ಹಲವು ಭಾಗಗಳಿಗೆ ವಿಮಾನ ಸಂಚಾರ ಆರಂಭಿಸಿದರೆ ಖಂಡಿತವಾಗಿಯೂ ಲಾಭ ತಂದುಕೊಡಲಿದೆ. ಇಂತಹ ಮಾರ್ಗಗಳಲ್ಲಿ ಸಂಸ್ಥೆಗಳು ಪ್ರಾಯೋಗಿಕ ಸೇವೆ ಕೈಗೊಂಡು ನೋಡಬಹುದು ಎಂದು ಅವರು ಹೇಳಿದರು.

ಮೈಸೂರು ವಿಮಾನ ನಿಲ್ದಾಣದಿಂದ ಕೂಡ ವೈಮಾನಿಕ ಸೇವೆ ಹೆಚ್ಚಾಗಬೇಕು. ಇಲ್ಲಿಂದ ಗೋವಾ, ಕೊಚ್ಚಿನ್, ಹೈದರಾಬಾದ್ ಮುಂತಾದ ನಗರಗಳಿಗೂ ವಿಮಾನಸೇವೆ ಆರಂಭಿಸಬಹುದು. ಬೆಳಗಾವಿಯಿಂದ ಈಗ ವಾರಕ್ಕೆ 44 ವಿಮಾನಗಳು ಓಡಾಡುತ್ತಿವೆ. ಇಲ್ಲಿಂದ ಪುಣೆಗೆ ವಿಮಾನಸೇವೆ ಆರಂಭಿಸಬೇಕೆಂಬ ಬೇಡಿಕೆ ಇದೆ. ಆದರೆ, ಲ್ಯಾಂಡಿಂಗ್ ಸಮಯದ ಅನನುಕೂಲತೆ ಇದೆ. ಇಲ್ಲಿಂದ ಚೆನ್ನೈ, ಕೊಚ್ಚಿ ಮುಂತಾದ ಕಡೆಗಳಿಗೆ ವಿಮಾನ ಸೇವೆಗೆ ಒಳ್ಳೆಯ ಅವಕಾಶವಿದ್ದು, ಕಲಬುರ್ಗಿಗೂ ಸೇವೆ ಆರಂಭಿಸಬಹುದು ಎಂದು ಅವರು ಅವರು ವಿವರಿಸಿದರು.

ಜಿಂದಾಲ್ ಟೌನ್–ಶಿಪ್ ನಲ್ಲಿರುವ ವಿಮಾನ ನಿಲ್ದಾಣದಿಂದ ಹೈದರಾಬಾದಿಗೆ ಮಾತ್ರ 2 ವಿಮಾನ ಓಡಾಡುತ್ತಿದೆ. ಇಲ್ಲಿಂದ ಬೆಂಗಳೂರಿಗೂ ವಿಮಾನಯಾನ ಸೇವೆ ಆರಂಭವಾಗಬೇಕು. ಜತೆಗೆ ಜಿಂದಾಲ್ ಟೌನ್ಶಿಪ್ ನಲ್ಲಿ ವಿದೇಶೀಯರೂ ಹೆಚ್ಚಾಗಿದ್ದಾರೆ. ಹತ್ತಿರದಲ್ಲೇ ವಿಶ್ವವಿಖ್ಯಾತ ಹಂಪೆ ಇದೆ. ಆದ್ದರಿಂದ ಬೆಂಗಳೂರು–ಜಿಂದಾಲ್–ಗೋವಾ ಈ ಮಾರ್ಗದಲ್ಲಿ ವಿಮಾನ ಓಡಾಡಿದರೆ ಪರಿಣಾಮಕಾರಿ ಎಂದು ಪಾಟೀಲ್ ಅವರು ತಿಳಿಸಿದರು.

ವಿಜಯಪುರ ವಿಮಾನ ನಿಲ್ದಾಣ ಉದ್ಘಾಟನೆಗೆ ಸಜ್ಜಾಗಿದೆ. ಕೇಂದ್ರಸರ್ಕಾರದ ಪರಿಸರ ಇಲಾಖೆಯ ಅನುಮತಿ ಬಾಕಿ ಇದೆ. ವಿಮಾನಯಾನ ಸಂಸ್ಥೆಗಳು ಈಗಿನಿಂದಲೇ ತಮ್ಮ ಸೇವೆ ಆರಂಭಿಸಲು ಸಿದ್ಧತೆ ಮಾಡಿಕೊಂಡಿರಬೇಕು. ಈ ವಿಮಾನ ನಿಲ್ದಾಣ ಆರಂಭವಾದರೆ ಮಹಾರಾಷ್ಟ್ರ, ತೆಲಂಗಾಣ, ಉತ್ತರ ಭಾರತದ ಹಲವು ನಗರಗಳಿಗೆ ವಿಮಾನಸೇವೆ ಸುಲಭವಾಗಲಿದೆ ಎಂದು ಅವರು ಸೂಚಿಸಿದ್ದಾರೆ.

ಕಾರಣಾಂತರಗಳಿಂದ ಸ್ಥಗಿತಗೊಂಡಿದ್ದ ಬೀದರ್–ಬೆಂಗಳೂರು ವಿಮಾನ ಸೇವೆಯನ್ನು ಸ್ಟಾರ್ ಏರ್ ಸಂಸ್ಥೆಯು ಇದೇ ತಿಂಗಳ 15ರಿಂದ ಪುನಾರಂಭ ಮಾಡಲಿದೆ ಎಂದು ಸಚಿವರು ಇದೇ ಸಂದರ್ಭದಲ್ಲಿ ತಿಳಿಸಿದರು. ವಿಮಾನ ನಿಲ್ದಾಣಗಳನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸಬೇಕಾದ ಅಗತ್ಯವಿದೆ. ಈ ಸಂಬಂಧ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುವಂತೆ ಸಚಿವ ಎಂ.ಬಿ.ಪಾಟೀಲ ಅವರು ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಇವೆರಡೂ ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳಾಗಲು ಅರ್ಹತೆ ಪಡೆದಿವೆ. ಪ್ರಯಾಣಿಕರ ದಟ್ಟಣೆ ಕೂಡ ಇದೆ. ಸದ್ಯ ಈ ಭಾಗದವರು ವಿದೇಶಕ್ಕೆ ಹೋಗಬೇಕಾದರೆ ಸಮೀಪ ಅಂದ್ರೆ ಗೋವಾಕ್ಕೆ ಹೋಗಬೇಕು. ಅದರ ಬದಲು ಈ ನಿಲ್ದಾಣಗಳನ್ನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಾಗಿ ಘೋಷಿಸ ಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಮೂಲಸೌಕರ್ಯ ಇಲಾಖೆ ಕಾರ್ಯದರ್ಶಿ ಎನ್ ಮಂಜುಳಾ, ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮದ ಮುಖ್ಯಸ್ಥೆ ಖುಷ್ಬೂ ಗೋಯೆಲ್, ಸಚಿವರ ತಾಂತ್ರಿಕ ಸಲಹೆಗಾರ ಅರವಿಂದ ಗಲಗಲಿ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಏ. 16ರ ಬೃಹತ್ ಉದ್ಯೋಗ ಮೇಳಕ್ಕೆ ಇಂದಿನವರೆಗೆ 9,000 ಕ್ಕೂ ಹೆಚ್ಚು ಅಭ್ಯರ್ಥಿಗಳ ನೋಂದಣಿ

ಕಲಬುರಗಿ,ಏ.8: ಕಲ್ಯಾಣ ಕರ್ನಾಟಕದ ಯುವಜನರಿಗೆ ಸಹಾಯವಾಗುವಂತೆ ಕಲಬುರಗಿ ನಗರದ ಖಾಜಾ ಬಂದೇನಾವಜ್ ದರ್ಗಾದ ಹತ್ತಿರ ಇರುವ ಕೆ.ಸಿ.ಟಿ. ಇಂಜಿನೀಯರಿಂಗ್ ಕಾಲೇಜಿನ ಆವರಣದಲ್ಲಿ ಏಪ್ರಿಲ್ 16 ರಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆವರೆಗೆ ಹಮ್ಮಿಕೊಳ್ಳಲಾಗಿರುವ ಕಲಬುರಗಿ ವಿಭಾಗದ ಬೃಹತ್ ಉದ್ಯೋಗ ಮೇಳದಲ್ಲಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅವರು ಮನವಿ ಮಾಡಿದರು.


ಇಂದು ಉದ್ಯೋಗ ಮೇಳದ ಪೂರ್ವ ತಯಾರಿ ಕಾರ್ಯಗಳ ಕುರಿತು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲೆಯ ಹಿರಿಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ ನಿರುದ್ಯೋಗ ಯುವಕ–ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಇದರ ಲಾಭ ಪಡೆಯುವಂತೆ ಪ್ರಚಾರ ಕಾರ್ಯ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರು, ಕೇಂದ್ರದ ರಾಜ್ಯಸಭೆ ವಿರೋಧ ಪಕ್ಷದ ನಾಯಕರು, ಡಾ.ಮಲ್ಲಿಕಾರ್ಜುನ ಖರ್ಗೆ, ಉಸ್ತುವಾರಿ ಸಚಿವರಾದ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕತಂತ್ರಜ್ಞಾನ ಸಚಿವರ ಪ್ರಿಯಾಂಕ ಖರ್ಗೆ ವೈದ್ಯಕೀಯ ಮತ್ತು ಕೌಶಲಾಭಿವೃದ್ಧಿ ಇಲಾಖೆ, ಸಚಿವ ಡಾ. ಶರಣಪ್ರಕಾಶ ಪಾಟೀಲ್ ಸೇರಿದಂತೆ ಈ ಭಾಗದ ಶಾಸಕರು, ಗಣ್ಯವ್ಯಕ್ತಿಗಳು, ಅಧಿಕಾರಿಗಳು ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ರಾಜ್ಯದ ಹಾಗೂ ಹೊರ ರಾಜ್ಯದ ಪ್ರತಿಷ್ಠಿತ ಕಂಪನಿಗಳು ಈ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳಲಿವೆ. ಬೆಂಗಳೂರಿನ 125 ಕಂಪನಿಗಳು ಸೇರಿದಂತೆ ಹೈದ್ರಾಬಾದ, ಮುಂಬೈ ಹಾಗೂ ಸ್ಥಳೀಯ ಸೇರಿ ಸುಮಾರು 216 ಕಂಪನಿಗಳು ಈಗಾಗಲೆ ಮೇಳದಲ್ಲಿ ಭಾಗವಹಿಸಲು ನೋಂದಣಿ ಮಾಡಿಕೊಂಡಿವೆ. ಇಂದಿನವರೆಗೆ ಸುಮಾರು 9 ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದು, ಸುಮಾರು 15 ಸಾವಿರ ನಿರೋದ್ಯೋಗಿಗಳು ಭಾಗವಹಿಸುವ ನಿರೀಕ್ಷೆ ಇದೆ, ಸ್ಥಳದಲ್ಲಿಯೇ ನೋಂದಯಿಸಿಕೊಳ್ಳಲು 20 ವಿಶೇಷ ಮಳಿಗೆಗಳನ್ನು ಸಿದ್ದಪಡಿಸಲಾಗುವುದು ಎಂದು ತಿಳಿಸಿದರು.

ಈಗಾಗಲೇ ರಚಿಸಿರುವ ವಿವಿಧ ಸಮಿತಿಗಳು ತಮಗೆ ನಿರ್ವಹಿಸಿದ ಎಲ್ಲ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಬೀದರ, ಯಾದಗಿರಿ, ರಾಯಚೂರು, ಹಾಗೂ ಕೊಪ್ಪಳ, ಬಳ್ಳಾರಿ, ವಿಜಯನಗರ ಜಿಲ್ಲೆಗಳಿಂದ ಬರುವಂತಹ ವಿದ್ಯಾರ್ಥಿಗಳಿಗೆ ಹೆಚ್ಚಿನ ಬಸ್‌ಗಳ ವ್ಯವಸ್ಥೆ ಮಾಡಲು ಸಾರಿಗೆ ಇಲಾಖೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಸೂಚನೆ ನೀಡಿದರು.

# ವಿಜಡಂ ಕಾಲೇಜಿಗೆ ಉತ್ತಮ ಫಲಿತಾಂಶ




ಬೀದರ. ಏ. 08 : ಈ ವರ್ಷದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ನಗರದ ವಿಜಡಂ ಪದವಿಪೂರ್ವ ವಿಜ್ಞಾನ ಕಾಲೇಜಿಗೆ ಉತ್ತಮ ಫಲಿತಾಂಶ ಲಭಿಸಿದೆ.

ಹುಮಾ ನಶ್ರ ಮಿರ್ಜಾ ಇಶ್ರತ್ ಉಲ್ಲಾ ಬೇಗ್ ಶೇ 93, ಮೊಹಮ್ಮದ್ ಶಾಕೀರ್ ಮೊಹಮ್ಮದ್ ಖಾದರ್ ಶೇ 90, ಮುನಾಝ್ಝ ಶಹಾಜ್ಮರೀನ್ ಚಾಂದ್ ಷರೀಫ್ ಶೇ 89, ಎಂ.ಡಿ. ಫೈಸಲ್ ಅಹ್ಮದ್ತಂದೆ ಫಿರೋಜ್ ಅಹ್ಮದ್ ಶೇ 88, ಸಫಾ ಶಮ್ಸ್ ಮೊಹಮ್ಮದ್ ಶಮ್ಸ್‌ಉದ್ದೀನ್ ಶೇ 88, ಅಬು ಸೂಫಿಯನ್ ಮೊಹಮ್ಮದ್ ಅಮ್ಜದ್ ಶೇ 86 ಅಂಕ ಪಡೆದಿದ್ದಾರೆ.

6 ವಿದ್ಯಾರ್ಥಿಗಳು ಅಗ್ರಶ್ರೇಣಿ ಹಾಗೂ 88 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ವಿಜಡಂ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮೊಹಮ್ಮದ್ ಆಸಿಫೋದ್ದಿನ್ ಕಾರ್ಯದರ್ಶಿ ಮೊಹಮ್ಮದ್ ಸಾಲಹೋದ್ದಿನ್ ಫರ್ಹಾನ್ ಹಾಗೂ ಮ್ಯಾನೇಜಿಂಗ್ ಟ್ರಸ್ಟಿ ಬುಷರಾ ಜಮಾಲ್ ಸಂತಸ ವ್ಯಕ್ತಪಡಿಸಿದ್ದಾರೆ.

## ಧರ್ಮಸ್ಥಳ ಟ್ರಸ್ಟ್ ವತಿಯಿಂದ ಮಾಶಾಸನ

# ಮಂಜೂರಾತಿ ಪತ್ರ ವಿತರಣೆ



ಸೇಡಂ. ಏ. 08. ತಾಲೂಕಿನ ವ್ಯಾಪ್ತಿ ಒಳಪಡುವ ಸೇಡಂ ವಲಯದ ನೊಲಾಗಲ್ಲಿ ಕಾರ್ಯಕ್ಷೇತ್ರದಲ್ಲಿ ಜ್ಞಾನವಿಕಾಸ ಕಾರ್ಯಕ್ರಮದಡಿಯಲ್ಲಿ ಹೊಸ ಮಾಶಾಸನ ಮಂಜೂರಾತಿ ಪತ್ರವನ್ನು ಮಾಶಾಸನ ಫಲನುಭವಿಯಾದ ಮಲ್ಲಿಕಾರ್ಜುನ ಅವರಿಗೆ ಜನ ಜಾಗೃತಿ ವೇದಿಕೆ ಉಪಾಧ್ಯಕ್ಷರು ಶಿವಯ್ಯಸ್ವಾಮಿ ಬಿಬ್ಬಳ್ಳಿ ಅವರು ವಿತರಣೆ ಮಾಡಿ ಪೂಜ್ಯರ ಹಾಗೂ ಮಾತೃಶ್ರೀ ಅಮ್ಮನವರ ಕ್ಷೇತ್ರದ ಸಮಾಜಮುಖಿ ಕಾರ್ಯಕ್ರಮ ಎಲ್ಲರಿಗೂ ಮಾದರಿ ಎಂಬಂತೆ. ಸರಕಾರ ಕೈಗೊಳ್ಳಬೇಕಾದ ಹಲವಾರು ಸಮುದಾಯ ಅಭಿವೃದ್ಧಿ ಕಾರ್ಯಕ್ರಮ ಇಡಿ ರಾಜ್ಯಕ್ಕೆ ಮಾದರಿ ಎಂದು ಯೋಜನೆ ಕಾರ್ಯ ಶ್ಲಾಘನೀಯ ಎಂದು ಅಭಿಪ್ರಾಯ ಪಟ್ಟರು.

ಹಾಗೂ ಈ ಕಾರ್ಯಕ್ರಮದಲ್ಲಿ ನವಿಕರಣಗೊಂಡ ಮಾಶಾಸನ ಮಂಜೂರಾತಿ ಪತ್ರವನ್ನು ಜನ ಜಾಗೃತಿ ವೇದಿಕೆ ಸದಸ್ಯರಾದ ಶ್ರೀ ರಾಜಶೇಖರ್.ಶರಣಪ್ಪ. ನಿಲಂಗಿ ಅವರು ವಿತರಣೆ ಮಾಡಿ,ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿರುದ್ಧಿ ಯೋಜನೆ ಕಾರ್ಯ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅತ್ಯಂತ ಪಾರದರ್ಶಕ ಮತ್ತು ಪ್ರಾಮಾಣಿಕತೆಯಿಂದ ಯಾವುದೇ ಫಲಪೇಕ್ಷೆ ಇಲ್ಲದೆ ತಲುಪಿಸುವ ವ್ಯವಸ್ಥೆ ಕಲ್ಪಿಸಿದ ಪೂಜ್ಯರ, ಅಮ್ಮನವರ ಕಾರ್ಯ ಎಲ್ಲರಿಗೂ ಮಾದರಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜ್ಞಾನವಿಕಾಸ ಸಮನ್ವಯ ಅಧಿಕಾರಿ ಶ್ರೀಮತಿ ಸುವರ್ಣಾ ಹೊನ್ನಳಿ, ರಿಕವರಿ ಮೇಲ್ವಿಚಾರಕರು ವಿರೂಪಾಕ್ಷ ಮಠ ,ಗ್ರಾಮೀಣ ಸಾಮಾನ್ಯ ಕೇಂದ್ರದ ಸೇವಾದಾರರು ಆಕಾಶ್ ಸೇವಾಪ್ರತಿನಿಧಿ ಶ್ರೀಮತಿ ಅಂಬಿಕಾ ಉಪಸ್ಥಿತರಿದ್ದರು.

# ಸಂಗಮೇಶ್ವರ ಪಿಯು ಕಾಲೇಜು: ರಾಧಿಕಾ ಚಂದ್ರಕಾಂತಗೆ 545 ಅಂಕ





ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.8:ಪಟ್ಟಣದ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಅಡಿಯಲ್ಲಿ ನಡೆಯುತ್ತಿರುವ ಸಂಗಮೇಶ್ವರ ಪಿಯು ವಿಜ್ಞಾನ, ಕಲಾ ಕಾಲೇಜಿಗೆ ದ್ವಿತೀಯ ಪಿಯು ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬಂದಿದ್ದು, ಕಲಾ ವಿಭಾಗದಲ್ಲಿ ರಾಧಿಕಾ ಚಂದ್ರಕಾಂತ 545, ವಿಜ್ಞಾನ ವಿಭಾಗದಲ್ಲಿ ಪ್ರಣೀತಾ ಶ್ರೀಮಂತ 538 ಅಂಕ ಪಡೆದು ಅಂಕ ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ ಎಂದು ಶೈಕ್ಷಣಿಕ ಮಾರ್ಗದರ್ಶಕ ಬಸವರಾಜ ಮೊಳಕೀರೆ ತಿಳಿಸಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಬಿರಾದಾರ ಅನುಷ್ಕಾ 533, ನಿಟ್ಟೂರೆ ಸಮೃದ್ಧಿ 527, ಆದಿತ್ಯ ಧನಕೆ 525, ಶಿವಾನಂದ ಸಂಗಮೇಶ 516, ಸರಸ್ವತಿ ಶರಣಯ್ಯಾ 513, ಶಿವಲೀಲಾ ಶಂಕರ 513, ಪ್ರಾಚಿ ಚಲವಾ 513, ವೈಷ್ಣವಿ ಓಂಕಾರ 511 ಅಂಕ ಪಡೆದು ಅಗ್ರ ಶ್ರೇಣಿಯಲ್ಲಿ ಪಾಸಾಗಿದ್ದಾರೆ. ಕಾಲೇಜಿನ ಒಟ್ಟು ಫಲಿತಾಂಶ 95.71 ಆಗಿದೆ.ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಡಾ.ಬಸವಲಿಂಗ ಪಟ್ಟದ್ದೇವರು, ಹಿರೇಮಠದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ, ಆಡಳಿತಾಧಿಕಾರಿ ಮೋಹನರೆಡ್ಡಿ, ಸ್ಥಳೀಯ ಕಮಿಟಿ ಅಧ್ಯಕ್ಷ ಧನರಾಜ ಬಂಬುಳಗೆ, ಪ್ರಾಚಾರ್ಯ ಪ್ರವೀಣ ಹಿರೇಮಠ ಸೇರಿದಂತೆ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

# ರೈತರು ಸಂಘಟಿತರಾಗಿ ಹೋರಾಟ

## ಮಾಡುವುದು ಅನಿವಾರ್ಯ: ಪ್ರವೀಣ ಕುಲಕರ್ಣಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.8:ರೈತರು ಸಂಘಟಿತರಾಗಿ ಹೋರಾಟ ಮಾಡುವುದು ಅನಿವಾರ್ಯವಾಗಿದೆ, ರೈತರ ಸಮಸ್ಯೆ ಸರಕಾರ–ಕ್ಕೆ ಮುಟ್ಟಿಸಲು ರೈತರು ಒಗ್ಗಟ್ಟಾಗುವುದು ಅವಶ್ಯಕ ಎಂದು ಕಮಲನಗರ ತಾಲೂಕ ರೈತ ಗಂಘದ ಅಧ್ಯಕ್ಷ ಪ್ರವೀಣ ಕುಲಕರ್ಣಿ ಹೇಳಿದರು.

ತಾಲೂಕಿನ ರಾಂಪುರ ಗ್ರಾಮದಲ್ಲಿ ರೈತ ಸಂಘ ಮತ್ತು ಹಸಿರು ಸೇನೆ ತಾಲೂಕ ಘಟಕ್ ಕಮಲನಗರ ವತಿಯಿಂದ ಸಂಘ ಬಲಿಷ್ಠ ಮಾಡುವ ಉದ್ದೇಶದಿಂದ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮದದಲ್ಲಿ ಮಾತನಾಡಿದರು.

ರೈತರು ಸಮಸ್ಯೆಗಳನ್ನೂ ಎದುರಿಸಲು, ಭ್ರಷ್ಟಾಚಾರ ಎದುರಿಸಲು, ಬೆಳೆಗಳ ನಿಗದಿತ ಬೆಲೆಯನ್ನು ಪಡೆಯಲು ಸಂಘಟಿತರಾಗಬೇಕು ಸಂಘದ ಜೊತೆ ಕೈ ಜೋಡಿಸ ಬೇಕು ಎಂದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ವಿಠಲ ಪಾಟೀಲ್, ಶ್ರೀರಂಗ ಪರಿಹಾರ, ರಾಜಕುಮಾರ ಪಾಟೀಲ್, ಯುವರಾಜ ಬಿರಾದಾರ, ಪ್ರಶಾಂತ ಖಾನಾಪುರೆ, ಭೀಮರಾವ ರಾಂಪುರೆ, ಸಚಿನ ದೇವಿದಾಸ, ಶಿವಕುಮಾರ ರಾಂಪುರೆ, ಸುನೀಲ ಗವಳಿ, ಧನರಾಜ್ ದೊಣಗಪುರೆ, ಪ್ರಕಾಶ ಸೇರಿದಂತೆ ಅನೇಕರು ಇದ್ದರು.

# ಆಧ್ಯಾತ್ಮಿಕ ಪ್ರವಚನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 8- ಮಹಾತ್ಮ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವದ ನಿಮಿತ್ತವಾಗಿ ಇಲ್ಲಿನ ಅಕ್ಕ ಮಹಾದೇವಿ ಕಾಲೇಜಿನ ಆವರಣದಲ್ಲಿ ದಿನಾಂಕ 10 ರಂದು ಮುಂಜಾನೆ 6 ಗಂಟೆಗೆ ಆಧ್ಯಾತ್ಮಿಕ ಪ್ರವಚನ ಉದ್ಘಾಟನೆಯ ಕಾರ್ಯಕ್ರಮದ ದಿವ್ಯ ಸಾನಿಧ್ಯ ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಡಾ. ಶಿವಾನಂದ ಮಹಾಸ್ವಾಮಿಜಿ. ದಿವ್ಯ ನೇತೃತ್ವ ಖೇಳಗಿ ಶ್ರೀ ಶಿವಲಿಂಗೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಲಿಂಗ ಸ್ವಾಮೀಜಿ. ಅನುಭವ ಮಂಟಪ ಟ್ರಸ್ಟಿನ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ದೇವರು. ಉದ್ಘಾಟನೆ ಅಭಿವೃದ್ಧಿ ಮಂಡಳಿ ಆಯುಕ್ತರಾದ ಜಗನ್ನಾಥ ರೆಡ್ಡಿ. ಅಧ್ಯಕ್ಷತೆ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಅಧ್ಯಕ್ಷರಾದ ಬಸವರಾಜ ಕೊರಕೆ. ಮುಖ್ಯ ಅತಿಥಿಗಳಾಗಿ ನಗರ ಸಭೆಯ ಪೌರಾಯುಕ್ತರಾದ ರಾಜು ಬಣಗಾರ. ಗೌರವ ಉಪಸ್ಥಿತಿ ಶ್ರೀ ಬಸವೇಶ್ವರ ದೇವಸ್ಥಾನ ವಿಶ್ವಸ್ಥ ಸಮಿತಿ ಅಧ್ಯಕ್ಷರಾದ ಶಶಿಕಾಂತ ದುರ್ಗೆ. ಕಾರ್ಯದರ್ಶಿಗಳಾದ ವಿವೇಕಾನಂದ ಹೂದಲೂರೆ ಸ್ವಾಗತಿಸುವರು. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಹಾಗೂ ವಿಶ್ವಸ್ಥ ಸಮಿತಿಯಿಂದ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :- ಹುಲಸೂರು ತಾಲೂಕಿನ ತೋಗಲೂರ ಗ್ರಾಮದಲ್ಲಿ ಶ್ರೀ ಜೈ ಹನುಮಾನ ಮೂರ್ತಿಗೆ ಬೆಳ್ಳಿ ಕವಚ ಧಾರಣೆ ಪ್ರವಚನ ಹಾಗೂ ಸಪ್ತಾಹ ಕಾರ್ಯಕ್ರಮದಲ್ಲಿ ಶಿವಶರಣೆ ಹೇಮ ರಡ್ಡಿ ಮಲ್ಲಮ್ಮ ಭಜನ ಮಂಡಳಿಯ ಅಧ್ಯಕ್ಷೆ ಗುಂಡಮ್ಮ ಶೇರಿಕಾರ. ಉಪಾಧ್ಯಕ್ಷರಾದ ಅನುಸೋಯ ಶೇರಿಕಾರ. ಸೂರೆಕಾ. ಲಕ್ಷ್ಮೀಬಾಯಿ ಸೇರಿಕಾರ. ಸರಸ್ವತಿ ರಡ್ಡಿ. ಸುರೇಕಾ ರಡ್ಡಿ. ಮಹಾದೇವಿ ರೆಡ್ಡಿ. ಸಂತೋಷ ರಡ್ಡಿ. ಪ್ರಕಾಶ ಶೇರಿಕಾರ. ನಾಗಶೆಟ್ಟಿ ಬಿರಾದಾರ ವಿಣಾದಾರಿ. ಸುನೀತಾ ಸುರೇಶ ರಡ್ಡಿ. ಶಿಲ್ಪಾ ರಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ )

# ಗುರು ಶಿಷ್ಯ ಪರಂಪರೆ ಅದ್ಭುತ ಕೊಡುಗೆ – ಹಾರಕೂಡ ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:- ಏ 8 ಗುರು ಶಿಷ್ಯ ಪರಂಪರೆ ಭಾರತ ಜಗತ್ತಿಗೆ ನೀಡಿದ ಅದ್ಭುತ ಕೊಡುಗೆ-ಯಾಗಿದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ 2011-12ನೇ ಸಾಲಿನ 5ನೇ ಬ್ಯಾಚ್ ವಿದ್ಯಾರ್ಥಿಗಳಿಂದ ಆಯೋಜಿಸಿದ ಗುರುವಂದನೆ ಹಾಗೂ 792ನೇ ತುಲಾಭಾರ ಸಮಾರಂಭದ ಪಾವನ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ತನ್ನ ಶಿಷ್ಯರಲ್ಲಿ ಗುಪ್ತವಾಗಿರುವ ಅಂತ: ಶಕ್ತಿಯನ್ನು ರುಜುವಾತಗೊಳಿಸಿ ಪರಿಪೂರ್ಣತೆಯಡೆಗೆ ಕೊಂಡೊಯ್ಯುವ ಧಿಶಕ್ತಿಯನ್ನು ಹೊಂದಿರುತ್ತಾರೆ ಗುರು.

ಒಂದು ಸಮಾಜ, ರಾಷ್ಟ್ರ ಅಲ್ಲದೆ ಇಡೀ ವಿಶ್ವವನ್ನು ಆಧ್ಯಾತ್ಮ ಕಕ್ಷೆಯಲ್ಲಿ ಪಥ ಸಂಚಲನ ಮಾಡುವಂತೆ ಮಾರ್ಗದರ್ಶನ ಮಾಡುವ ದಿವ್ಯ ಕಾರುಣ್ಯಮೂರ್ತಿಯಾಗಿ ಸದ್ದಿಲ್ಲದೆ ಸೇವೆಯಲ್ಲಿ ತೊಡಗಿರುವ ಗುರುವಿಗೆ ಭಾರತೀಯ ಸಂಸ್ಕೃತಿಯಲ್ಲಿ ಪರಮೋನ್ನತಸ್ಥಾನವಿದೆ.

ಗುರು ಪೀಠದ ಮೇಲಿನ ಅನನ್ಯ ಭಕ್ತಿಯಿಂದ ವಿದ್ಯಾರ್ಥಿ ಬಳಗದವರು ಸಲ್ಲಿಸಿದ ಗುರುವಂದನೆ ಅನುಕರಣೀಯುವಾಗಿದ್ದು ಎಲ್ಲರ ಬಾಳಲ್ಲಿ ಶ್ರೇಯಸ್ಸು ಕಂಗೊಳಿಸುವಂತೆ ಹಾರಕೂಡ ಧೀಶ ಹಾರೈಸಲಿ ಎಂದು ನುಡಿದರು.

ಶಿವಶಂಕರ ಬಿರಾದಾರ ಮಾತನಾಡಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಪಂಡಿತ ಪೂಜಾರಿ, ಪರಮೇಶ್ವರ ಹೊಳಕುಂದೆ, ಕಮಲಾಕರ ಹತ್ತರಗಾ, ಭೀಮಶ ಜೋಜನ, ಚನ್ನಪ್ಪ ನರೋಣಾ, ರಾಜಶೇಖರ ಮದರಿ, ವಿಜಯಕುಮಾರ ಸಂಗೋಳಗೆ, ಜ್ಯೋತಿ ಕೆರಗೋಟೆ, ಶಿವಾನಂದ ಪೂಜಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಅಲ್ಲಮಪ್ರಭು ಹಿರೇಮಠ ಸ್ವಾಗತಿಸಿದರು. ಅಂಬಾರಾಯ ಊಗಾಜಿ ನಿರೂಪಿಸಿದರು. ಜಗದೀಶ ಪೀರಜೆ ವಂದಿಸಿದರು.

# ಏಪ್ರಿಲ್ 10 ರಂದು ಶ್ರೀ ಮಹಾವೀರ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.08-ಕಲಬುರಗಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಪಂಚಾಯತ್ ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ಭಗವಾನ ಶ್ರೀ ಮಹಾವೀರ ಜಯಂತಿ 2025 ಏಪ್ರಿಲ್ 10 ರಂದು ಗುರುವಾರ ರಾತ್ರಿ 8 ಗಂಟೆಗೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು (ಕನ್ನಡದ ಭವನ ) ನಡೆಯುವುದು.

ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್.ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ , ಜೈನ್ ಸಮಾಜ ಜಿಲ್ಲಾ ಅಧ್ಯಕ್ಷ ಚಂದ್ರಮೊಹನ್ ಶಾಹ, ಸಂಪಾದಕರ ಜೈನ್ ಭೋಧಕ ಸೋಲಾಪುರ ಶ್ರೀ ಪಂಡಿತ ಮಹಾವೀರ ಶಾಸ್ತ್ರಿ ವಿಶೇಷ ಉಪನ್ಯಾಸ ನೀಡುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್ ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು.

# ಭೀರಲಿಂಗೇಶ್ವರ, ಮಾಳಿಂಗರಾಯರಿಗೆ ಮಹತ್ವದ ಇತಿಹಾಸವಿದೆ: ಬಂಡೆಪ್ಪ ಖಾಶೆಂಪುರ್



ಮಲ್ಲಮ್ಮ ನುಡಿ ವಾರ್ತೆ

ಬೀದರ್ :ಭೀರಲಿಂಗೇಶ್ವರ ಮತ್ತು ಮಾಳಿಂಗರಾಯ ದೇವರಿಗೆ ಮಹತ್ವದ ಹಾಗೂ ದೊಡ್ಡಮಟ್ಟದ ಇತಿಹಾಸವಿದೆ. ಮಾಳಿಂಗರಾಯರು ಹುಲಿಯ ಹಾಲು ತಂದು ಕೊಟ್ಟ ಇತಿಹಾಸ ಹೊಂದಿದ್ದಾರೆ ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಹೇಳಿದರು. ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಕೋಳಾರ (ಕೆ) ಗ್ರಾಮದ ಶ್ರೀ ಭೀರಲಿಂಗೇಶ್ವರ ಮಂದಿರದ ಆವರಣದಲ್ಲಿ ಭಾನುವಾರ ನಡೆದ ಶ್ರೀ ಭೀರಲಿಂಗೇಶ್ವರ ಕಳಸಾರೋಹಣ ಹಾಗೂ ಶ್ರೀ ಭೀರಲಿಂಗೇಶ್ವರ ಮತ್ತು ಶ್ರೀ ಮಾಳಿಂಗರಾಯರ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನಮ್ಮ ಭಾಗದಲ್ಲಿ ಭೀರಲಿಂಗೇಶ್ವರ ದೇವಸ್ಥಾನಗಳು ದೊಡ್ಡಮಟ್ಟದಲ್ಲಿ ಅಭಿವೃದ್ಧಿ ಹೊಂದಿಲ್ಲ. ಬೆಳಗಾವಿ, ಬೆಂಗಳೂರು ಭಾಗದಲ್ಲಿ ದೊಡ್ಡದೊಡ್ಡ ದೇವಸ್ಥಾನಗಳಿವೆ. ನಮ್ಮ ಭಾಗದಲ್ಲಿರುವ ದೇವಸ್ಥಾನಗಳು ಕೂಡ ಅಭಿವೃದ್ಧಿಯಾಗಬೇಕು. ಈ ಭಾಗದ ಜನರು ಎಲ್ಲರೂ ಸೇರಿ ಒಗ್ಗಟ್ಟಾಗಿ ಕೆಲಸ ಮಾಡಿಕೊಂಡು ಸಾಗಬೇಕು.

ಕೋಳಾರ (ಕೆ) ಗ್ರಾಮದಲ್ಲಿ ಎಲ್ಲಾ ಸಮಾಜದ ಜನರು ಸೇರಿ ಒಗ್ಗಟ್ಟಿನಿಂದ ಧಾರ್ಮಿಕ ಕಾರ್ಯಕ್ರಮಗಳನ್ನು ಮಾಡುತ್ತಿರುತ್ತಾರೆ. ಅವರಿಗೆ ನಾನು ಧನ್ಯವಾದಗಳನ್ನು ತಿಳಿಸುತ್ತೇನೆ. ದೇವರ ಕೆಲಸಗಳನ್ನು ನಾವು ಮಾಡಿದ್ದೇವೆ ಎಂದು ಹೇಳಿಕೊಳ್ಳುವವರು ದೊಡ್ಡವರಲ್ಲ, ಮಾಡಿಸಿಕೊಳ್ಳುವ ದೇವರು ದೊಡ್ಡವರು. ಅದರಂತೆಯೇ ನಮ್ಮ ಕೈಲಾದ ಸೇವೆಯನ್ನು ನಾವು ಮಾಡಿದ್ದೇವೆ. ಮುಂದೆ ಕೂಡ ಮಾಡುತ್ತೇವೆ ಎಂದು ಮಾಜಿ ಸಚಿವರಾದ ಬಂಡೆಪ್ಪ ಖಾಶೆಂಪುರ್ ರವರು ಭರವಸೆ ನೀಡಿದರು.

ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆರವರು ಮಾತನಾಡಿ, ಭೀರಲಿಂಗೇಶ್ವರರು ಹಾಗೂ ಮಾಳಿಂಗರಾಯರು ಶಿವನ ಸ್ವರೂಪರು. ಮಹಾತ್ಮರು ಸಮಾಜದ ಎಲ್ಲಾ ಜನರಿಗೆ ಒಳಿತು ಮಾಡಿದ್ದಾರೆ. ಮಹಾತ್ಮರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಒಗ್ಗಟ್ಟಾಗಿ ಸಾಗಿದಾಗ ಮಾತ್ರ ಸದೃಢ ಭಾರತ ನಿರ್ಮಾಣ ಸಾಧ್ಯ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ತಿಂಥಣಿಯ ಕನಕಗುರುಪೀಠದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಸಿದ್ದರಾಮನಂದಪುರಿ ಮಹಾಸ್ವಾಮಿಗಳು, ದೇವರ ಹೆಸರಿನಲ್ಲಿ ಪ್ರಾಣಿ ಬಲಿ ಕೊಡುವುದು ನಿಲ್ಲಬೇಕು. ಮಕ್ಕಳಿಗೆ ಒಳ್ಳೆಯ ಸಂಪ್ರದಾಯವನ್ನು ಕಲಿಸಿಕೊಡಬೇಕು. ನಮ್ಮ ಸಂಪ್ರದಾಯವನ್ನು ಉಳಿಸಿ ಬೆಳೆಸುವ ಕೆಲಸವನ್ನು ನಾವೆಲ್ಲರೂ ಮಾಡಬೇಕು ಎಂದರು.

ಪರಮಪೂಜ್ಯರಾದ ಹುಲಿಜಂತಿಯ ಶ್ರೀ ಮಾಳಿಂಗರಾಯ ಮಹಾರಾಜರು ಮಾತನಾಡಿ, ಕೋಳಾರದಲ್ಲಿ ಪ್ರತಿಷ್ಠಾಪನೆ ಮಾಡಲಾಗಿರುವ ಮಾಳಿಂಗರಾಯರ ವಿಗ್ರಹ ತುಂಬಾ ವಿಶೇಷವಾದ ವಿಗ್ರಹವಾಗಿದೆ. ಮಾಳಿಂಗರಾಯರು ಮತ್ತು ಭೀರಲಿಂಗೇಶ್ವರರು ಸಾಮಾನ್ಯ ದೇವರಲ್ಲ. ಧರ್ಮವನ್ನು ಉಳಿಸುವ ಕೆಲಸವನ್ನು ಅವರು ಮಾಡಿದ್ದಾರೆ ಎಂದು ಮಾಳಿಂಗರಾಯರ ಮತ್ತು ಭೀರಲಿಂಗೇಶ್ವರರ ಇತಿಹಾಸವನ್ನು ತಿಳಿಸಿಕೊಟ್ಟರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ತಿಂಥಣಿಯ ಕನಕಗುರುಪೀಠದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಸಿದ್ದರಾಮನಂದಪುರಿ ಮಹಾಸ್ವಾಮಿಗಳು, ಉಚ್ಚಾದ ಶ್ರೀ ಭೀರಲಿಂಗೇಶ್ವರ ಪಟ್ಟದ ದೇವರು ಮಠದ ಬಾಲ ತಪಸ್ವಿ ಪರಮಪೂಜ್ಯ ಶ್ರೀ ಶ್ರೀ ಶ್ರೀ ಗೋಪಾಲ ಮುತ್ಯಾರು, ಪರಮಪೂಜ್ಯರಾದ ಹುಲಿಜಂತಿಯ ಶ್ರೀ ಮಾಳಿಂಗರಾಯ ಮಹಾರಾಜರು ವಹಿಸಿದ್ದರು.

ಈ ಸಂದರ್ಭದಲ್ಲಿ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ, ಗ್ಯಾರಂಟಿ ಸಮಿತಿಯ ಜಿಲ್ಲಾಧ್ಯಕ್ಷರಾದ ಅಮೃತರಾವ್ ಚಿಮಕೋಡೆ, ಬಾಬುರಾವ್ ಮಲ್ಕಾಪೂರೆ, ಮಲ್ಲಿಕಾರ್ಜುನ ಬಿರಾದಾರ, ಮನ್ನಾನ್ ಶೇಠ್, ಬಸವರಾಜ ಮಾಳ್ಗೆ, ಕೆ.ಡಿ ಗಣೇಶ್, ತುಳಸಿರಾಮ್ ಉಜ್ಜೆ, ಶ್ರೀಕಾಂತ್ ಸ್ವಾಮಿ, ಬಂಡೆಪ್ಪ ಕೋಟೆ, ಸಿದ್ದರಾಮಪ್ಪ ಕಪಲಾಪೂರೆ, ರವಿ ದುರ್ಗೆ, ನಾಗಪ್ಪ, ವಿಜಯಕುಮಾರ್ ಡುಮ್ಮೆ, ಬೊಮ್ಮಗೊಂಡ ಚಿಟ್ಟಾವಾಡಿ, ಶಂಭು, ರಾಜು ಚಿಟ್ಟಾ, ಸಂತೋಷ ಜೋಳದಪಗೆ, ಪ್ರಶಾಂತ್ ಶೇರಿಕಾರ್, ದೀಪಕ್ ಚಿದ್ರಿ, ಲೋಕೋಶ್ ಮೇತ್ರೆ, ಸಂತೋಷ್ ಪಾಟೀಲ್, ಧನರಾಜ್, ಸಚಿನ್, ಅಣ್ಣಪಾಜಿ, ಕಲ್ಲಪ್ಪ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು, ದೇವಸ್ಥಾನ ಸಮಿತಿಯ ಮುಖಂಡರು, ಗೊಂಡ ಸಮಾಜದ ಪ್ರಮುಖರು, ಗ್ರಾಮಸ್ಥರು ಇದ್ದರು.

# ಕಚುಸಾಪ ರಾಜ್ಯ ಸಮ್ಮೇಳನ ನಾಳೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ-:-ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತಿನ ರಾಜ್ಯಮಟ್ಟದ 13ನೆಯ ಸಮ್ಮೇಳನವನ್ನು ದಿ.10 ಗುರುವಾರ ಬೆಳಿಗ್ಗೆ 10 ಗಂಟೆಗೆ ಅಫಜಲಪುರ ಹಿರೇಮಠದ ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರ ಸಾನಿಧ್ಯದಲ್ಲಿ ಶಾಸಕರಾದ ಶರಣು ಸಲಗರ ಉದ್ಘಾಟಿಸಲಿದ್ದು, ಸರ್ವಾಧ್ಯಕ್ಷರಾಗಿ ಶ್ರೀನಿವಾಸ ಸರಡಗಿಯ ಡಾ.ರೇವಣಸಿದ್ದ ಶಿವಾಚಾರ್ಯರು ಪಾಲ್ಗೊಳ್ಳುವರು. ನಿಕಟಪೂರ್ವ ಸರ್ವಾಧ್ಯಕ್ಷ

ತ್ರಿಪುರಾಂತಿನ ಪೂಜ್ಯ ಶ್ರೀ ಡಾ.ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯ ಸಮ್ಮುಖವಹಿಸುವರು ಇದೇ ಸಂದರ್ಭದಲ್ಲಿ ಘನಲಿಂಗ ರುದ್ರಮುನಿ ಜಾತ್ರಾ ಮಹೋತ್ಸವ ಅಂಗವಾಗಿ ಐದು ಜನ ಗಣ್ಯರಿಗೆ " ಅಭಿನವ ಘನಲಿಂಗ ಶ್ರೀ " ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ ಎಂದು ಗವಿಮಠದ ಪೂಜ್ಯಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯ ತಿಳಿಸಿದರು. ಇಲ್ಲಿನ ಶ್ರೀ ಮಠದಲ್ಲಿ ಮಂಗಳವಾರ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ಸಮ್ಮೇಳನದಲ್ಲಿ ವಿಚಾರಗೋಷ್ಠಿ, ಚುಟುಕು ವಾಚನ ಗೋಷ್ಠಿಯಲ್ಲಿ ನಾಡಿನ ಹೆಸರಾಂತ ಬರಹಗಾರರು, ಕವಿಗಳು ಭಾಗವಹಿಸುವರು ಜತೆಯಲ್ಲಿ ಸಂಗೀತ, ನೃತ್ಯವನ್ನು ಸ್ಥಳೀಯ ಪ್ರತಿಭೆಗಳಿಂದ ಏರ್ಪಡಿಸಲಾಗಿದೆ ಎಂದು ಹೇಳಿದರು. ಕಚುಸಾಪ ರಾಜ್ಯ ಸಂಚಾಲಕ ಕೃಷ್ಣಮೂರ್ತಿ ಕುಲಕರ್ಣಿ ಮಾತನಾಡಿ, ಸರಕಾರದ ಯಾವುದೇ ಅನುದಾನವಿಲ್ಲದೇ ನಾವು ನಾಡಿನ ಮಠಾಧೀಶರ ಹಾಗೂ ಸಾಹಿತ್ಯಾಸಕ್ತರ ಸಹಕಾರದಿಂದ ಕಳೆದ ಹದಿನೈದು ವರ್ಷಗಳಿಂದ ನಿರಂತರ ಕಾರ್ಯಕ್ರಮ ಹಮ್ಮಿಕೊಂಡಿದೆ. ನಾಡಿನ ಮಠಾಧೀಶ ಸಾಹಿತಿಗಳನ್ನು ಗುರುತಿಸಿ ಗೌರವಿಸಲಾಗುತ್ತಿದೆ, ಬರುವ ಜೂನ ತಿಂಗಳು ಕಾಸರಗೋಡು ಅಂತರರಾಜ್ಯ ಸಮ್ಮೇಳನದ ಸಿದ್ದತೆ ಮಾಡಲಾಗಿದೆ. ಪುಸ್ತಕ ದಾಸೋಹದ ಮೂಲಕ ನಾಡಿನ ಕೊಳಗೇರಿ ಶಾಲೆಗಳು, ಕಾರಾಗ್ರಹ ಮತ್ತು ಆಸಕ್ತರಿಗೆ ಉಚಿತ ಪುಸ್ತಕ ನೀಡಲಾಗುತ್ತಿದ್ದು, ಇದೂ ವರೆಗೆ ಮೂರು ಲಕ್ಷ ಸಾಹಿತ್ಯ ಪುಸ್ತಕಗಳನ್ನು ವಿತರಿಸಲಾಗಿದೆ ಎಂದು ಹೇಳಿದರು.

ಸಾಹಿತಿ, ಪರಿಸರ ಸಂರಕ್ಷಕ, ಕಚುಸಾಪ ಜಿಲ್ಲಾಧ್ಯಕ್ಷರಾದ ಸಂಗಮೇಶ ಎನ್ ಜವಾದಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿರಶೆಟ್ಟಿ ಪಾಟೀಲ. ಡಾ. ಶರಣಪ್ಪ ಗದಲೇಗಾಂವ. ಜೈರಾಜ ಕಮಾ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಮಹಿಳಾ ಘಟಕದ ಉಪಾಧ್ಯಕ್ಷೆ ಡಾ. ವಂದಾನರಮೇಶ ಉಪಸ್ಥಿತರಿದ್ದರು.

# ಹಿಂದುಳಿದ ವರ್ಗಗಳ ಅರ್ಹ ಅಬ್ಯರ್ಥಿಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಏ. 08-ಭಾರತಿಯ ಸೇನೆ ಇತರೆ ಯುನಿಫಾರ್ಮ ಸೇವೆಗಳಿಗೆ ಸೇರಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಕಲಬುರಗಿ ಜಿಲ್ಲಾ ಕೇಂದ್ರದಲ್ಲಿ ಉಚಿತವಾಗಿ ತರಬೇತಿ ನೀಡಲಾಗಿದೆ ಎಂದು ಕಲಬುರಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು ಪ್ರವರ್ಗ-1.2ಎ.3ಎ&3ಬಿ ಸೇರಿರಬೇಕು. ಅಭ್ಯರ್ಥಿಯು ಕಟುಂಬದ ಒಟ್ಟು ಗರಿಷ್ಟ ವಾರ್ಷಿಕ ಆದಾಯಮಿತಿ ಪ್ರವರ್ಗ-1ಕ್ಕೆ ರೂ.2.50 ಲಕಷ್ಗಳು ಹಾಗೂ ಪ್ರವರ್ಗ 2ಎ.3ಎ.ಗಳಿಗೆ ರೂ.1.00 ಲಕ್ಷಗಳು ಅಭ್ಯರ್ಥಿಯು 10ನೇ ತರಗತಿಯನ್ನು ಉತ್ತೀರ್ಣವಾಗಿದ್ದು ಪ್ರತಿ ವಿಷಯದಲ್ಲೂ ಕನಿಷ್ಟ 33 ಅಂಕಗಳು ಸರಾಸರಿ ಶೇ.45ರಷ್ಟು ಅಂಕಗಳನ್ನು ಪಡೆದಿರಬೇಕು.

ಅಬ್ಯರ್ಥಿಯ ವಯೋಮಿತಿ 17ರಿಂದ 20 ವರ್ಷದೊಳಗಿರಬೇಕು. 1-04-25 ರಿಂದ ಅನ್ವಯಿಸುವಂತೆ ಅಬ್ಯರ್ಥಿಯ ವಯಸ್ಸು 2005ರಿಂದ ಎಪ್ರೀಲ್ 2008ರ ನಡುವಿನ ಅವಧಿಯಲ್ಲಿ ಜನಿಸಿರಬೇಕು. ಕಲಬುರಗಿ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಣಾಧಿಕಾರಿಗಳ ಕಛೇರಿಗೆ ಖುದ್ದಾಗಿ ಅರ್ಜಿಯನ್ನು ನೂಂದಾಯಿತ ಅಂಚೆ ಮೂಲಕ ಸಲ್ಲಸಬಹುದು. ಹಾಗೂ ಅರ್ಜಯನ್ನು ಸಲ್ಲಸಲು ಇದೆ ಎಪ್ರಿಲ್ 27 ರಂದು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಈ ದೂರವಾಣಿ ಸಂಖ್ಯೆಗೆ 8095239730, 8105085410. ಸಂಪರ್ಕಿಸಬೇಕು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ್ ಬ್ಯಾಡ್ಮಿಂಟನ್ ಪಂದ್ಯದಲ್ಲಿ ನಾಗರಾಜ ನರಮುಂಡಿ ಪ್ರಥಮ ಸ್ಥಾನ ಪಡೆದು ರಾಜ್ಯಮಟಕ್ಕೆ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಏ.5 ಮತ್ತು 6 ರಂದು ಬೀದರನಲ್ಲಿ ನಡೆದ ಸರಕಾರಿ ನೌಕರರ ಕ್ರೀಡಾ ಕೂಟದಲ್ಲಿ ಬಾಲ್ ಬ್ಯಾಡ್ಮಿಂಟನ್ ಪಂದ್ಯದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟಕ್ಕೆ ಆಯ್ಕೆಯಾಗಿದ ತಂಡದ ನಾಯಕ ನಾಗರಾಜ ನರಮುಂಡಿ, ಉಪನಾಯಕ ಶ್ರೀ ಚಾಮರಾಜ ಶಿರಮುಂಡಿ , ಶ್ರೀ ಜೈಪಾಲರೆಡ್ಡಿ, ಶ್ರೀ ರಾಮರೆಡ್ಡಿ , ಝುರಣಪ್ಪ , ಮಲ್ಲಿಕಾರ್ಜುನ್ ಪಾಟಿಲ್ ಪಂದ್ಯದಲ್ಲಿ ಪಾಲ್ಗೊಂಡಿದ್ದ ಇವರಿಗೆ ಹುಮನಾಬಾದ ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರು ಸೂರ್ಯಕಾಂತ ಹಾಂವಶೆಟ್ಟಿ, ಕಾರ್ಯದರ್ಶಿ, ಸದಸ್ಯರು ಮತ್ತು ಚಿಟಗುಪ್ಪ ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರು ಕಾಶಿನಾಥ ಕಾರ್ಯದರ್ಶಿ ಸಂತೋಷ್ ಹಾಗೂ ಸಮಸ್ತ ದೈಹಿಕ ಶಿಕ್ಷಣ ಶಿಕ್ಷಕರು ಅಭಿನಂದಿಸಿದ್ದಾರೆ. ಇದೇ ಸಂದರ್ಭದಲ್ಲಿ ಸಚಿವ ರಹೀಂಖಾನ್‌ರವರು ಪ್ರಶಸ್ತಿ ಪ್ರಮಾಣ ಪತ್ರ ವಿತರಿಸಿದರು.



ಚಿಟಗುಪ್ಪ:- ಚಿಂಚೋಳಿ ತಾಲೂಕಿನ ಐನಾಪುರ್ ಸಿದ್ದಲಿಂಗೇಶ್ವರ ಸಂಸ್ಥಾನ ಹಿರೇಮಠ ಪಂಚಾಕ್ಷರ ದೇವರ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ನಡೆದ ಧರ್ಮ ಸಭೆಯಲ್ಲಿ ಚಿಟಗುಪ್ಪ ಪಟ್ಟಣದ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರು ಪೂಜ್ಯ ಶ್ರೀ ಪಂಚಾಕ್ಷರ ದೇವರಿಗೆ ಸನ್ಮಾನಿಸಿ ಗೌರವಿಸಿದರು. ಚಿಟಗುಪ್ಪ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಚಂದ್ರಕಾಂತ್ ಮಠಪತಿ, ಸೇರಿದಂತೆ ಇತರರು ಉಪಸ್ಥಿತರಿದ್ದರು ಪಂಚಾಕ್ಷರ ದೇವರು ಸಾಮಾಜಿಕ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರಿಗೆ ಸನ್ಮಾನಿಸಿ ಆಶೀರ್ವದಿಸಿದರು.(ಮಲ್ಲಮ್ಮ ನುಡಿ ಚಿತ್ರ)

# ಡಾ. ಗುರಮ್ಮಾ ಸಿದ್ದಾರೆಡ್ಡಿ ಕಾರ್ಯ ಶ್ಲಾಘನೀಯ: ಸಲಿಂ ಪಾಶಾ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.08:ಹುಟ್ಟುವುದು ಆಕಸ್ಮಿಕ,ಸಾಯುವುದು ಖಚಿತ. ಹುಟ್ಟು ಸಾವುಗಳ ಮಧ್ಯೆ ಇರುವ ಅಮೂಲ್ಯ ಜೀವನ ಮಹತ್ವದ್ದಾಗಿದೆ.ಸಮಾಜಕ್ಕಾಗಿ ಏನಾದರೂ ಮಾಡಿ ಹೆಸರು ಗಳಿಸಿಕೊಳ್ಳುವುದುಪವಿತ್ರಕಾರ್ಯ. ಇಂತಹ ಸೇವೆಯನ್ನು ಡಾ. ಗುರಮ್ಮಾ ಸಿದ್ದಾರೆಡ್ಡಿ ತಾಯಿಯವರುಮಾಡುತ್ತಿದ್ದಾರೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಲೀಂ ಪಾಶಾ ತಿಳಿಸಿದರು.

ಡಾ. ಎಸ್.ಎಸ್. ಸಿದ್ದಾ-ರೆಡ್ಡಿ ಫೌಂಡೇಶನ್ ಬೀದರ, ಭಾರತ್ ಸ್ಕೌಟ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಬೀದರ ಇವರ ಸಂಯುಕ್ತಾಶ್ರಯದಲ್ಲಿಡಾ.ಎಸ್. ಎಸ್.ಸಿದ್ದಾರೆಡ್ಡಿಯವರ 9ನೇ ವರ್ಷದ ಸ್ಮರಣಾರ್ಥವಾಗಿ 2023-24ನೇ ಸಾಲಿನ ರಾಜ್ಯ ಪುರಸ್ಕಾರ ಹಾಗೂ ಸ್ಕೌಟ್ ಮತ್ತು ಗೈಡ್ಸ್ ಮಕ್ಕಳಿಗೆ ಕರ್ನಾಟಕ ಸಾಹಿತ್ಯ ಸಂಘದ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಿದ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.



ಹಣ ಸಂಪಾದನೆ ಮಾಡಿ ಅದನ್ನು ಉಳಿಸುವ ಕಾರ್ಯ ಎಲ್ಲರೂ ಮಾಡುತ್ತಾರೆ. ಆದರೆ ಡಾ. ಗುರಮ್ಮಾ ಸಿದ್ದಾರೆಡ್ಡಿಯವರು ತಮ್ಮಲ್ಲಿರುವ ಸಂಪತ್ತನ್ನು ವಿದ್ಯಾರ್ಥಿಗಳಿಗಾಗಿ, ಸಮಾಜೋಧಾರ್ಮಿಕಕಾರ್ಯಗಳಿಗಾಗಿ ವ್ಯಯ ಮಾಡುತ್ತಿರುವುದು ಅಭಿನಂದನೀಯ. ಈ ಹಿಂದೆ ಎಂ.ಸಿ.ಮೋದಿಯುವರು ಸಾವಿರಾರು ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿ ಜನರ ಹೃದಯದಲ್ಲಿ ಅಚ್ಚಳಿಯದೆ ಉಳಿದಿದ್ದಾರೆ. ಅದೇ ರೀತಿ ಸಿದ್ದಾರೆಡ್ಡಿ ಕಣ್ಣಿನ ಆಸ್ಪತ್ರೆ ಹೆಸರು ಮಾಡಲಿ. ಇಂದು ಮಕ್ಕಳಿಗೆ ಡಾ. ಎಸ್. ಎಸ್.ಸಿದ್ದಾರೆಡ್ಡಿಅವರಸ್ಮರಣಾರ್ಥ ವಿದ್ಯಾರ್ಥಿಗಳಿಗೆರಾಜ್ಯಪುರಸ್ಕಾರ ನೀಡಿ ಪ್ರೋತ್ಸಾಹಿಸುತ್ತಿರುವುದು ಉತ್ತಮ ಕಾರ್ಯ ಎಂದು ಶ್ಲಾಘಿಸಿದರು.

ಭಾರತ ಸ್ಕೌಟ್ ಮತ್ತು ಗೈಡ್ಸ್ನ ರಾಜ್ಯ ಮುಖ್ಯ ಆಯುಕ್ತರಾದ ಪಿ.ಜಿ.ಆರ್.ಸಿಂಧ್ಯಾ ಮಾತನಾಡಿ ಡಾ. ಸಿದ್ದಾರೆಡ್ಡಿಯವರು ಬದುಕಿದ್ದಾಗಲೇ ಸ್ಕೌಟ್ ಮತ್ತು ಗೈಡ್ಸ್ನ ಕಾರ್ಯಕ್ಕೆ ತನು ಮನ ಧನದಿಂದ ಸಹಕಾರ ನೀಡಿದ್ದರು. ಅವರ ಹೆಗಲಿಗೆ ಹೆಗಲಾಗಿ ಜಿಲ್ಲೆಯಲ್ಲಿ ಡಾ. ಗುರಮ್ಮಾ ಸಿದ್ದಾರೆಡ್ಡಿಯವರು ಸ್ಕೌಟ್ ಮತ್ತು ಗೈಡ್ಸ್ನ ಏಳ್ಗೆಗೆ ಶ್ರಮಿಸುತ್ತಿದ್ದಾರೆ ಎಂದರು.

ಭಾರತ ಸ್ಕೌಟ್ ಮತ್ತು ಗೈಡ್‌ನ ಜಿಲ್ಲಾ ಮುಖ್ಯ ಆಯುಕ್ತೆ ಡಾ. ಗುರಮ್ಮಾ ಸಿದ್ದಾರೆಡ್ಡಿ ಮಾತನಾಡಿ ಸಿದ್ದಾರೆಡ್ಡಿಯವರ ಸ್ಮರಣಾರ್ಥವಾಗಿ ಇಂದು 150ಕ್ಕೂ ಹೆಚ್ಚು ಮಕ್ಕಳಿಗೆ ರಾಜ್ಯ ಪುರಸ್ಕಾರ ನೀಡಿ ಗೌರವಿಸಲಾಗಿದೆ. ಮಕ್ಕಳು ಉತ್ತಮ ನಾಗರಿಕರಾಗಿ ಬದುಕಬೇಕು. ಶಿಕ್ಷಣ, ಸಂಸ್ಕಾರ, ಸದ್ವಿನಯ ಅಳವಡಿಸಿಕೊಂಡು ಭಾರತದ ಹೆಸರು ವಿಶ್ವದಲ್ಲಿ ಪಸರಿಸಬೇಕೆಂಬುದು ನಮ್ಮ ಮೂಲಉದ್ದೇಶವಾಗಿದೆ.ಹೀಗಾಗಿ ಪ್ರತೀ ವರ್ಷ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವ ಕಾರ್ಯ ಮಾಡಲಾಗುತ್ತಿದೆ. ನಮ್ಮ ಮಕ್ಕಳು ಹಾಗೂ ಸೊಸೆ ಕೂಡಾ ನನಗೆ ಕೈಜೋಡಿಸಿರುವುದು ಸಮಾಜ ಸೇವೆ ಮಾಡುವ ನಮ್ಮ ಉತ್ಸಾಹ ಇಮ್ಮಡಿಗೊಂಡಿದೆ ಎಂದರು.

ವೇದಿಕೆ ಮೇಲೆ ಡಾ. ರಾಜಶ್ರೀ ವಿಶ್ವನಾಥರೆಡ್ಡಿ, ಬಾಬುರಾವ ನಿಂಬೂರೆ, ಅನೀಲ ಶಾಸ್ತ್ರೀ, ಲೀಲಾವತಿ ಚಾಕೋತೆ, ಡಾ. ವಿಕ್ರಮ ಸಿದ್ದಾರೆಡ್ಡಿ, ಡಾ. ಜಗನ್ನಾಥ ಹೆಬ್ಬಾಳೆ, ಡಾ. ಹಣಮಂತ ಭರಶೆಟ್ಟಿ,ಸಂಧ್ಯಾರಾಣಿ ಪಾಟೀಲ, ಮಂಗಲಾ ಭಾಗವತ, ಭಾರತ ಸ್ಕೌಟ್ ಮತ್ತು ಗೈಡ್ಸ್ನ ಜಿಲ್ಲಾ ಕಾರ್ಯದರ್ಶಿ ರಮೇಶ ತಿಬಶೆಟ್ಟಿ, ಪ್ರಮುಖರಾದ ಲಕ್ಷ್ಮಿ ಗಾದಗೆ, ಗೀತಾ ಗಡ್ಡಿ, ಭಾರತಿ ವಸ್ತ್ರದ, ಪುಣ್ಯವತಿ ವಿಸಾಜಿ, ಎಸ್.ಬಿ.ಕುಚಬಾಳ,ಕುಚಬಾಳ, ಬಸವ ಬಾಂಧವ್ಯ ಬಳಗದ ಬಾಬುರಾವ ದಾನಿ, ಮಹೇಶ ಮಜಗೆ,ಸಂಗಮೇಶ್ವರ ಜಾಂತೆ, ಶಂಕರರಾವ ಸಜ್ಜನಶೆಟ್ಟಿ, ಲಕ್ಷ್ಮಿ ಗಾದಗೆ,ಶ್ರೀದೇವಿ ಬಿರಾದಾರ, ಸಿದ್ದಾರೂಢ ಭಾಲ್ಕೆ ಸೇರಿದಂತೆ ಹಲವರು ಉಪಸ್ಥಿತಿದ್ದರು. ಕಲ್ಯಾಣರಾವ ಚಳಕಾಪುರೆ ನಿರೂಪಿಸಿದರು. ರಮೇಶ ತಿಬಶೆಟ್ಟಿ ಸ್ವಾಗತಿಸಿದರು. ಮಂಗಲಾ ಭಾಗವತ್ ವಂದಿಸಿದರು.

# ಗುರು ನಾನಕ ಶಾಲೆಯ ವಿದ್ಯಾರ್ಥಿಗಳಿಗೆ ಆರೋಗ್ಯ ಜಾಗೃತಿ ಕಾರ್ಯಗಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.08:8-4-2025, ಗುರು ನಾನಕ ಶಾಲೆಯೂ 50 ವರ್ಷ ಪೂರೈಸಿದ ಸೂವರ್ಣ ಮಹೋತ್ಸವದ ಸಂದರ್ಭದಲ್ಲಿ ನಗರದ ಬಸ್ ಸ್ಟಾಂಡ್ ಹತ್ತಿರವಿರುವ ಝಿರಾ ಫಂಕ್ಷನ್ ಹಾಲ್‌ನಲ್ಲಿ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಆರೋಗ್ಯ ಜಾಗೃತಿ ಕಾರ್ಯಗಾರ ಹಮ್ಮಿಕೊಳ್ಳಲಾಗಿತ್ತು.

ಹೈದ್ರಾಬಾದಿನ ಹದಿಹರೆಯದ ಆರೋಗ್ಯ ಅಕಾಡೆಮಿಯ ಉಪಾಧ್ಯಕ್ಷರು ಡಾ. ಅನೀತಾ ಬಿ. ಮತ್ತು ಹೈದ್ರಾಬಾದಿನ ತನವೀರ್ ಆಸ್ಪತ್ರೆಯ ನಿರ್ದೇಶಕರು ಮತ್ತು ಕಾರ್ಯದರ್ಶಿ ತೆಲಂಗಾಣಾ ನರ್ಸಿಂಗ್ ಹೋಂ ಅಸೋಸಿಯೇಶನ್ ಹೈದ್ರಾಬಾದನ ಡಾ. ಎಸ್. ನೌನೀಹಾಲ್ ಸಿಂಗ್ ಪಾಲ್ಗೊಂಡಿದ್ದರು.

ಡಾ. ಅನೀತಾ ಬಿ. ಅವರು ಮಾತನಾಡುತ್ತ ಜಂಕ್‌ಫೂಡ್ ತಿರಸ್ಕರಿಸಬೇಕು, ಒಳ್ಳೆಯ ಗುಣಮಟ್ಟದ ಆಹಾರ ಸೇವನೆ ಮಾಡಬೇಕು. 13 ರಿಂದ 19ರ ಒಯಸ್ಸಿನವರಿಗೆ ಅವರ ದೇಹದಲ್ಲಿ ಬದಲಾವಣೆ ಕಂಡುಬರುತ್ತವೆ. ಆದರೆ ಇದಕ್ಕೆ ಭಯಪಡುವ ಅವಶ್ಯಕತೆ ಇಲ್ಲಾ. ಏನಾದರೂ ಆರೋಗ್ಯದಲ್ಲಿ ಏರು-ಪೇರು ಕಂಡುಬಂದಲ್ಲಿ ಪಾಲಕರು ಮತ್ತು ಶಿಕ್ಷಕರ ಜೊತೆ ಹಂಚಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ಕೊಟ್ಟರು.

ಡಾ. ಎಸ್. ನೌನೀಹಾಲ್ ಸಿಂಗ್ ಮಾತನಾಡುತ್ತ ಸರಿಯಾದ ಸಮಯದಲ್ಲಿ ಊಟ ಮಾಡಬೇಕು. ವ್ಯಾಯಾಮ ಮತ್ತು ಯೋಗ ದಿನನಿತ್ಯ ಮಾಡಬೇಕು. ಇಲ್ಲದಿದ್ದಲ್ಲಿ ದಪ್ಪತನ ಮತ್ತು ಬೇರೆ ರೀತಿಯ ರೋಗಗಳು ಉತ್ಪತ್ತಿಯಾಗುತ್ತವೆ ಎಂದು ನುಡಿದರು. ಇದೇ ಸಂದರ್ಭದಲ್ಲಿ ರೋಡ್ ಸೆಫ್ಟಿ ಬಗ್ಗೆಯೂ ಜಾಗೃತಿ ಮೂಡಿಸಿದರು.

ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರು ಮಾತನಾಡುತ್ತ ನೀವು ದೈಹಿಕವಾಗಿ ಸದೃಢವಾಗಿದ್ದರೆ ಅದು ನಿಮ್ಮ ಮಾನಸಿಕ ಸಾಮರ್ಥ್ಯವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಮತ್ತು ನಿಮ್ಮ ಶೈಕ್ಷಣಿಕತೆಯನ್ನು ಸುಧಾರಿಸುತ್ತದೆ ಎಂದು ವಿವರಿಸಿದರು. ಪೋಷಕರು ಭಾಗವಹಿಸಿ ಇದರ ಲಾಭವನ್ನು ಪಡೆದುಕೊಂಡರು. ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಂಡು ಮಕ್ಕಳಿಗೆ ಜಾಗೃತಿ ಮೂಡಿಸಿರುವುದು ಒಂದು ಒಳ್ಳೆಯ ವೇದಿಕೆ ನಿರ್ಮಿಸಿಕೊಟ್ಟಿದ್ದೇವೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಶ್ರೀಮತಿ ನಲಿನಿ ಡಿ.ಜಿ., ಶ್ರೀ ಅಮಜದ ಅಲಿ,ಶ್ರೀ ಡೀನರಾದ ಹನುಮಾನ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಔರಾದ(ಬಿ), ಕಮಲನಗರದಲ್ಲಿ ನೂತನ ಕನ್ನಡ ಭವನ: ಶಾಸಕ ಪ್ರಭು ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಿ):ಏ.8: ತಾಲೂಕಿನ ಕನ್ನಡ ಭವನ ಚಿಕ್ಕದಾಗಿದ್ದು, ಕನ್ನಡ ಚಟುವಟಿಕೆಗಳನ್ನು ನಡೆಸಲು ಅನಾನುಕೂಲವಾಗುತ್ತಿರುವ ಬಗ್ಗೆ ಗಮನಕ್ಕೆ ಬಂದಿದೆ. ಕಮಲನಗರದಲ್ಲಿಯೂ ಕನ್ನಡ ಭವನ ನಿರ್ಮಿಸಬೇಕೆಂಬ ಬೇಡಿಕೆಯಿದ್ದು, ನಿವೇಶನಗಳು ಸಿಕ್ಕಲ್ಲಿ ಹೊಸ ಕನ್ನಡ ಭವನಗಳನ್ನು ನಿರ್ಮಿಸಲು ಸಿದ್ಧ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.



ಔರಾದ(ಬಿ) ಪಟ್ಟಣದ ಸಾಯಿ ಕಲ್ಯಾಣ ಮಂಟಪದಲ್ಲಿ ಜರುಗಿದ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಔರಾದ(ಬಿ) ತಾಲೂಕ ಪದಾಧಿಕಾರಿಗಳ ಪದಗ್ರಹಣ ಕಾರ್ಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ನಾನು ಓದುವ ಸಂದರ್ಭದಲ್ಲಿ ಊರಲ್ಲಿ ಕನ್ನಡ ಶಾಲೆಗಳಿರಲಿಲ್ಲ. ಹಾಗಾಗಿ ಮರಾಠಿ ಮಾಧ್ಯಮದಲ್ಲಿ ಓದಬೇಕಾಯಿತು. ನನ್ನಂತೆ ಅನೇಕ ಜನ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವುದರಿಂದ ವಂಚಿತರಾಗಿದ್ದಾರೆ. ಇಂತಹ ಪರಿಸ್ಥಿತಿ ಮುಂದಿನ ಪೀಳಿಗೆಗೆ ಬರಬಾರದು ಎಂಬ ಕಾರಣಕ್ಕೆ ಶಾಸಕನಾದ ನಂತರ ಕ್ಷೇತ್ರದೆಲ್ಲೆಡೆ ಕನ್ನಡ ಶಾಲೆಗಳನ್ನು ತಂದಿದ್ದೇನೆ. ಇಂದು ನಮ್ಮ ವಿದ್ಯಾರ್ಥಿಗಳು ಕನ್ನಡ ಮಾಧ್ಯಮದಲ್ಲಿ ಓದುತ್ತಿದ್ದಾ-ರೆ. ಔರಾದ(ಬಿ) ತಾಲ್ಲೂಕು ಕನ್ನಡಮವಾಗುತ್ತಿದೆ ಎಂದು ಸಂತೋಷ ವ್ಯಕ್ತಪಡಿಸಿದರು.

ಕನ್ನಡ ನಮ್ಮ ಮಾತೃಭಾಷೆ, ಕನ್ನಡದ ರಕ್ಷಣೆಗೆ ಎಲ್ಲರೂ ಪಣ ತೊಡಬೇಕು. ನಮ್ಮ ನೆಲ, ಜಲ, ಭಾಷೆ ಸಂಸ್ಕೃತಿಯನ್ನು ಉಳಿಸಲು ಪ್ರಯತ್ನಿಸಬೇಕು. ಎಲ್ಲರೂ ಕನ್ನಡ ಮಾಧ್ಯಮದಲ್ಲಿ ಓದಬೇಕು ಮತ್ತು ಕನ್ನಡದಲ್ಲಿಯೇ ಮಾತನಾಡಬೇಕು ಎಂದರು.

ಕನ್ನಡದ ಅಭಿವೃದ್ಧಿಗೆ ಸಾಹಿತ್ಯ ಪರಿಷತ್ತು ಉತ್ತಮ ಕೆಲಸಗಳನ್ನು ಮಾಡುತ್ತಿದೆ. ಜಿಲ್ಲಾಧ್ಯಕ್ಷ ಸುರೇಶ ಚನ್ನಶೆಟ್ಟಿ ಅವರ ನೇತೃತ್ವದಲ್ಲಿ ಉತ್ತಮ ಕೆಲಸ ಕಾರ್ಯಗಳಾಗುತ್ತಿವೆ. ನಿಕಟಪೂರ್ವ ಅಧ್ಯಕ್ಷ ಡಾ.ಶಾಲಿವಾನ್ ಉದಗೀರೆ ಚನ್ನಾಗಿ ಕೆಲಸ ಮಾಡಿದ್ದಾರೆ. ನೂತನ ಅಧ್ಯಕ್ಷರು ನಿಟಕಪೂರ್ವ ಅಧ್ಯಕ್ಷರ ಸಹಕಾರ ಪಡೆದು ಗಡಿ ಭಾಗದಲ್ಲಿ ಕನ್ನಡ ಕಟ್ಟುವ ಕೆಲಸವನ್ನು ಶ್ರದ್ದೆಯಿಂದ ಮಾಡಬೇಕು. ನಿಮ್ಮೊಂದಿಗೆ ನಾನಿದ್ದೀನಿ. ಕನ್ನಡ ಕೆಲಸಗಳಿಗೆ ನನ್ನ ಸಹಕಾರ ಸದಾ ಇರುತ್ತದೆ. ನಿರಾತಂಕವಾಗಿ ಕನ್ನಡ ಕೆಲಸಗಳನ್ನು ಮಾಡಿ ಎಂದು ನೂತನ ಪದಾಧಿಕಾರಿಗಳಿಗೆ ತಿಳಿಸಿದರು.

ಭಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯಗುರುಬಸವ ಪಟ್ಟದೇವರು ಮಾತನಾಡಿ, ಔರಾದ(ಬಿ) ತಾಲ್ಲೂಕಿನಲ್ಲಿ ಕನ್ನಡ ಬೆಳೆಯಲು ಶಾಸಕ ಪ್ರಭು ಚವ್ಹಾಣ ಅವರ ಪಾತ್ರ ಮಹತ್ವದ್ದಾಗಿದೆ. ಕನ್ನಡಕ್ಕಾಗಿ ಶ್ರಮಿಸಿದ್ದ ಪೂಜ್ಯ ಡಾ.ಚನ್ನಬಸವ ಪಟ್ಟದೇವರ ಹೆಸರನ್ನು ಜಿಲ್ಲಾ ರಂಗಮಂದಿರಕ್ಕೆ ಮರು ನಾಮಕರಣ ಮಾಡಿರುವುದು, ನೂತನ ಅನುಭವ ಮಂಟಪಕ್ಕೆ ಭೂಮಿ ಪೂಜೆ ನೆರವೇರಿಸಿರುವುದು ಸೇರಿದಂತೆ ಸಾಕಷ್ಟು ಮಹತ್ತರ ಕೆಲಸ ಕಾರ್ಯಗಳಾಗಿವೆ ಎಂದು ಸ್ಮರಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಸುರೇಶ ಚನ್ನಶೆಟ್ಟಿ ಮಾತನಾಡಿ, ಕನ್ನಡ ಬಗ್ಗೆ ವಿಶೇಷ ಒಲವು ಹೊಂದಿರುವ ಶಾಸಕ ಪ್ರಭು ಚವ್ಹಾಣ ಅವರು ಕನ್ನಡಕ್ಕಾಗಿ ಮಾಡಿರುವ ಕೆಲಸಗಳು ಸ್ಮರಣೀಯವಾಗಿವೆ. ಜಿಲ್ಲೆಯ ಮೊದಲ ಕನ್ನಡ ಭವನ ಔರಾದನಲ್ಲಿ ನಿರ್ಮಿಸಿದ್ದಾರೆ. ಜಿಲ್ಲಾ ಕನ್ನಡ ಭವನ ನಿರ್ಮಿಸಬೇಕೆಂಬುದು ಸುಮಾರು 50 ವರ್ಷಗಳ ಕನಸಾಗಿತ್ತು. ಅವರು ಸಚಿವರಾಗಿದ್ದ ಸಂದರ್ಭದಲ್ಲಿ ಅನುದಾನ ಒದಗಿಸಿ ಕಟ್ಟಡಕ್ಕೆ ಭೂಮಿ ಪೂಜೆ ನೆರವೇರಿಸಿದ್ದರು. ಕವಿ, ಸಾಹಿತಿಗಳನ್ನು ತಿರಸ್ಕಾರದಿಂದ ಕಾಣುವ ಸಂದರ್ಭದಲ್ಲಿ ಅವರ ಮನೆಗೆ ಹೋಗಿ ಗೌರವಿಸುವ ಅಪರೂಪದ ಶಾಸಕರಾಗಿದ್ದಾರೆ ಎಂದು ಹೇಳಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ವಿಜಯಕುಮಾರ ಸೊನಾರೆ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಕ್ಕಾಗಿ ಉತ್ತಮ ಕೆಲಸ ಕಾರ್ಯಗಳನ್ನು ಮಾಡುತ್ತಿದೆ. ಕನ್ನಡ ಉಳಿಯಬೇಕೆಂದರೆ ಪರಿಷತ್ತು ಹೋಬಳಿ ಮತ್ತು ಗ್ರಾಮ ಮಟ್ಟದಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಕನ್ನಡ ಶಾಲೆಗಳ ರಕ್ಷಣೆಗೆ ಮುಂದಾಗಬೇಕು ಎಂದರು.

ಆಶಯ ನುಡಿಗಳನ್ನಾಡಿದ ತಾಲ್ಲೂಕು ಕಸಾಪ ಅಧ್ಯಕ್ಷ ಬಿ.ಎಂ. ಅಮರವಾಡಿ, ಕನ್ನಡ ಅತ್ಯಂತ ಶ್ರೀಮಂತ ಭಾಷೆ. ಈ ಭಾಷೆಯ ಉಳಿವಿಗೆ ಎಲ್ಲರೂ ಶ್ರಮಿಸುವ ಅಗತ್ಯವಿದೆ. ಹಿಂದೆ ಕನ್ನಡಕ್ಕಾಗಿ ಕಸಾಪದಿಂದ ಸಾಕಷ್ಟು ಕೆಲಸಗಳಾಗಿವೆ. ಇನ್ನಷ್ಟು ಕೆಲಸಗಳಾಗಬೇಕಿದೆ. ಗಡಿ ಭಾಗವಾಗಿರುವ ಔರಾದ(ಬಿ)ನಲ್ಲಿ ಕನ್ನಡ ಕಟ್ಟುವ ಕೆಲಸವನ್ನು ಶ್ರದ್ಧೆ ಮತ್ತು ನಿಷ್ಠೆಯಿಂದ ಮಾಡುವೆ ಎಂದು ತಿಳಿಸಿದರು.

ತಾಲ್ಲೂಕು ಕಸಾಪ ನಿಕಟಪೂರ್ವ ಅಧ್ಯಕ್ಷ ಡಾ.ಶಾಲಿವಾನ ಉದಗೀ-ರೆ ನೂತನ ಅಧ್ಯಕ್ಷ ಬಿ.ಎಂ. ಅಮರವಾಡಿಗೆ ಧ್ವಜ ನೀಡುವ ಮೂಲಕ ಅಧಿಕಾರವನ್ನು ಹಸ್ತಾಂತರಿಸಿದರು. ನಂತರ ಮಾತನಾಡಿ, ಎಲ್ಲರೂ ಜೊತೆ-ಯಾಗಿ ಕನ್ನಡವನ್ನು ಕಟ್ಟುವ ಕೆಲಸ ಮಾಡೋಣ. ಈ ವರ್ಷ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳಲ್ಲಿ ತಾಲ್ಲೂಕು ಸಾಹಿತ್ಯ ಸಮ್ಮೇಳನಗಳನ್ನು ಆಯೋಜಿಸಬೇಕೆಂದು ಶಾಸಕರನ್ನು ಒತ್ತಾಯಿಸಿದರು.

ಔರಾದ(ಬಿ) ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಸರುಬಾಯಿ ಘೂಳೆ, ತಹಸೀಲ್ದಾರರಾದ ಮಹೇಶ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ ರಂಗೇಶ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಶಿವಕುಮಾರ ಕಟ್ಟೆ, ಕೋಶಾಧ್ಯಕ್ಷ ಶಿವಶಂಕರ ಟೋಕರೆ, ತಾಲ್ಲೂಕು ಕಸಾಪ ಗೌರವಾಧ್ಯಕ್ಷ ಡಾ.ವೈಜಿನಾಥ ಬುಟ್ಟೆ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಪಂಡರಿ ಆಡೆ, ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ಮುಕ್ತೆದಾರ, ಮೀಡಿಯಾ ಜರ್ನಲಿಸ್ಟ್ ಯುನಿಯನ್ ಅಧ್ಯಕ್ಷ ಸಂತೋಷ ಚ್ಯಾಂಡೇಶ್ವರೆ, ಚಿಂತಕ ಜಗನ್ನಾಥ ಮೂಲಗೆ, ಕಸಾಪ ಬೀದರ ಅಧ್ಯಕ್ಷ ಟಿ.ಎಂ.ಮಚ್ಚೆ, ಕಮಲನಗರ ಅಧ್ಯಕ್ಷ ಪ್ರಶಾಂತ ಮಠಪತಿ, ಬಾಬುರಾವ ದಾನಿ, ರಾಮಶೆಟ್ಟಿ ಪನ್ನಾಳೆ, ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ಶಿವಕುಮಾರ ಘಾಟೆ, ಜಯದೇವಿ ತೇಲಿ, ಅಂಬಿಕಾ ಕೋತಮಿರ್, ಓಂಪ್ರಕಾಶ ದಡ್ಡೆ, ಡಾ.ಮನ್ಮಥ ಡೋಳೆ, ಸೂರ್ಯಕಾಂತ ಸಿಂಗೆ, ವಿಶ್ವನಾಥ ಬಿರಾದಾರ, ಮಹಾನಂದಾ ಎಂಡೆ, ಎಸ್.ಕೆ ಅಖಿಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ತಾಲ್ಲೂಕು ಕಸಾಪ ಗೌರವ ಕಾರ್ಯದರ್ಶಿ ಮಲ್ಲಿಕಾರ್ಜುನ ಟಂಕಸಾಲೆ ನಿರೂಪಿಸಿದರು. ಜಗನ್ನಾಥ ದೇಶಮುಖ ವಂದಿಸಿದರು. ಎಕಲಾರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ನೃತ್ಯ ಪ್ರದರ್ಶನ ನೀಡಿ ರಂಜಿಸಿದರು.

# ಜೊಳದಾಪಕಾ: ಅಂಗನವಾಡಿ ಕಾರ್ಯಕರ್ತೆ ವಿರುದ್ಧ ಕ್ರಮಕ್ಕೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.8: ತಾಲ್ಲೂಕಿನ ಜೊಳದಾಪಕಾ ಗ್ರಾಮದ ಸಿ ಅಂಗನವಾಡಿ ಕೇಂದ್ರದಲ್ಲಿ ಖಾಲಿ ಇರುವ ಅಂಗನವಾಡಿ ಸಹಾಯಕಿಯ ಹುದ್ದೆಯ ನೇಮಕಕ್ಕೆ ಅಂಗನವಾಡಿ ಕಾರ್ಯಕರ್ತೆ ಆಶಾಬೇಗಂ ಅವರು ಪರಿಶಿಷ್ಟ ಪಂಗಡದವರ ಬಳಿ ಹಣ ಪಡೆದಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಪರಿಶಿಷ್ಟರು ಹೆಚ್ಚಾಗಿ ವಾಸವಿರುವ ಏರಿಯಾದಲ್ಲಿ ಉದ್ದೇಶಪೂರ್ವಕವಾಗಿ ಪರಿಶಿಷ್ಟ ಪಂಗಡದವರು ಹೆಚ್ಚಾಗಿದ್ದಾರೆ ಎಂಬ ತಪ್ಪು ಮಾಹಿತಿಯನ್ನು ಅಂಗನವಾಡಿ ಕಾರ್ಯಕರ್ತೆ ಮೇಲಧಿಕಾರಿಗಳಿಗೆ ಸಲ್ಲಿಸಿದ್ದಾರೆ.

ಆ ಮೂಲಕ ಪರಿಶಿಷ್ಟರಿಗೆ ದೊರಕಬೇಕಿದ್ದ ಸಹಾಯಕಿಯ ಹುದ್ದೆಗೆ ತೊಡಕುಂಟು ಮಾಡಿ ಅನ್ಯಾಯ ಎಸಗಿದ್ದಾರೆ. ಇವರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಪರಿಶಿಷ್ಟ ಜಾತಿಯವರಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಗ್ರಾಮಸ್ಥರಾದ ತುಕಾರಾಂ ಧೂಳಪ್ಪ, ಪೂಜಾ ವಿಜಯಕುಮಾರ, ಶ್ರೀದೇವಿ ಶಂಭುಲಿಂಗ, ಚಂದ್ರಮ್ಮ ಧೂಳಪ್ಪ, ಪೂಜಾ ಗೌತಮ, ಶ್ರೀಮಂತ ದೇವಪ್ಪ, ಪಾರ್ವತಿ ರಾಮಣ್ಣ, ಜೈಶ್ರೀ ನರಸಿಂಗ್, ಚಿಂತಮ್ಮ ಸಂಬಣ್ಣ ಸೇರಿದಂತೆ ಇತರರು ಪತ್ರದಲ್ಲಿ ಆಗ್ರಹಿಸಿದ್ದಾರೆ.


# ಪ್ರವಚನ ಉದ್ಘಾಟನೆ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.8: ಇಲ್ಲಿಯ ಚನ್ನಬಸವಾಶ್ರಮ ಪರಿಸರದಲ್ಲಿ ಗುರುವಾರ ಸಾಯಂಕಾಲ 6ಕ್ಕೆ ವಚನ ಜಾತ್ರೆ-2025 ಮತ್ತು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ನಿಮಿತ್ತ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಶರಣರು ಕಂಡ ಬಸವಣ್ಣ ಪ್ರವಚನ ಉದ್ಘಾಟನೆಗೊಳ್ಳಲಿದೆ.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್ ಪ್ರವಚನ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಬೆಳಗಾವಿ-ಯಮಕನಮರಡಿ ಜಗದ್ಗುರು ಶೂನ್ಯಸಂಪಾದಾನ ಹುಣಸಿಕೊಳ್ಳ ಮಠದ ಉತ್ತರಾಧೀಕಾರಿ ಸಿದ್ಧಬಸವ ದೇವರು ಶರಣರು ಕಂಡ ಬಸವಣ್ಣ ವಿಷಯದ ಮೇಲೆ ಪ್ರವಚನ ನಡೆಸಿಕೊಡಲಿದ್ದಾರೆ.

ಮಸ್ಕಟ್ ಕರ್ನಾಟಕ ಸಂಘದ ಮಾಜಿ ಸಲಹೆಗಾರ ಭೀಮ ನೀಲಕಂಠರಾವ ಹಂಗರಗೆ ಬಸವ ಗುರುವಿನ ಪೂಜೆ



ನೆರವೇರಿಸಲಿದ್ದಾರೆ. ವಿವಿಧ ಸಂಘ ಸಂಸ್ಥೆಯ ಗಣ್ಯರು, ಮುಖಂಡರು ಭಾಗಿಯಾಗಲದಿದಾರೆ. ಏ.21ರ ವರೆಗೆ ಪ್ರತಿದಿನ ಸಾಯಂಕಾಲ 6 ಗಂಟೆಗೆ ಪ್ರವಚನ ನಡೆಯಲಿದ್ದು, ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

# ಶಿಕ್ಷಣ ಇಲಾಖೆಯ ಅವ್ಯವಸ್ಥೆಗೆ ಶಾಸಕ ಪ್ರಭು ಚವ್ಹಾಣ ಆಕ್ರೋಶ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.8:ಶಿಕ್ಷಕರಿರುವ ಕಡೆ ಮಕ್ಕಳಿಲ್ಲ, ಮಕ್ಕಳಿರುವ ಕಡೆ ಶಿಕ್ಷಕರಿಲ್ಲ. ಬಹಳಷ್ಟು ತಾಂಡಾಗಳಿಗೆ ಶಿಕ್ಷಕರು ಹೋಗುವುದೇ ಇಲ್ಲ. ಇಂತಹ ಅವ್ಯವಸ್ಥೆಗಳಿಂದಾಗಿ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಕಳುಹಿಸಲು ಹಿಂದೇಟು ಹಾಕುತ್ತಿದ್ದಾರೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಶಿಕ್ಷಣ ಇಲಾಖೆಯ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಔರಾದ(ಬಿ) ತಾಲ್ಲೂಕು ಪಂಚಾಯತ ಕಛೇರಿ ಸಭಾಂಗಣದಲ್ಲಿ ಜರುಗಿದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಾನು ಕ್ಷೇತ್ರದೆಲ್ಲೆಡೆ ಗ್ರಾಮ ಸಂಚಾರ ನಡೆಸಿ ಪ್ರತಿ ಶಾಲೆಗೆ ಭೇಟಿ ನೀಡಿ ಸಮಸ್ಯೆಗಳನ್ನು ಕಣ್ಣಾರೆ ವೀಕ್ಷಿಸಿದ್ದೇನೆ. ಅಧಿಕಾರಿಗಳು ಕೂಡ ಜೊತೆಯಲ್ಲಿದ್ದರು. ಸರ್ಕಾರಿ ಶಾಲೆಗಳು ಸಮಸ್ಯೆಗಳ ಆಗರಗಳಾಗಿವೆ. ಶಿಕ್ಷಕರು ಬೋಧನೆಗಿಂತ ರಾಜಕೀಯ ಹೆಚ್ಚಾಗಿ ಮಾಡುತ್ತಿದ್ದಾರೆ. ಹೀಗಾದರೆ ಶಿಕ್ಷಣದ ಪರಿಸ್ಥಿತಿ ಏನಾಗಬಹುದೆಂದು ಕಳವಳ ವ್ಯಕ್ತಪಡಿಸಿದರು. ಅಧಿಕಾರಿಗಳು ಇಲಾಖೆಯನ್ನು ಸುಧಾರಿಸಲು ಪ್ರಥಮ ಆದ್ಯತೆ ನೀಡಬೇಕು. ಶಿಕ್ಷಕರ ತಾರತಮ್ಯ ಸರಿಪಡಿಸಿ ಫಲಿತಾಂಶ ಸುಧಾರಣೆಗೆ ಒತ್ತು





ಕೊಡಬೇಕು. ಎಲ್ಲ ಶಿಕ್ಷಕರು ತಪ್ಪದೇ ಶಾಲೆಗಳಿಗೆ ಹೋಗಿ ಪಾಠ ಮಾಡುವಂತಾಗಬೇಕು. ಶಿಕ್ಷಕರು ಮನೆ-ಮನೆಗೆ ಭೇಟಿ ನೀಡಿ ಮಕ್ಕಳ ದಾಖಲಾತಿ ಹೆಚ್ಚಿಸುವಂತೆ ಮಾಡಬೇಕೆಂದು ಕ್ಷೇತ್ರಶಿಕ್ಷಣಾಧಿಕಾರಿ ಬಿ.ಜೆ ರಂಗೇಶ ಅವರಿಗೆ ಸೂಚಿಸಿದರು. ಎಲ್ಲ ಶಾಲೆಗಳಲ್ಲಿ ಕಡ್ಡಾಯವಾಗಿ ಕುಡಿಯುವ ನೀರು, ಶೌಚಾಲಯ, ಆಟದ ಮೈದಾನ, ಉದ್ಯಾನ, ಕಾಂಪೌಂಡ್ ಗೋಡೆ ನಿರ್ಮಿಸಬೇಕೆಂದು ಹಲವಾರು ಸಲ ಹೇಳಿದ್ದೇನೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು. ನಾನು ಶಿಕ್ಷಣದ ಅಭಿವೃದ್ಧಿಗೆ ಮೊದಲ ಆದ್ಯತೆ ನೀಡಿದ್ದು, ಶಾಲಾ-ಕಾಲೇಜುಗಳ ನಿರ್ಮಾಣ, ಮೂಲಸೌಕರ್ಯಗಳನ್ನು ಒದಗಿಸುವುದು ಸೇರಿದಂತೆ ಇಲಾಖೆಯ ಎಲ್ಲ ಅಗತ್ಯತೆಗಳನ್ನು ಪೂರೈಸುತ್ತಿದ್ದೇನೆ. ಅದಕ್ಕೆ ತಕ್ಕಂತೆ ಅಧಿಕಾರಿಗಳು ಕೆಲಸ ಮಾಡಬೇಕೆಂದು ಹೇಳಿದರು. ಕೃಷಿ ಇಲಾಖೆಯಿಂದ ರೈತರಿಗೆ ಸೌಲಭ್ಯಗಳು ಸಮರ್ಪಕವಾಗಿ ಸಿಗುತ್ತಿಲ್ಲ. ಕಛೇರಿಯಲ್ಲಿನ ಹೊರಗುತ್ತಿಗೆ ಸಿಬ್ಬಂದಿಯಿಂದಲೇ ಅವ್ಯವಹಾರಗಳು ನಡೆಯುತ್ತಿವೆ ಮತ್ತು ತಮ್ಮವರಿಗೆ ಮಾತ್ರ ಸೌಲಭ್ಯಗಳನ್ನು ಸಿಗುವಂತೆ ಮಾಡುತ್ತಿದ್ದಾರೆ ಎನ್ನುವ ಆರೋಪಗಳು ಕೇಳಿ ಬರುತ್ತಿವೆ. ಇಂಥ ಸಮಸ್ಯೆಗಳನ್ನು ಕೂಡಲೇ ಸರಿಪಡಿಸಬೇಕೆಂದು ತಾಲ್ಲೂಕು ಕೃಷಿ ಅಧಿಕಾರಿ ಧೂಳಪ್ಪ ಅವರಿಗೆ ಸೂಚಿಸಿದರು. ಬೆಳೆ ವಿಮೆ ಸೌಲಭ್ಯ ಸರಿಯಾಗಿ ಸಿಗುತ್ತಿಲ್ಲ. ಹಂಗರಗಾ, ಎಕಂಬಾ, ದಬಕಾ, ಕಮಲನಗರ ಸೇರಿದಂತೆ ಅನೇಕ ಗ್ರಾಮಗಳಲ್ಲಿ ವಿಮೆ ಸೌಲಭ್ಯ ಸಿಕ್ಕಿಲ್ಲ. ಹೆಚ್ಚು ಹಾನಿಯಾದವರನ್ನು ಬಿಟ್ಟು ಕಡಿಮೆ ಹಾನಿಯಾದವರಿಗೆ ಪರಿಹಾರ ನೀಡಲಾಗಿದೆ. ಕೆಲವು ಕಡೆ ಕೃಷಿ ಭೂಮಿ ಇಲ್ಲದವರಿಗೂ ವಿಮೆ ಸಿಕ್ಕಿರುವ ಬಗ್ಗೆ ಜನತೆ ಹೇಳುತ್ತಿದ್ದಾರೆ. ವಿಮೆ ಕಂಪನಿಯಿಂದ ಏಕೆ ಈ ರೀತಿಯ ಲೋಪಗಳಾಗುತ್ತಿವೆ. ಇಂತಹ ತಾರತಮ್ಯಗಳು ಆಗದಂತೆ ನೋಡಿಕೊಳ್ಳಬೇಕು. ಕ್ಷೇತ್ರದ ಯಾವೊಬ್ಬ ರೈತನಿಗೂ ಅನ್ಯಾಯವಾದರೆ ನಾನು ಸಹಿಸುವುದಿಲ್ಲವೆಂದು ಎಚ್ಚರಿಸಿದರು. ಬೇಸಿಗೆ ಆರಂಭವಾಗಿದ್ದು, ಬಿಸಿಲಿನ ತಾಪ ಹೆಚ್ಚುತ್ತಿದೆ. ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದೆ. ಮಹಿಳೆಯರು ಕೊಡಗಳನ್ನು ಹಿಡಿದು ಬೀದಿ-ಬೀದಿ ಅಲೆಯುವ ಪರಿಸ್ಥಿತಿ ಎದುರಾಗಿದೆ. ಅಧಿಕಾರಿಗಳು ಏನು ಮಾಡುತ್ತಿದ್ದೀರೆಂದು ಪ್ರಶ್ನಿಸಿದರು.

ಜಲ ಜೀವನ್ ಮಿಷನ್ ಪೂರ್ಣಗೊಂಡ ಸಾಕಷ್ಟು ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಲ್ಬಣಗೊಂಡಿದೆ. ಅಧಿಕಾರಿಗಳು ಮತ್ತುಗುತ್ತಿಗೆದಾರರ ವೈಫಲ್ಯದಿಂದಾಗಿ ಜನತೆ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಈ ಯೋಜನೆಯಡಿ ಪ್ರತಿ ಗ್ರಾಮದಲ್ಲಿ ಬಾವಿ ನಿರ್ಮಿಸಬೇಕೆಂಬ ನಿಯಮವಿದೆ. ಆದರೆ ಅಧಿಕಾರಿಗಳು ನಿಯಮಗಳೆಲ್ಲವನ್ನು ಗಾಳಿಗೆ ತೂರಿ ಮನಬಂದಂತೆ ಕ್ರಿಯಾಯೋಜನೆ ರೂಪಿಸಿದ್ದಾರೆ. ಇಂತಹ ಸಮಸ್ಯೆಗಳಿಂದ ಯೋಜನೆ ವಿಫಲಗೊಂಡಿದೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಸಮಸ್ಯೆ ಇನ್ನಷ್ಟು ಹೆಚ್ಚುವ ಸಾಧ್ಯತೆಯಿರುವುದರಿಂದ ಅಧಿಕಾರಿಗಳು ಎಚ್ಚರಿಕೆಯಿಂದ ಕೆಲಸ ಮಾಡಬೇಕು. ತಹಸೀಲ್ದಾರರು, ತಾಲ್ಲೂಕು ಪಂಚಾಯತ ಇಓ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಿ ಎಲ್ಲಿಯೂ ನೀರಿನ ಕೊರತೆಯಾಗದಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು. ಔರಾದ(ಬಿ) ಪಟ್ಟಣದ ಕೆಲವು ವಾರ್ಡ್ಗಳಲ್ಲಿ ನೀರಿನ ಸಮಸ್ಯೆ ಹೆಚ್ಚಾಗಿದೆ. ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕೆಲಸ ಮಾಡಬೇಕು. ಎಲ್ಲಿಯೂ ನೀರಿನ ಕೊರತೆ-ಯಾಗದಂತೆ ನೋಡಿಕೊಳ್ಳಬೇಕೆಂದು ಹೇಳಿದರು. ಇದೇ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರೋಗ್ಯ, ಪಂಚಾಯತ್ ರಾಜ್ ಇಂಜಿನೀಯರಿಂಗ, ಪಶು ಸಂಗೋಪನೆ, ಸಮಾಜ ಕಲ್ಯಾಣ, ಜೆಸ್ಕಾಂ, ತೋಟಗಾರಿಕೆ, ಲೋಕೋಪಯೋಗಿ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಅರಣ್ಯ, ಮೀನುಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು. ಸಭೆಯಲ್ಲಿ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಔರಾದ(ಬಿ) ತಹಸೀಲ್ದಾರ ಮಹೇಶ ಪಾಟೀಲ, ಕಮಲನಗರ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ, ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಸ್ವಾಮಿದಾಸ, ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಭತ್ತ, ಜೋಳ ಬೆಂಬಲ ಬೆಲೆ ಖರೀದ ಕೇಂದ್ರಗಳು ಆರಂಭ : ಸಚಿವ ದರ್ಶನಾಪೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸರ್ಕಾರದಿಂದ ಬೆಂಬಲಬೆಲೆಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಜೋಳ, ಭತ್ತದ ಬೆಳೆಗಳನ್ನು ಬೆಳೆದಿದ್ದಾರೆ, ಸರ್ಕಾರದಿಂದ ಜಿಲ್ಲೆಯಲ್ಲಿ 5 ಖರೀಧಿ ಕೇಂದ್ರಗಳನ್ನು ಆರಂಭಿಸಲಾಗಿದೆ ಎಂದು ರಾಜ್ಯ ಸಣ್ಣ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಸಚಿವರು, ಭತ್ತ-ಜೋಳ ಬೆಳೆದ ರೈತರು ಬೆಂಬಲ ಬೆಲೆ ಪಡೆಯಲು ಖರೀಧಿ ಕೇಂದ್ರಗಳನ್ನು ಆರಂಭಿಸಬೇಕೆಂದು ಸಚಿವರಲ್ಲಿ ಮನವಿ ಮಾಡಿದ ಪರಿಣಾಮ ಮಂಗಳವಾರದಿಂದಲೇ ಆರಂಭಿಸಲು ಸಚಿವರು ಸೂಚಿಸಿದ ಹಿನ್ನಲೆಯಲ್ಲಿ ಜಿಲ್ಲಾಡಳಿತ ಜಿಲ್ಲೆಯ 1. ಯಾದಗಿರಿ ಕೃಷಿ ಉತ್ಪನ್ನ ಮಾರುಕಟ್ಟೆ ಆವರಣ, 2. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ ಸುರಪುರ, 3. ಶಹಾಪುರದಲ್ಲಿ ಕೆಎಫ್‌ಸಿಎಸ್‌ಸಿ ಆವರಣ, 4. ಹುಣಸಗಿಯಲ್ಲಿ ಟಿಎಪಿಎಂಎಸ್ ಆವರಣದಲ್ಲಿ ಹಾಗೂ 5. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ. ನಾಯ್ಕಲ್‌ನಲ್ಲಿ ಆರಂಭಿಸಲಾಗುತ್ತಿದೆ, ಕಾರಣ ರೈತರು ಈ ಕೇಂದ್ರಗಳಲ್ಲಿ ತಮ್ಮ ಬೆಳೆಗಳನ್ನು ಮಾರಾಟ ಮಾಡಿ ಸರ್ಕಾರದ ಯೋಜನೆಯ ಲಾಭ ಪಡೆಯಬೇಕೆಂದು ತಿಳಿಸಿದ್ದಾರೆ.

# ಬೇಸಿಗೆ ಕ್ರೀಡಾ ತರಬೇತಿ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 05-ಯಾದಗಿರಿ ಜಿಲ್ಲಾ ಕ್ರಿಡಾಂಗಣದಲ್ಲಿ ಬೇಸಿಗೆ ಕ್ರೀಡಾ ತರಬೇತಿ ಶಿಬಿರ ಆಯೋಜಿಸಲಾಗಿದೆ ಎಂದು ಯಾದಗಿರಿ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ರಾಜುಬಾವಿಹಳ್ಳಿ ಅವರು ತಿಳಿಸಿದ್ದಾರೆ.



ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಯಾದಗಿರಿ ಜಿಲ್ಲೆಯ ಜಿಲ್ಲಾ ಮತ್ತು ತಾಲೂಕು ಕ್ರೀಡಾಂಗಣಗಳಲ್ಲಿ ಏಪ್ರಿಲ್ ಮತ್ತು ಮೇ 2025ರ ಮಾಹೆಗಳಲ್ಲಿ ಕ್ರೀಡೆಗಳ ಬೇಸಿಗೆ ಕ್ರೀಡಾ ತರಬೇತಿ ಶಿಬಿರವನ್ನು 2025ರ ಏಪ್ರಿಲ್ 9ರ ಬುಧವಾರ ರಂದು ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ. ಆಸಕ್ತ ಶಾಲಾ ಕಾಲೇಜುಗಳ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಈ ಬೇಸಿಗೆ ಕ್ರೀಡಾ ತರಬೇತಿ ಶಿಬಿರದಲ್ಲಿ ಭಾಗವಹಿಸಬೇಕು.

ಕ್ರೀಡೆಗಳ ಈಜು ಮಾಸಿಕ ಶುಲ್ಕ 1200ರೂ.ಗಳ ನಿಗದಿಪಡಿಸಲಾಗಿದೆ. ಟೇಬಲ್ ಟೆನ್ನಿಸ್ ಮಾಸಿಕ ಶುಲ್ಕ 500ರೂ.ಗಳ ನಿಗದಿಪಡಿಸಲಾಗಿದೆ. ವಾಲಿಬಾಲ್ ಮಾಸಿಕ ಶುಲ್ಕ 300 ರೂ.ಗಳ ನಿಗದಿಪಡಿಸಲಾಗಿದೆ. ಅಥ್ಲೆಟಿಕ್ಸ್ ಮಾಸಿಕ ಶುಲ್ಕ 60 ರೂ.ಗಳ (ಒಂದು ಕ್ರೀಡೆಗೆ) ನಿಗದಿಪಡಿಸಲಾಗಿದೆ. ಮಲ್ಲಕಂಬ ಮಾಸಿಕ ಶುಲ್ಕ ಉಚಿತವಾಗಿ ನಿಗದಿಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಗೀರೀಶ, ಅಥ್ಲೆಟಿಕ್ಸ್ ತರಬೇತುದಾರರು, ಮೊ.ನಂ.9448806320, ಪ್ರಕಾಶ ಅಂಬಾರ, ವಾಲಿಬಾಲ್ ತರಬೇತುದಾರರು, ಮೊ.ನಂ.9886675263, ರವಿ, ಮಲ್ಲಕಂಬ ತರಬೇತುದಾರರು, ಮೊ.ನಂ.7022164990ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸತತ ಪ್ರಯತ್ನ ಮಾಡಿದಾಗ ಮಾತ್ರ ಯಶಸ್ಸು ಕಾಣಲು ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಏಪ್ರಿಲ್ ;08 ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸತತ ಪ್ರಯತ್ನ ಹಾಗೂ ನಿರಂತರ ಅಧ್ಯಾಯನ ಮಾಡಿದಾಗ ಮಾತ್ರ ಯಶಸ್ಸು ಕಾಣಲು ಸಾಧ್ಯವಾಗುತ್ತದೆ ಎಂದು ಎಸ್.ಡಿ.ಎಮ್.ಸಿ ಅಧ್ಯಕ್ಷ ರಾಜಕುಮಾರ ಭೂತಾಳೆ ಹೇಳಿದರು.

ತಾಲೂಕಿನ ಕಠಳ್ಳಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ 8ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಹಾಗೂ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಯುಗಮಾನದಲ್ಲಿ ಮಕ್ಕಳಲ್ಲಿ ಸಂಸ್ಕೃತಿ ಮರೆಮಾಚುತ್ತಿದೆ. ಹೀಗಾಗಿ ಮಕ್ಕಳ ಓದಿನ ಜೊತೆಗೆ ಅವರಲ್ಲಿ ಮಾನವೀಯತೆಯ ಮೌಲ್ಯಗಳನ್ನು ತಿಳಿಸುವ ಪ್ರಯತ್ನ ಶಿಕ್ಷಕರು ಹಾಗೂ ಪಾಲಕ ಪೋಷಕರು ಮಾಡಬೇಕು ಎಂದರು.

ಶಿಕ್ಷಕ ಸದಾಶಿವಯ್ಯ ಮಾತನಾಡಿ, ನಾಗರಿಕ ಜಗತ್ತಿನಲ್ಲಿ ನಾವು ಯಾವುದೇ ಒಂದು ಕ್ಷೇತ್ರ ಆಯ್ಕೆ ಮಾಡಿಕೊಂಡು ಅಲ್ಲಿ ಉತ್ತಮ ಸಾಧನೆ ಮಾಡಬೇಕಾದರೆ ಅಲ್ಲಿ ಶಿಕ್ಷಣ ಕ್ಷೇತ್ರದ ಪಾತ್ರ ಬಹಳ ದೊಡ್ಡದಾಗಿದೆ. ಮಕ್ಕಳು ಶಾಲೆಯಲ್ಲಿ ಹಾಗೂ ಮನೆಯಲ್ಲಿ ಉತ್ತಮ ರೀತಿಯಲ್ಲಿ ಅಭ್ಯಾಸ ಮಾಡಬೇಕು. ಮಹಾತ್ಮರ ಜೀವನ ಚರಿತ್ರೆಯನ್ನು ಓದುವ ಹವ್ಯಾಸಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ತಾಲೂಕ ಮಟ್ಟ, ಜಿಲ್ಲಾ ಮಟ್ಟ, ರಾಜ್ಯ ಮಟ್ಟದ ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಶಾಲಾ ಮಕ್ಕಳಿಂದ ನೃತ್ಯ, ಕೋಲಾಟ, ಕಿರು ನಾಟಕ ಸೇರಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ವೇಳೆ ಗ್ರಾಪಂ. ಸದಸ್ಯ ವೀರಭದ್ರಪ್ಪ ಪಾಟೀಲ್, ಗ್ರಾಪಂ. ಸದಸ್ಯ ಮಂಜುಳಾ ದೊಡ್ಡಿ, ಗ್ರಾಪಂ. ಸದಸ್ಯ ಅಮೃತ ಮರಕುಂದಿ, ಶಾಲಾ ಮುಖ್ಯಶಿಕ್ಷಕಿ ರಾಧಾ, ಶಿಕ್ಷಕರಾದ ಕಲಾವತಿ, ಮಹಾದೇವಪ್ಪ ಪಾಟೀಲ್, ಹರೀಶ, ನಗವಂತ್, ಪ್ರಮುಖರಾದ ಶಿವರಾಜಪ್ಪ ಪಾಟೀಲ್, ಜಗನ್ನಾಥ್ ನವಲೆ, ಅನಿಲ ದೊಡ್ಡಿ, ಬಸವರಾಜ ಪಾಟೀಲ್, ಕಲ್ಲಪ್ಪ ದೊಡ್ಡಿ, ಕೈಲಾಸ್, ಹಣಮಂತ ಚಾಂಗಲೇರಿ, ಈಶ್ವರ ಕ್ರಾಂತಿ, ಪ್ರಭು, ರಾಮಣ್ಣ, ಶಿವು ಚಾಂಗಲೇರಿ, ತಮ್ಮಣಪ್ಪ ಜಮಾದಾರ್, ಶಿವು ಮರಕುಂದಿ, ಚೆನ್ನರೆಡ್ಡಿ, ನಿಂಗರಾಜ ಪಾಟೀಲ್, ಆಕಾಶ ದೊಡ್ಡಿ ಸೇರಿದಂತೆ ಅನೇಕರು ಇದ್ದರು.

# "ಶುಲ್ಕ ಮರುಪಾವತಿ" ಸೌಲಭ್ಯಕ್ಕೆ ಅರ್ಜಿ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:2024-25ನೇ ಸಾಲಿನ ಮೆಟ್ರಿಕ ನಂತರ ಕೋರ್ಸ್ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ "ಶುಲ್ಕ ಮರುಪಾವತಿ" ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಅವಧಿ ವಿಸ್ತರಿಸಿದೆ ಎಂದು ಯಾದಗಿರಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ. ಎಂ. ನಾರಾಯಣಕರ್ ಅವರು ತಿಳಿಸಿದ್ದಾರೆ. ಮೆಟ್ರಿಕ ನಂತರ ಕೋರ್ಸ್ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ಎಲ್ಲಾ ವಿದ್ಯಾರ್ಥಿಗಳಿಂದ "ಶುಲ್ಕಮರುಪಾವತಿ" ವಿದ್ಯಾರ್ಥಿವೇತನ, ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಕಾರ್ಯಕ್ರಮಗಳ ವಿವರ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳು ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ ವಿಳಾಸ bcwd.karnataka.gov.in/, ಇಲಾಖಾ ಸಹಾಯವಾಣಿ ದೂ.ಸಂ.8050770005 ಇಮೇಲ್ ಛಿಛಿತಿಜುಜಟರಿಟುಟಿಜ@ಂಟಚುಟ. ಛಿಂಟ, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾವಾಣಿ ಇಮೇಲ್ postmatrichelp@karnataka.gov.in, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ssp.postmatric.karnataka.gov.in ನಲ್ಲಿ 2025ರ ಮೇ 31ರ ವರೆಗೆ ಅರ್ಜಿ ಅವಧಿ ವಿಸ್ತರಿಸಿದೆ.

# ನಿಮ್ಮೆಲ್ಲರ ಆಶೀರ್ವಾದದಿಂದ ಕ್ಷೇತ್ರದಲ್ಲಿ ಇತಿಹಾಸದಲ್ಲಿ ಉಳಿಯುವಂತಹ ಕೆಲಸ ಮಾಡುತ್ತಿದ್ದೇನೆ : ಶಾಸಕ ಕಂದಕೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಗುರುಮಿಠಕಲ್ ಮತಕ್ಷೇತ್ರದ ಮತದಾರರು 2018ರಲ್ಲಿ ನಮ್ಮ ತಂದೆಯವರನ್ನು ಶಾಸಕರನ್ನಾಗಿ ಆಯ್ಕೆ ಮಾಡಿದ್ದೀರಿ, ನಂತರ ನನ್ನನ್ನು ಶಾಸಕನಾಗಿ ಚುನಾಯಿಸಿದ ಮೇಲೆ ಕ್ಷೇತ್ರದಲ್ಲಿ ಬಹುದಿನಗಳ ಜನರ ಬೇಡಿಕೆಗಳನ್ನು ನಿಮ್ಮೆಲ್ಲರ ಆಶೀರ್ವಾದದಿಂದ ಕೆಲವು ಈಡೇರಿಸಿ, ಇತಿಹಾಸದಲ್ಲಿ ಉಳಿಯುವಂತಹ ಕೆಲಸ ಮಾಡುವ ನಿಟ್ಟಿನಲ್ಲಿ ಸಾಗುತ್ತಿದ್ದೇನೆ ಎಂದು ಗುರುಮಿಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಹೇಳಿದರು,



ಗುರುಮಿಠಕಲ್ ಮತಕ್ಷೇತ್ರದ ಬಾಚವಾರ ಗ್ರಾಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆ 2024-25ನೇ ಸಾಲಿನ ಕಲ್ಯಾಣಪಥ ಯೋಜನೆಯಡಿಯಲ್ಲಿ ಲಿಂಗಸಾಲಿ ತಾಂಡಾದಿಂದ ಹಾಮಾನಾಯಕ ತಾಂಡಾದವರೆಗೆ 3.55 ಕೋಟಿ ರೂ, ವೆಚ್ಚದ 4. ಕಿ.ಮೀ ರಸ್ತೆ ನಿರ್ಮಾಣಕ್ಕೆ ಅಡಿಗಲ್ಲು ನೆರವೇರಿಸಿ ಮಾತನಾಡಿದರು.

ದೇಶ ಸ್ವಾತಂತ್ರಗೊಂಡ 78 ವರ್ಷ ಕಳೆದಿದೆ, ಕ್ಷೇತ್ರದಲ್ಲಿ ಹಲವಾರು ಗ್ರಾಮಗಳಿಗೆ, ತಾಂಡಾಗಳಿಗೆ ಸೂಕ್ತ ರಸ್ತೆ ಕೂಡ ನಿರ್ಮಾಣ ಮಾಡಿರಲಿಲ್ಲ, ಕಳೆದ 7 ವರ್ಷಗಳಲ್ಲಿ ನಾವೂ ಜನರ ತೊಂದರೆ ಗಮನಿಸಿ, ಅಗತ್ಯಕ್ಕನುಗುಣವಾಗಿ ರಸ್ತೆಗಳನ್ನು ನಿರ್ಮಾಣ ಮಾಡಿ, ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಜನರಿಗೆ ಅನುಕೂಲತೆ ಮಾಡಿಕೊಟ್ಟಿರುವ ಆತ್ಮತೃಪ್ತಿ ನನಗಿದೆ ಎಂದು ಹೇಳಿದರು. ಈ ಭಾಗದಲ್ಲಿ ವಿದ್ಯುತ್ ಸಮಸ್ಯೆಯಿಂದ ಜನರಿಗೆ ಕುಡಿಯುವ ನೀರಿನ ಹಾಗೂ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ತೊಂದರೆಯಾಗಿರುವುದು ಗಮನಕ್ಕೆ ಬಂದಿದೆ, ನಾನೂ ಕೂಡ ಜೆಸ್ಕಾಂ ಹಿರಿಯ ಅಧಿಕಾರಿಗೊಂದಿಗೆ ಮಾತನಾಡಿ, ಬುಧವಾರವೇ ಗ್ರಾಮಕ್ಕೆ ಆಗಮಿಸಿ, ವಾಸ್ತವಿಕತೆ ವಿಕ್ಷೀಸಿ, ನಿಮ್ಮೊಂದಿಗೆ ಚರ್ಚಿಸಿ, ಸಮಸ್ಯೆ ಪರಿಹಾರ ಮಾಡಿ ಎಂದು ಸೂಚಿಸಿದ್ದೇನೆ ಎಂದರು.

ಜಲಧಾರೆ ಯೋಜನೆಯಡಿಯಲ್ಲಿ ಗ್ರಾಮದಲ್ಲಿ ಜನಸಂಖ್ಯೆಗನುಗುಣವಾಗಿ ಬೃಹತ್ ನೀರು ಸಂಗ್ರಹ ಘಟಕ ನಿರ್ಮಾಣ ಮಾಡಲಾಗುವುದು, ಇನ್ನೋಂದು ಪ್ರಮುಖ ಬೇಡಿಕೆಯಾದ ಎಕ್ಕೇಳ್ಳಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಮಾಡಬೇಕೆಂಬುದು ನನ್ನ ಅವಧಿ ಮುಗಿಯುದರೊಳಗಾಗಿ, ಅನುಷ್ಠಾನಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು. ಈಗಾಗಲೇ ಚಾಮನಳ್ಳಿ ಕ್ರಾಸ್‌ನಿಂದ ಯಡ್ಡಳ್ಳಿ ಗ್ರಾಮದವರೆಗೆ ಯಾದಗಿರಿ-ಸೇಡಂ ರಾಜ್ಯ ಹೆದ್ದಾರಿ ರಸ್ತೆ ಅಭಿವೃದ್ಧಿಪಡಿಸಲಾಗಿದೆ, 3 ಕೋಟಿ ರೂ. ವೆಚ್ಚದಲ್ಲಿ ಶೀಘ್ರವೇ ಅಲ್ಲಿಂದ ಸೌಧಾಗರ ಕ್ರಾಸ್‌ವರಗೆ ರಸ್ತೆ ದುರಸ್ತಿಗೊಳಿಸಲಾಗುವುದು, ಜೊತೆಗೆ ಅಪಘಾತವಲಯ ಸ್ಥಳವನ್ನು 1 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ಕೈಗೊಂಡು ಸುಗಮ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದು ಎಂದು ತಿಳಿಸಿದರು.

ನಾನು ಮತಕ್ಷೇತ್ರದ ಜನರ ಜೊತೆ ನಿರಂತರ ಜನಸಂಪರ್ಕದಲ್ಲಿದ್ದೇನೆ, ನಾನು ಆ ಗ್ರಾಮಗಳಿಗೆ ಹಾಗೂ ತಾಂಡಾಗಳಿಗೆ ಭೇಟಿ ನೀಡಿದ ಸಮಯದಲ್ಲಿ ನಾನಾ ಬೇಡಿಕೆಗಳನ್ನು ನನ್ನ ಗಮನಕ್ಕೆ ತರುತ್ತಾರೆ, ಕಾರಣ ನಾನು ಒಂದು ನಿರ್ಧಾರಕ್ಕೆ ಬಂದಿದ್ದೇನೆ, ಕ್ಷೇತ್ರದ ಕೆಲವು ಗ್ರಾಮಗಳನ್ನು-ತಾಂಡಾಗಳನ್ನು ಆಯ್ಕೆ ಮಾಡಿಕೊಂಡು ಒಮ್ಮೆ ಜನರ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳಲು ಚಿಂತನೆ ನಡೆಸಿದ್ದೇನೆ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ನಾನು ಅಭಿವೃದ್ಧಿ ವಿಷಯದಲ್ಲಿ ಎಂದು ರಾಜಕಾರಣ ಹಾಗೂ ಜಾತಿವಾದ ಮಾಡಿಕೊಂಡು ಬಂದಿಲ್ಲ, ಎಲ್ಲಾ ಪಕ್ಷದ ಕಾರ್ಯಕರ್ತರ, ಮುಖಂಡರ ತಮ್ಮ ಗ್ರಾಮಗಳ ಸಮಸ್ಯೆಗಳ ಅಭಿಪ್ರಾಯಗಳಿಗೆ ಮನ್ನಣೆ ನೀಡಿ, ಆದಷ್ಟೂ ನ್ಯಾಯ ಒದಗಿಸುವ ಕೆಲಸ ಮಾಡಿದ್ದೇನೆ, ಕಾಮಗಾರಿಗಳ ಅನುಷ್ಠಾನದಲ್ಲಿ ಸ್ಥಳೀಯರ ಸಹಕಾರ ಅಗತ್ಯ ಎಂದರು. ವೇದಿಕೆ ಮೇಲೆ ಪಿಎಂಜಿಎಸ್‌ವೈ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪ್ರವೀಣ, ಹತ್ತಿಕುಣಿ ಗ್ರಾ.ಪಂ ಅಧ್ಯಕ್ಷೆ ಅನ್ನಪೂರ್ಣ ಅಮೀನರಡ್ಡಿ ಬಿಳ್ಹಾರ, ಉಪಾಧ್ಯಕ್ಷ ಶೇಖರ ಹೊಸಳ್ಳಿ, ಯರಗೋಳ ಗ್ರಾ.ಪಂ ಅಧ್ಯಕ್ಷ ರಾಮಲಿಂಗಪ್ಪ ಅಲ್ಲಿಪೂರ, ಮುಖಂಡರಾದ ಬೋಜಣ್ಣಗೌಡ ಯಡ್ಡಳ್ಳಿ, ಮಲ್ಲರಡ್ಡಿಗೌಡ ಮಾಲಿ ಪಾಟೀಲ್ ಹತ್ತಿಕುಣಿ, ಅಮೀನರಡ್ಡಿ ಬಿಳ್ಹಾರ, ರವಿ ಪಾಟೀಲ್ ಹತ್ತಿಕುಣಿ, ಮಾಣಿಕಪ್ಪ ಬಾಚವಾರ, ಶ್ರೀಕಾಂತ, ಶಿವಯೋಗಿ, ಭೀಮರಾಯ, ಇಂಜಿನಿಯರ ಅಂಬರೀಶ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಶರಣು ಗಡೇದ ಸ್ವಾಗತಿಸಿದರು.

# ಯಾದಗಿರಿ ನಗರಕ್ಕೆ ಭೀಮಾನದಿ ಮೂಲದಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿ ಕುಡಿಯುವ ನೀರು ಸರಬರಾಜು ಯೋಜನೆಯ ಶಂಕುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 08 : ನಗರಾಭಿವೃದ್ಧಿ ಇಲಾಖೆ ಹಾಗೂ ಯಾದಗಿರಿ ಜಿಲ್ಲಾಡಳಿತ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಬೆಂಗಳೂರು ಮತ್ತು ಯಾದಗಿರಿ ನಗರಸಭೆ ಸಂಯುಕ್ತಾಶ್ರಯದಲ್ಲಿ ಯಾದಗಿರಿ ನಗರಕ್ಕೆ ಭೀಮಾನದಿ ಮೂಲದಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿಯಲ್ಲಿ ಕುಡಿಯುವ ನೀರು ಸರಬರಾಜು ಯೋಜನೆಯ ಅಂದಾಜು ಮೊತ್ತ 5316 ಲಕ್ಷ ರೂ.ಗಳ ಶಂಕುಸ್ಥಾಪನಾ ಕಾರ್ಯಕ್ರಮವನ್ನು 2025ರ ಏಪ್ರಿಲ್ 7ರ ಸೋಮವಾರ ರಂದು ಮಧ್ಯಾಹ್ನ 12.15 ಗಂ-ಟೆಗೆ ಯಾದಗಿರಿ ಕಮಲನೆಹರು ಉದ್ಯಾನವನದಲ್ಲಿ ಆಯೋಜಿಸಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಯಾದಗಿರಿ ನಗರಕ್ಕೆ ಭೀಮಾನದಿ ಮೂಲದಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿಯಲ್ಲಿ ಕುಡಿಯುವ ನೀರು ಸರಬರಾಜು ಯೋಜನೆಯ ಅಂದಾಜು ಮೊತ್ತ 5316 ಲಕ್ಷ ರೂ.ಗಳ ಶಂಕುಸ್ಥಾಪನೆಯನ್ನು ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಶ್ರೀ ಬೈರತಿ ಸುರೇಶ ಕಾರ್ಯಕ್ರಮವನ್ನು ಉದ್ಘಾಟಿಸುವರು. ಧಾರವಾಡ ಗ್ರಾಮೀಣ ವಿಧಾನಸಭಾ ಶಾಸಕರು ಹಾಗೂ ಬೆಂಗಳೂರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷರು ಶ್ರೀ ವಿನಯ ಕುಲಕರ್ಣಿ ಹಾಗೂ ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರ ಗೌರವಾನ್ವಿತ ಉಪಸ್ಥಿತಿಯಲ್ಲಿ ನೆರವೇರಲಿದೆ. ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅಧ್ಯಕ್ಷತೆ ವಹಿಸುವರು. ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ವಿಶೇಷ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ವಿನಾಯಕ ಮಾಲಿ ಪಾಟೀಲ, ಅತಿಥಿಗಳಾಗಿ ಪಾಲ್ಗೊಳ್ಳುವರು.

ಬೆಂಗಳೂರು ನಗರಾಭಿವೃದ್ಧಿ ಇಲಾಖೆ ಸರ್ಕಾರದ ಕಾರ್ಯದರ್ಶಿಗಳಾದ ಶ್ರೀಮತಿ ದೀಪ ಚೋಳನ್, ಯಾದಗಿರಿ ಜಿಲ್ಲಾ ಪಂಚಾಯತ್, ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಆಡಳಿತಾಧಿಕಾರಿಗಳು ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಇಲಾಖೆ ಮತ್ತು ಸರ್ಕಾರದ ಕಾರ್ಯದರ್ಶಿಗಳಾದ ಶ್ರೀ ಮನೋಜ್ ಜೈನ್, ಬೆಂಗಳೂರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕರು ಡಾ.ಸೆಲ್ವಮಣಿ.ಆರ್, ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಬೆಂಗಳೂರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಜಂಟಿ ವ್ಯವಸ್ಥಾಪಕ ನಿರ್ದೇಶಕರು ಶ್ರೀ ಜ್ಞಾನೇಂದ್ರ ಕುಮಾರ ಗಂಗ್ವಾರ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು ನಗರಸಭೆ ಯಾದಗಿರಿ ಸರ್ವರಿಗೂ ಆದರದ ಸ್ವಾಗತ ಕಲಬುರಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮುಖ್ಯ ಅಭಿಯಂತರರು ಪ್ರವೀಣ ಲಿಂಗಯ್ಯ, ಯಾದಗಿರಿ ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರು ಶ್ರೀ ಲಕ್ಷ್ಮೀಕಾಂತ, ಕಲಬುರಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಅಭಿಯಂತರರು ಶ್ರೀ ನರಸಿಂಹರಡ್ಡಿ ಎನ್, ಯಾದಗಿರಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಶ್ರೀ ಅಶೋಕ ಕುಮಾರ, ಯಾದಗಿರಿ ನಗರಸಭೆ ಪೌರಾಯುಕ್ತರು ಶ್ರೀ ಉಮೇಶ ಚವ್ಹಾಣ್, ಯಾದಗಿರಿ ನಗರಸಭೆ ಸಹಾಯಕ ಕಾರ್ಯನಿರ್ವಹಕ ಅಭಿಯಂತರರು ಶ್ರೀ ರಜನಿಕಾಂತ್ ಶೃಂಗೇರಿ, ಆರೋಗ್ಯವೇ ಭಾಗ್ಯ ಸ್ವಚ್ಛತೆಯೇ ಆರೋಗ್ಯದ ಮೂಲಮಂತ್ರ "ನೀರು ಅತಿ ಅಮೂಲ್ಯ ಅದನ್ನು ಮಿತವಾಗಿ ಬಳಸಿ" ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗಸುಗೂರು : ಪಿ.ಬಿ.ಎ ಸೆಂಟ್ರಲ್ ಶಾಲೆಯಲ್ಲಿ ಜಗಜೀವನ್ ರಾಮ್ ಜನ್ಮದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರ. ಎ. 5.- ಪಟ್ಟಣದಲ್ಲಿರುವ ಶ್ರೀಶೈಲ ಮಲ್ಲಿಕಾರ್ಜುನ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಪಿಬಿಎ ಸೆಂಟ್ರಲ್ ಶಾಲೆಯಲ್ಲಿ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ರವರ 118 ನೇ ಜನ್ಮದಿನಾಚರಣೆಯನ್ನು ಶ್ರೀಶೈಲ ಮಲ್ಲಿಕಾರ್ಜುನ ಶಿಕ್ಷಣ ಹಾಗೂ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಶರಣಪ್ಪ ಮೇಟಿ ಅವರು ಹಸಿರು ಕ್ರಾಂತಿಯ ಹರಿಕಾರ ಡಾ ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಜನ್ಮದಿನವನ್ನು ಆಚರಣೆ ಮಾಡಿ ಡಾಕ್ಟರ್ ಬಾಬು ಜಗಜೀವನ್ ರಾಮ್ ರವರ 118ನೇ ಜನ್ಮದಿನಾಚರಣೆ ಶುಭ ಕೋರಿದರು.


ಈ ಸಂದರ್ಭದಲ್ಲಿ ಶಿಕ್ಷಕರಾದ ವೆಂಕಟೇಶ್ ಅವರು ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಡಾಕ್ಟರ್ ಬಾಬು ಜಗಜೀವನ್ ರಾಮ್ ರವರ ಜೀವನ ಮತ್ತು ಸಾಧನೆಯ ಕುರಿತು ವಿಸ್ತಾರವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಜೇಮ್ಸ್, ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಶಿಕ್ಷಕ ಗಂಗಾಧರ ಕಾರ್ಯಕ್ರಮ ನಿರೂಪಣೆ ಮಾಡಿದರು.

# ಸಿಯುಕೆಯಲ್ಲಿ ಡಾ. ಬಾಬು ಜಗಜೀವನ ರಾಮ ಅವರ 118 ನೇ ಜನ್ಮ ದಿನಾಚರಣೆ

ಕಲ್ಬುರ್ಗಿ: "ಡಾ. ಬಾಬು ಜಗಜೀವನ ರಾಮ ಭಾರತದ ಹೆಮ್ಮೆ ಮತ್ತು ಮಹಾನ ನಾಯಕ. ಅವರು ಯುವ ಮನಸ್ಸುಗಳಿಗೆ ಸ್ಫೂರ್ತಿ ಮತ್ತು ಮಾದರಿಯಾಗಿದ್ದಾರೆ" ಎಂದು ಸಿಯುಕೆಯ ಗೌರವಾನ್ವಿತ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು. ಇಂದು ಅವರು ಸಿಯುಕೆಯಲ್ಲಿ ಡಾ. ಬಾಬು ಜಗಜೀವನ್ ರಾಮ ಅವರ 118 ನೇ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಮಾತನಾಡುತ್ತಿದ್ದರು. ಅವರು ಮತ್ತಷ್ಟು ಮಾತನಾಡಿ "ಡಾ. ಬಾಬು ಜಗಜೀವನ ರಾಮ ದೇಶವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಅಂತಹ ಮಹಾನ ವ್ಯಕ್ತಿತ್ವವನ್ನು ಸ್ಮರಿಸುವ ಸಮಯ ಇದು. ಕೃಷಿ ಕ್ಷೇತ್ರದ ಕೊಡುಗೆಯ ಸಹಾಯದಿಂದ ಭಾರತವು ಸ್ಥಿರವಾದ ಆರ್ಥಿಕ ಬೆಳವಣಿಗೆಯನ್ನು ಸಾಧಿಸಿದೆ. ಡಾ. ಬಾಬು ಜಗಜೀವನ ರಾಮ ಅವರ 'ಹಸಿರು ಕ್ರಾಂತಿಯ' ದೃಷ್ಟಿಕೋನದಿಂದಾಗಿ ಇದು ಸಾಧ್ಯವಾಯಿತು" ಎಂದು ಅವರು ಹೇಳಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕುವೆಂಪು ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ದೇವಿದಾಸ ಜಿ. ಬಿ. ಅವರು ಮಾತನಾಡಿ "ಡಾ. ಬಾಬು ಜಗಜೀವನ ರಾಮ ಅವರು ಭಾರತದ ನಕ್ಷತ್ರ. ಅವರು ದಲಿತರನ್ನು ಸಮಾಜದಿಂದ ಪ್ರತ್ಯೇಕಿಸುವ ಬದಲು ಗುಲಾಮಗಿರಿಯಿಂದ ಮುಕ್ತಗೊಳಿಸುವ ಕನಸು ಕಂಡಿದ್ದರು. ಸಮುದಾಯ ಮತ್ತು ರಾಷ್ಟ್ರಕ್ಕಾಗಿ ಅವರ ಉದಾರ ಮೌಲ್ಯಗಳು ಮತ್ತು ಪ್ರಜಾಪ್ರಭುತ್ವ ಬದ್ಧತೆ ಗಮನಾರ್ಹವಾಗಿದೆ" ಎಂದು ಹೇಳಿದರು.

ಅವರು ಮತ್ತಷ್ಟು ಮಾತನಾಡಿ "ಡಾ. ಬಾಬು ಜಗಜೀವನ ರಾಮ ಬಾಂಗ್ಲಾದೇಶ ವಿಮೋಚನೆಯ ಕ್ಷಣದ ವ್ಯಕ್ತಿ. ಅವರು ಗ್ರಾಮೀಣ ಕಾರ್ಮಿಕ ಚಳುವಳಿಯನ್ನು ಪ್ರಾರಂಭಿಸಿದರು. ಅವರು ಆಧ್ಯಾತ್ಮಿಕ ಮತ್ತು ಶ್ರೇಷ್ಠ ಮೌಲ್ಯಗಳ ವ್ಯಕ್ತಿ. ಅವರು ಸ್ವಾತಂತ್ರ್ಯ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದ್ದಾರೆ" ಎಂದರು. ಸಮಾನ ಅವಕಾಶಗಳ ಕೋಶದ ಅಧಿಕಾರಿ ಪ್ರೊ. ದೇವರಾಜಪ್ಪ ಎಲ್ಲರನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಡಾ. ಭಾವನಾ ಕಾರ್ಯಕ್ರಮವನ್ನು ನಿರೂಪಿಸಿದರು. ಕಾರ್ಯಕ್ರಮದ ಸಂಯೋಜಕ ಡಾ. ಸಂಜೀವರಾಯಪ್ಪ ವಂದಿಸಿದರು. ಸಂಗೀತ ಮತ್ತು ಲಲಿತಕಲಾ ವಿಭಾಗದ ವಿದ್ಯಾರ್ಥಿಗಳು ರಾಷ್ಟ್ರಗೀತೆ ಮತ್ತು ನಾಡ ಗೀತೆಯನ್ನು ಹಾಡಿದರು. ಪ್ರೊ. ಬಿಮಾರಾವ್ ಭೋಸ್ಲೆ, ಡಾ. ಬಸವರಾಜ ಕುಬಕಡ್ಡಿ, ಡಾ. ಅಖಿಲೇಶ್, ಎಲ್ಲಾ ಡೀನರು, ಮುಖ್ಯಸ್ಥರು, ಸಂಶೋಧನಾ ವಿದ್ವಾಂಸರು, ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಯ ಶಿಕ್ಷಕನ ಪುತ್ರನ ಅದ್ಭುತ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಕುಕನೂರು ತಾಲೂಕಿನ ಮಂಗಳೂರು ಗ್ರಾಮದ ಸರ್ಕಾರಿ ಶಾಲೆಯ ಶಿಕ್ಷಕನ ಮಗನಾದ ಪ್ರಜ್ವಲ್ ಮಡಿವಾಳರ್ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ 567 ಅಂಕಗಳನ್ನು 94.50% ಪ್ರತೀಶತ ಪಡೆದು ತಾನು ಕಲಿಯುತ್ತಿರುವ ಮಂಗಳೂರು ಸರ್ಕಾರಿ ಪದವಿ ಪೂರ್ವ ಮಹಾವಿದ್ಯಾಲಯಕ್ಕೆ ಪ್ರಥಮ ಸ್ಥಾನವನ್ನು ಪಡೆದಿದ್ದಾರೆ.

ತಂದೆ ಸುರೇಶ್ ಮಡಿವಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬೈರನಾಯಕನಹಳ್ಳಿಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದು ತಾಯಿ ಜಯಶ್ರೀಯವರಾಗಿದ್ದು ಮನೆಯೇ ಮೊದಲ ಪಾಠಶಾಲೆ ಎಂಬುವಂತೆ ಮನೆಯಲ್ಲಿ ತಂದೆ ತಾಯಿ ಇಬ್ಬರು ಮಗನಿಗೆ ಒಳ್ಳೆಯ ಸಂಸ್ಕಾರ ಒಳ್ಳೆ ಶಿಕ್ಷಣವನ್ನು ಕಲಿಸಿರುತ್ತಾರೆ. ನಾನು ಟ್ಯೂಷನ್‌ಗೆ ಹೋಗದೆ ಮನೆಯಲ್ಲೆ ಕುಳಿತು ಓದುತ್ತಿದ್ದೆ. ಓದುವುದಕ್ಕಾಗಿಯೇ ಸಮಯನಿಗದಿಪಡಿಸಿಕೊಂಡಿರಲಿಲ್ಲ. ಆಸಕ್ತಿ ಮೂಡಿದಾಗ ಆಸಕ್ತಿಯಿಂದ ಓದುತ್ತಿದ್ದೆ. ಆನಂತರ ಓದಿದ ವಿಷಯಗಳನ್ನು ಚೆನ್ನಾಗಿ ಪುನರ್ಮನನ ಮಾಡಿಕೊಳ್ಳುತ್ತಿದ್ದೆ. ಇದರಿಂದ ಹೆಚ್ಚಿನ ಅಂಕ ಗಳಿಸಲು ಸಾಧ್ಯವಾಯಿತು". ಎಂದು ವಿದ್ಯಾರ್ಥಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಭವಿಷ್ಯದಲ್ಲಿ ಏಂಖ, ಐಎಎಸ್, ಡಾಕ್ಟರ್ ಆಗಬೇಕೆಂದು ಕನಸಿದೆ ಎಂದು ವಿದ್ಯಾರ್ಥಿ ತಿಳಿಸಿದ್ದಾರೆ

ವಿದ್ಯಾರ್ಥಿಯ ಸಾಧನೆಗೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗುತ್ತಿದೆ ಪ್ರಜ್ವಲನ ಈ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿ ಪ್ರಾಚಾರ್ಯರು ಉಪನ್ಯಾಸಕರು ಸಿಬ್ಬಂದಿ ಸ್ನೇಹಿತರು ಹಾಗೂ ಪೋಷಕರು ಹರ್ಷವನ್ನು ವ್ಯಕ್ತಪಡಿಸಿ ಅಭಿನಂದನೆಯನ್ನು ತಿಳಿಸಿದ್ದಾರೆ.

# ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.08–ಬಳ್ಳಾರಿ(ನಗರ) ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಒಟ್ಟು 64 ಅಂಗನವಾಡಿ ಸಹಾಯಕಿಯರ ಆಯ್ಕೆಗಾಗಿ ಆಧಿಸೂಚನೆ ಹೊರಡಿಸಲಾಗಿದ್ದು, ಈಗಾಗಲೇ ತಾತ್ಕಾಲಿಕವಾಗಿ ಆಯ್ಕೆಗೊಂಡ ಅಂಗನವಾಡಿ ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ. ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದು ಎಂದು ಬಳ್ಳಾರಿ ನಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

ಆಯ್ಕೆಪಟ್ಟಿಯನ್ನುಸಂಬಂಧಿಸಿದ ಶಿಶುಅಭಿವೃದ್ಧಿಯೋಜನಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆ, ಕ್ಷೇತ್ರಶಿಕ್ಷಣಾಧಿಕಾರಿಗಳ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ತಹಶೀಲ್ದಾರರ ಕಚೇರಿ, ತಾಲ್ಲೂಕು ಪಂಚಾಯತ್, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಏ.22 (ರಜೆ ದಿನಗಳನ್ನು ಹೊರತುಪಡಿಸಿ) ರಂದು ಮಧ್ಯಾಹ್ನ 1.30 ರ ವರೆಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳಿಗೆ ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸಬಹುದು.

ಹೆಚ್ಚಿನಮಾಹಿತಿಗಾಗಿದೂ.08392–268609 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಿಶಾ ಸಮಿತಿ ನಾಮ ನಿರ್ದೇಶಿತ ಸದಸ್ಯರಾಗಿ ಕಾಶೀರಾಯಗೌಡ ನೇಮಕ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕಿನ ಪೀರಾಪೂರ ಗ್ರಾಮದವರಾದ ಕಾಶೀರಾಯಗೌಡ ಗುರನಗೌಡ ಬಿರಾದಾರ ಇವರನ್ನು ಜಿಲ್ಲಾ ದಿಶಾ ಸಮಿತಿಗೆ ನಾಮ ನಿರ್ದೇಶಿತ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ. ಮಂಗಳವಾರ ವಿಜಯಪುರ ನಗರದ ಲೋಕಸಭಾ ಸಂಸದರ ಕಾರ್ಯಾಲಯದಲ್ಲಿ ನಡೆದ ಸಭೆಯಲ್ಲಿ ಇವರ ನೇಮಕದ ಆದೇಶವನ್ನು ಪ್ರಕಟಿಸಲಾಯಿತು. ಈ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ ಅವರು ಮಾತನಾಡಿ ಕೇಂದ್ರ ಸರ್ಕಾರದ ಉದ್ದೇಶಿತ ಕಾರ್ಯಕ್ರಮಗಳ ಅನುಷ್ಠಾನ, ಪ್ರಗತಿ ಪರಿಶೀಲನೆ ಹಾಗೂ ಅವುಗಳನ್ನು ಬಲಪಡಿಸುವ ಉದ್ದೇಶದಿಂದ ರಚನೆಗೊಂಡಿರುವ ಈ ಮಹತ್ವದ ಸಮಿತಿಗೆ ನಿಮ್ಮನ್ನು ನಾಮನಿರ್ದೇಶಿತಗೊಳಿಸಲಾಗಿದೆ, ಸೇವೆಯನ್ನು ಮಾಡುವ ಉತ್ತಮ ಅವಕಾಶ ಸಿಕ್ಕಿದೆ ಇದರ ಸದ್ಬಳಕೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಈ ವೇಳೆ ಮುಖಂಡರಾದ ವಾಯ್.ವಾಯ್.ಹಿಪ್ಪರಗಿ, ಸಿದ್ದನಗೌಡ ಬಿರಾದಾರ (ಕಾರಗನೂರ), ಸುರೇಶ ಕುಮಾರ ಇಂಗಳಗೇರಿ (ಪೀರಾಪೂರ), ಮಡಿವಾಳಪ್ಪಗೌಡ ಬಿರಾದಾರ, ಶಿವನಗೌಡ ಪಾಟೀಲ (ಗೊಟ–ಖಂಡಕಿ), ಬಸನಗೌಡ ಚಿಂಚೋಳಿ, ಅಯ್ಯಪ್ಪ ದೊಡ್ಡಮನಿ, ಸುಭಾಸ ನಡುವಿನಮನಿ (ಗುಂಡುಕನಾಳ) ಮತ್ತಿತರರು ಇದ್ದರು.

# ಮಕ್ಕಳ ಹಾಜರಾತಿ, ಆಹಾರ ವಿತರಣೆ ಕುರಿತು ಮಾಹಿತಿ ಸಂಗ್ರಹ




ಮಲ್ಲಮ್ಮ ನುಡಿ ವಾರ್ತೆ


ಕೊಪ್ಪಳ : ಜಿಲ್ಲೆಯಲ್ಲಿರುವ ಕೂಸಿನ ಮನೆ ಕಾರ್ಯನಿರ್ವಹಣೆ ಕುರಿತು *ಲಂಡನ್ ಕಿಂಗ್ಸ್ ಕಾಲೇಜು ಸಂಶೋಧನಾ ತಂಡವು ದಿನಾಂಕ:08–04–2025ರಂದು ಕೊಪ್ಪಳ ತಾಲೂಕಿನ ಹಲಗೇರಿ ಕೂಸಿನ ಮನೆಗೆ ಜೊಸೆಫ್ ಪೌಲ್ ಮತ್ತು ತಂಡ* ಭೇಟಿ ನೀಡಿ ಮಾಹಿತಿ ಸಂಗ್ರಹಿಸಿತು.

ಕೂಸಿನ ಮನೆಯಲ್ಲಿಯ ಮಕ್ಕಳ ದಾಖಲಾತಿ ರಜಿಸ್ಟರ್ ಪರಿಶೀಲಿಸಿ ಕೇರ್ ಟೇಕರ್ ಗಳಿಗೆ ಹಣ ಪಾವತಿಯಾಗಿರುವ ಬಗ್ಗೆ ಸಂವಾದ ನಡೆಸಿತು. ನಂತರ ಪ್ರತಿ ದಿನ ಮಕ್ಕಳಿಗೆ ಮುಂಜಾನೆ ಮತ್ತು ಮಧ್ಯಾಹ್ನ ಆಹಾರ ವಿತರಣೆ ಕುರಿತು ಪಂಚಾಯತ ಅಭಿವೃದ್ಧಿ ಅಧಿಕಾರಿ ಹಾಗು ಕೇರ್ ಟೇಕರ್ಸ್ ವಿವರಿಸಿದರು. ಕೂಸಿನ ಮನೆಗೆ ಬರುವ ಮಕ್ಕಳ ದಾಖಲಾತಿ, ಮಕ್ಕಳ ಆರೈಕೆ, ಪೌಷ್ಠಿಕ ಮತ್ತು ಅಪೌಷ್ಠಿಕ ಮಕ್ಕಳಿಗೆ ಮೆನು ಚಾರ್ಟ ಪ್ರಕಾರ ಆಹಾರ ವಿತರಣೆ, ಮಕ್ಕಳ ಆರೋಗ್ಯ ತಪಾಸಣೆ ಮತ್ತು ಮಕ್ಕಳ ಆರೈ–ಕೆದಾರರ ವೇತನಕ್ಕೆ ಸಂಬಂಧಿಸಿದ ವಹಿಗಳನ್ನು ಪರಿಶೀಲಿಸಿದರು. ಪಾಲಕರು ತಮ್ಮ ಮಕ್ಕಳನ್ನು ಕೂಸಿನ ಮನೆಯಲ್ಲಿ ಬಿಟ್ಟು ಬರುತ್ತಿರುವದರಿಂದ ಆಗುತ್ತಿರುವ ಅನುಕೂಲತೆ ಬಗ್ಗೆ ಮಾಹಿತಿ ಸಂಗ್ರಹಿಸಿದರು.

ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಕೂಲಿ ಕೆಲಸಕ್ಕೆ ಪಾಲಕರು ಹೋಗುತ್ತಿರುವದರಿಂದ ಮಕ್ಕಳ ಆರೈಕೆಗೆ ಕೂಸಿನ ಮನೆ ಬಹಳಷ್ಟು ಅನುಕೂಲವಾಗಿದೆ ಎಂದು ಪಾಲಕರಾದ ಸುನಂದಾ ವಿವರಿಸಿ ಸದರಿ ಕೇಂದ್ರದಲ್ಲಿ ಮಕ್ಕಳಿಗೆ ಹಾಲು, ಮೊಟ್ಟೆ, ಬಾಳೆಹಣ್ಣು, ಹೆಸರು ಬೆಳೆ ಪಾಯಸ, ರಾಗಿ ಗಂಜಿ, ಉಪ್ಪಿಟ್ಟು ಸೇವನೆ ಮಾಡುತ್ತಿರುವದರಿಂದ ಮಕ್ಕಳಲ್ಲಿ ಅಪೌಷ್ಠಿಕ ಕೊರತೆ ನಿಗಿಸುತ್ತದೆ ಎಂಬ ಮಾಹಿತಿ ನೀಡಿದರು. ಪ್ರತಿ ತಿಂಗಳಿಗೊಮ್ಮೆ ಕೂಸಿನ ಮನೆಯ ಮಕ್ಕಳ ಆರೋಗ್ಯ ತಪಾಸಣೆ ಜರುಗಿಸಿ ಅವರ ಬೆಳವಣಿಗೆ,ತೂಕ ಇತ್ಯಾದಿ ಮಾಹಿತಿಯನ್ನು ರಜಿಸ್ಟರ್ ನಲ್ಲಿ ದಾಖಲಿಸುತ್ತಿರುವದರಿಂದ ಪ್ರತಿ ಮಗುವಿನ ಆರೋಗ್ಯದ ಖಚಿತ ಪಡಿಸಿಕೊಳ್ಳಲು ಅನುಕೂಲವಾಗುತ್ತಿರುವ ಕುರಿತು ಪಂಚಾಯತ ಅಭಿವೃದ್ಧಿ ಅಧಿಕಾರಿ ವಿವರಿಸಿದರು. ಸಂಶೋಧನಾ ತಂಡವು ಹಲಗೇರಿ ಕೂಸಿನ ಮನೆ ಕಾರ್ಯನಿರ್ವಹಣೆ ಕುರಿತು ಮೆಚ್ಚುಗೆ ವ್ಯಕ್ತಪಡಿಸಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಯಲ್ಲಪ್ಪ ಓಜನಹಳ್ಳಿ, ಪಂಚಾಯತ ಅಭಿವೃದ್ಧಿ ಅಧಿಕಾರಿ ಅಶೋಕ ರಾಂಪುರ, ಕಾರ್ಯದರ್ಶಿ ದೊಡ್ಡನಗೌಡ ಪಾಟೀಲ್, ಗ್ರಾಮ ಪಂಚಾಯತ ಸದಸ್ಯರಾದ ಕಳಕನಗೌಡ ಹಳೆಮನಿ, ಮಕ್ಕಳ ಆರೈ–ಕೆದಾರರಾದ ಭರಮವ್ವ ಹರಿಜನ, ಅನ್ನಪೂರ್ಣ ಸಂಜಿವಗೌಡ್ರ, ಡಿಇಓ ಪಂಚಾಕ್ಷರಿ, ಮಾಲತೇಶ ಹಾಜರಿದ್ದರು.

# ಬೆಸ್ಟ್ ಪಿಯು ಕಾಲೇಜ ವಿದ್ಯಾರ್ಥಿಗಳ ಉತ್ತಮ ಸಾಧನೆ



ಮಲ್ಲಮ್ಮ ನುಡಿ ವಾರ್ತೆ

ಮಿಣಜಗಿ ಕ್ರಾಸ್: ಶ್ರೀ ಘನಮಟೇಶ್ವರ ಶಿಕ್ಷಣ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ ಬೆಸ್ಟ್ ಪಿಯು ಕಾಲೇಜಿನ 2024–25 ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು 100 ಕ್ಕೆ 95.04 ರಷ್ಟು ಫಲಿತಾಂಶ ಪಡೆದು ಸಾಧನೆ ಗೈದಿದ್ದಾರೆ. ವಿಜ್ಞಾನ ವಿಭಾಗದಲ್ಲಿ: ಒಟ್ಟು 221 ವಿದ್ಯಾರ್ಥಿಗಳು ಪರೀ–ಕ್ಷೆಗೆ ಹಾಜರಾಗಿದ್ದು, ಕುಮಾರ ಗುಂಡುರಾಜ್ ಕಲಬುರಗಿ ಶೇ.94.83. ಪಡೆದು ಪ್ರಥಮ ಸ್ಥಾನ ಗಳಿಸಿದ್ದಾರೆ, ಕುಮಾರ ಮನೋಜ ಅಪ್ಪಾಸಾಹೇಬ ಮುರಾಳ ಶೇ.92.5 ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾರೆ. ಕುಮಾರ ಕಿರಣಕುಮಾರ ಆಲ್ಯಾಲ 91.5 ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ. ಜೀವಶಾಸ್ತ್ರದಲ್ಲಿ ಬಸನಗೌಡ ರಾಮನಗೌಡ ಬಿರಾದಾರ 100 ಕ್ಕೆ100 ರಷ್ಟು ಪಡೆದು ಉತ್ತಮ ಸಾಧನೆ ಮಾಡಿದ್ದಾನೆ. ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಸ್.ಎಂ.ಸಜ್ಜನ, ಪ್ರಾಚಾರ್ಯ ಬಿ.ಎಸ್.ಮಾಲಿಪಾಟೀಲ ಉಪ ಪ್ರಾಚಾರ್ಯ ಎಂ.ಮಾರಣ್ಣ ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

# ಗ್ಯಾರಂಟಿ ಯೋಜನೆಗಳ ಲಾಭ ಪಡೆಯಿರಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ:8– ರಾಜ್ಯ ಸರಕಾರದ ಪಂಚ ಗ್ಯಾರಂಟಿಗಳ ಸೌಲಭ್ಯವನ್ನು ಬಹುತೇಕ ಎಲ್ಲ ಅರ್ಹ ಫಲಾನುಭವಿಗಳಿಗೆ ಮುಟ್ಟಿಸಲಾಗಿದೆ ಆದಾಗ್ಯೂ ಯಾರಿಗಾದರೂ ಯೋಜನೆಗಳ ಲಾಭ ಸಿಗದಿದ್ದಲ್ಲಿ ತಮ್ಮ ಕಚೇರಿಯನ್ನು ಸಂಪರ್ಕಿಸುವಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶರಣಿಕ ಕುಮಾರ ದೋಕಾ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ರಾಜ್ಯ ಸರಕಾರದ ಗೃಹಲಕ್ಷ್ಮೀ ಯೊಜನೆ ಅಡಿಯಲ್ಲಿ ಪ್ರತಿ ಕುಟುಂಬ ಯಜಮಾನನಿಗೆ ರೂ.2ಸಾವಿರ, ಗೃಹಜ್ಯೋತಿ ಅಡಿಯಲ್ಲಿ 200 ಯುನಿಟ್ ವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಶಕ್ತಿ ಯೋಜನೆ ಮಹಿಳೆಯರಿಗೆ ವರದಾನವಾಗಿದ್ದು, ಕಡು ಬಡವರು ಕೂಡ ರಾಜ್ಯದ ಮೂಲೆ ಮೂಲೆಗಳಲ್ಲಿ ಇರುವ ದೇವಸ್ಥಾನಗಳಿಗೆ ತೆರಳಿ ದರ್ಶನ ಪಡೆಯುತ್ತಿದ್ದಾರೆ ಜತೆಗೆ ಪ್ರವಾಸಿ ತಾಣಗಳನ್ನು ವೀಕ್ಷಣೆ ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

ಅನ್ನಭಾಗ್ಯ ಯೋಜನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಹತ್ವಾಕಾಂಕ್ಷೆ ಯೋಜನೆಯಾಗಿದ್ದು ಪಡಿತರ ಚೀಟಿಯಲ್ಲಿ ಹೆಸರಿರುವ ಕುಟುಂಬದ ಪ್ರತಿ ಸದಸ್ಯರಿಗೆ ತಲಾ 10 ಕಿಲೋ ಧಾನ್ಯಗಳ ವಿತರಣೆ ಮಾಡಲಾಗುತ್ತಿದೆ. ಇದರ ಜತೆಗೆ ಯುವನಿಧಿಯನ್ನು ಸಹ ಸಮರ್ಪಕವಾಗಿ ಅನುಷ್ಠಾನ ಮಾಡಲಾಗಿದೆ. ಯೋಜನೆಗಳಲ್ಲಿ ಯಾವುದೇ ರೀತಿಯ ತೊಡಕುಗಳು ಇದ್ದಲ್ಲಿ ನೇರವಾಗಿ ಮಿನಿ ವಿಧಾನಸೌಧ ಸಂಕೀರ್ಣದ ಸಿ.ಬ್ಲಾಕ್ ಕೊಠಡಿ ಸಂಖ್ಯೆ ಸಿ–1 ಮೊದಲನೆಯ ಮಹಡಿ ಚಿತ್ತಾಪುರ ರಸ್ತೆ ಯಾದಗಿರಿ ಸಂಪರ್ಕಿಸಲು ತಿಳಿಸಿದ್ದಾರೆ.

## ರಾಜ್ಯ ಬಣಜಿಗ ಸಂಘದ ಮಹಾಪೋಷಕರ ಅಭ್ಯರ್ಥಿಯಾಗಿ ಅಂದಪ್ಪ ಜವಳಿ ನಾಮಪತ್ರ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯ ಬಣಜಿಗ ಸಂಘದ ಮಹಾಪೋಷಕರ ಅಭ್ಯರ್ಥಿ ಯಾಗಿ ಕುಕನೂರಿನ ಅಂದಪ್ಪ ಜವಳಿ ಇವರು ಇಂದು ನಾಮಪತ್ರ ಸಲ್ಲಿಸಲಾಹಿತು.

ಯಲಬುರ್ಗಾ ತಾಲೂಕಿನ ಅಧ್ಯಕ್ಷ ಬಸರಾಜ ಕಜ್ಜಿ, ಹಾಗೂ ಈರಣ್ಣ ತಮಿಳನಾಳ, ವಿಜಯ ಕುಮಾರ್ ಕರಂಡಿ, ಮತ್ತು ಕುಕನೂರ್ ತಾಲೂಕಿನ ಹಿರಿಯರಾದ ಬಸವರಾಜ್ ಜೋಳದ, ಕಪ್ಪಾತಪ್ಪ ಅಂಗಡಿ ಈಶಪ್ಪ, ಅಂಗಡಿ ಪ್ರಭು ಗೌಡ ಪಾಟೀಲ್. ಬಸವರಾಜ್ ಅಂಗಡಿ ಸಿ. ಎಸ್. ಅಂಗಡಿ, ಪ್ರಭು ಹೊಂಬಾಳ ಮಲ್ಲಪ್ಪ ಗುತ್ತಿ ಹಾಗೂ ರವಿ ನಾಲ್ವಾಡ್. ಸೂಚಕರಾದ ಕೊಪ್ಪಳದ ಹಿರಿಯ ಮುಖಂಡರಾದ ಶ್ರೀಶೈಲಪ್ಪ ಅಂಗಡಿ ಹಾಗೂ ಇತರರು ಇದ್ದರು.

# ಕಿವುಡು ಮಕ್ಕಳ ವಸತಿಯುತ ಶಾಲಾ ದಾಖಲಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.08–ನಗರದ ಕಂಟೋನ್‌ಮೆಂಟ್‌ನ ಶಾಂತಿಧಾಮ ಆವರಣದ ಸರ್ಕಾರಿ ಕಿವುಡು ಮತ್ತು ಮೂಕ ಮಕ್ಕಳ ಪಾಠಶಾಲೆಯಲ್ಲಿ 1ನೇ ತರಗತಿಯಿಂದ 08 ನೇ ತರಗತಿಯವರೆಗೆ ದಾಖಲಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಸರ್ಕಾರಿ ಕಿವುಡು ಮಕ್ಕಳ ಶಾಲೆಯ ಅಧೀಕ್ಷಕ ಹೆಚ್.ಗೋವಿಂದಪ್ಪ ಅವರು ತಿಳಿಸಿದ್ದಾರೆ.

ಈ ಶಾಲೆಯಲ್ಲಿ ಕಿವುಡು ಮತ್ತು ಮೂಕ ಬಾಲಕರಿಗೆ ಉಚಿತವಾಗಿ ವಿಶೇಷ ಶಿಕ್ಷಣವನ್ನು ನೀಡಲಾಗುತ್ತಿದ್ದು, 6 ವರ್ಷದಿಂದ 14 ವರ್ಷದ ಶ್ರವಣದೋಷ ಮಕ್ಕಳು ದಾಖಲಾತಿ ಪಡೆಯಬಹುದು.

ಶಾಲೆಯಲ್ಲಿ ಮಕ್ಕಳಿಗೆ ಉಚಿತವಾಗಿ ಊಟ ಮತ್ತು ವಸತಿ, ಪಠ್ಯ ಪುಸ್ತಕ, ಸಮವಸ್ತ್ರ ಸೌಲಭ್ಯಗಳೊಂದಿಗೆ ಮಾತಿನ ತರಬೇತಿ, ಶ್ರವಣ ತರಬೇತಿ, ಭಾಷೆ ಕಲಿಕೆ, ಕಂಪ್ಯೂಟರ್ ತರಗತಿ, ಸ್ಮಾರ್ಟ್ ಕ್ಲಾಸ್, ಸೈನ್ಸ್ ಲ್ಯಾಬ್, ವಿಶೇಷ ಶಿಕ್ಷಕರಿಂದ ವಿಷಯ ಭೋದನೆ, ಮಾರ್ಚ್‌ಫಸ್ಟ್, ಸಾಮೂಹಿಕ ನೃತ್ಯ, ಕ್ರೀಡೆ ಹಾಗೂ ಸಹಪಠ್ಯ ಚಟುವಟಿಕೆಗಳನ್ನು ಕಲಿಸಿಕೊಡಲಾಗುತ್ತದೆ.

ಶಾಲೆಗೆ ಶ್ರವಣದೋಷ ಮಕ್ಕಳನ್ನು ದಾಖಲಿಸಲು ಇಚ್ಛಿಸುವ ತಂದೆ, ತಾಯಿ ಮತ್ತು ಪೋಷಕರು ಅಗತ್ಯ ದಾಖಲೆ ಸಲ್ಲಿಸಿ ಪ್ರವೇಶಾತಿ ಪಡೆಯಬಹುದು.

ಬೇಕಾದ ದಾಖಲೆಗಳು:

ಶಾಲೆಪ್ರವೇಶಅರ್ಜಿ (ಉಚಿತವಾಗಿ ನೀಡಲಾಗುವುದು), ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಜನ್ಮ ದಿನಾಂಕ ಪ್ರಮಾಣ ಪತ್ರ, ತಂದೆ ಮತ್ತು ತಾಯಿಯ ಆಧಾರ್ ಕಾರ್ಡ್ ಪ್ರತಿ, ವಿದ್ಯಾರ್ಥಿಯ ಆಧಾರ್ ಕಾರ್ಡ್, ಅಂಗವಿಕಲ ಪ್ರಮಾಣ ಪತ್ರ, ಯುಡಿಐಡಿ ಕಾರ್ಡ್ ಮತ್ತು ಬ್ಯಾಂಕ್ ಪಾಸ್ ಪುಸ್ತಕ ಸೇರಿದಂತೆ ಇತರೆ ದೃಢೀಕೃತ ದಾಖಲಾತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಕಿವುಡು ಮಕ್ಕಳ ಪಾಠಶಾಲೆಯ ಅಧೀಕ್ಷಕರ ಕಚೇರಿ ಅಥವಾ ದೂ.08392–297138 ಹಾಗೂ ಮೊ.9008485380,ಮೊ.9902106670 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.08–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ವ್ಯಾಪ್ತಿಯ 220/11ಕೆವಿ ಅಲ್ಲಿಪುರ್ ವಿದ್ಯುತ್ ಫೀಡರ್‌ನಲ್ಲಿ ವಿದ್ಯುತ್ ತುರ್ತು ನಿರ್ವಹಣೆ ಕಾಮಗಾರಿ ಕೈಗೊಳ್ಳುತ್ತಿರುವುರಿಂದ ಏ.09 ರಂದು ಬೆಳಿಗ್ಗೆ 9.30 ಗಂಟೆಯಿಂದ ಬೆಳಿಗ್ಗೆ 11.30 ಗಂಟೆಯವರೆಗೆ ಫೀಡರ್–76 ರ ವ್ಯಾಪ್ತಿಯ ಮೋರ್‌ಗಲ್ಲಿ, ವಟ್ಟಪ್ಪಗೆರೆ, ಕುಣಿಟಾನ ಮಸೀದಿ, ದಾನಪ್ಪ ಸ್ಟ್ರೀಟ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಳವಂಡಿ ಹೋಬಳಿ ವ್ಯಾಪ್ತಿಯಲ್ಲಿ ಹೆಗ್ಗಿಲ್ಲದೆ ನಡಿತಾ ಇದೆ ಅಕ್ರಮ ಮರಳು ದಂಧೆ !

# ಅಕ್ರಮ ಮರಳು ದಂಧೆಕೋರರಿಗೆ ಸಾಥ್ ಕೊಡ್ತಿದ್ಯಾ ಖಾಕಿ ಪಡೆ..? ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಎಲ್ಲೆಡೆ ಅಕ್ರಮ ಮರಳು ದಂಧೆಯಲ್ಲಿ ಪೊಲೀಸ್ ಇಲಾಖೆಯ ಸಿಬ್ಬಂದಿಯೇ ಶಾಮೀಲಾಗಿರುವ ಚರ್ಚೆ ಜೋರಾಗಿ ನಡೆಯುತ್ತಿದೆ. ಇತ್ತೀಚಿಗೆ ಇಲಾಖೆಯಲ್ಲಿ ವಸೂಲಿ ದಂಧೆಗಳು ಬೆಳಕಿಗೆ ಬರುತ್ತಿರುವುದು ಇಲಾಖೆ ಮೇಲೆ ಜನರು ನಂಬಿಕೆ, ವಿಶ್ವಾಸ ಕಳೆದುಕೊಳ್ಳುತ್ತಿದ್ದಾರೆ. ಹಿರಿಯ ಅಧಿಕಾರಿಗಳೇ ಭ್ರಷ್ಟ ಅಧಿಕಾರಿಗಳ ರಕ್ಷಣೆಗೆ ನಿಲ್ಲುತ್ತಿರುವ ಆರೋಪ ಕೇಳಿಬಂದಿದ್ದು, ಇದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ. ಅಕ್ರಮವಾಗಿ ದಂಧೆಕೋರರಿಗೆ ಹೆಡೆಮುರಿ ಕಟ್ಟಬೇಕಾದ ಪೊಲೀಸರೇ ಅವರೊಂದಿಗೆ ಶಾಮೀಲು ಆಗುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಅಕ್ರಮವಾಗಿ ಮರಳು ಸಾಗಾಟ ನಡೆಯುತ್ತಿದ್ದರೂ, ಗಣಿ ಇಲಾಖೆ ಅಧಿಕಾರಿಗಳು, ಕೊಪ್ಪಳ–ಅಳವಂಡಿ ಪೊಲೀಸ್ ಇಲಾಖೆ, ಕಂದಾಯ ಇಲಾಖೆ, ಗ್ರಾಪಂ ಅಧಿಕಾರಿಗಳು ಮೌನವಾಗಿದ್ದಾರೆ

ಹಿರೇಸಿಂದೋಗಿ, ಅಳವಂಡಿ, ಗೊಂಡಬಾಳ, ಗ್ರಾಪಂ ವ್ಯಾಪ್ತಿಯಲ್ಲಿ ಹಾಗೂ ಹಿರೇಸಿಂದೋಗಿ ಹಿರೇಹಳ್ಳದಲ್ಲಿ ಜೆಸಿಬಿ, ಟಿಪ್ಪರ್, ಟ್ಯಾಕ್ಟರ್, ಬೋಟ್ ಯಂತ್ರಗಳನ್ನು ಬಳಸಿ ರಾಜಾರೋಷವಾಗಿ ಅಕ್ರಮ ಮರಳು ಗಣಿಗಾರಿಕೆ ನಡೆ–ಯುತ್ತಿದೆ. ಅಮೂಲ್ಯ ಪ್ರಾಕೃತಿಕ ಸಂಪತ್ತನ್ನು ರಾಜಾರೋಷವಾಗಿ ಕೊಳ್ಳೆ ಹೊಡೆಯುತ್ತಿದ್ದರೂ, ಅಧಿಕಾರಿಗಳು, ಪೊಲೀಸ್ ಠಾಣೆ ಮೌನ ವಹಿಸುತ್ತಿರುವುದು ಸಾರ್ವಜನಿಕರ ಸಂಶಯಕ್ಕೆ ಕಾರಣವಾಗಿದೆ.

> ಅಕ್ರಮವಾಗಿ ದಂಧೆಕೋರರಿಗೆ ಹೆಡೆಮುರಿ ಕಟ್ಟಬೇಕಾದ ಪೊಲೀಸರೇ ಅವರೊಂದಿಗೆ ಶಾಮೀಲು ಆಗುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಹೀಗಾಗಿ ಈ ದಂಧೆಗಳಿಗೆ ಬ್ರೇಕ್ ಇಲ್ಲದಂತಾಗಿದೆ. ಇನ್ನೂ ಕೆಲವರು ಕಾನೂನು ಪ್ರಕಾರ ವ್ಯವಹಾರ ಮಾಡುತ್ತಿದ್ದರೂ ಸಹ ಅವರಿಂದಲೂ ಕೂಡ ಬಲವಂತವಾಗಿ ಹಣ ಪಡೆಯುತ್ತಿರುವುದು ಸಹ ಬೆಳಕಿಗೆ ಬಂದಿವೆ. ಈ ಘಟನೆಗಳು ನೋಡಿದರೇ ಜನಸಾಮಾನ್ಯರಿಗೆ ಪೊಲೀಸ್ ಇಲಾಖೆಯ ಮೇಲಿದ್ದ ಭಯ ಇನ್ನಿಲ್ಲದಂತಾಗಿದೆ. ಬೇಲಿಯೇ ಎದ್ದು ಹೊಲ ಮೇಯುತ್ತಿರುವಾಗ ಕಾನೂನು ಪಾಲನೆ ಎಲ್ಲಿಂದ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಆಗಿದೆ
>
> – ಶರಣಪ್ಪ, ಸಾಮಾಜಿಕ ಕಾರ್ಯಕರ್ತ

ಇವರ ಈ ಅಕ್ರಮ ಮರಳು ಗಣಿಗಾರಿಕೆ ವಿರುದ್ಧ ಇವರ ಈ ಮೌನ ಕಂಡಾಗ ಪರೋಕ್ಷವಾಗಿ ಇವರು ಇದನ್ನು ಬೆಂಬಲಿಸುವಂತೆ ಕಾಣುತ್ತಿದೆ. ಆದ್ದರಿಂದ ಮರಳು ಮಾಫಿಯಾದವರು ನೀಡುವ 'ಮಾಮೂಲಿ' ಇವರನ್ನೆಲ್ಲ ಮೌನವಾಗಿರುವಂತೆ ಮಾಡಿತ್ತಾ ಎಂಬ ಪ್ರಶ್ನೆ ಸಾರ್ವಜನಿಕರದ್ದಾಗಿದೆ.

ಇನ್ನು ಜಿಲ್ಲಾ ಕೇಂದ್ರಕ್ಕೆ ಅಕ್ರಮವಾಗಿ ಮರಳು ತುಂಬಿದ ಟಿಪ್ಪರ್ ಮತ್ತು ಟ್ರಾಕ್ಟರ್‌ಗಳು ಎಂಟ್ರಿಕೊಡುತ್ತಿವೆ. ಆದರೆ, ಇದನ್ನು ತಡೆಯಲು ವಿಫಲವಾಗಿದ್ದರೆ ಸ್ವಲ್ಪ ದಿನಗಳ ಕಾಲ ಪತ್ರಿಕೆಯಲ್ಲಿ ಹಾಗೂ ಮಾಧ್ಯಮಗಳಲ್ಲಿ ವರದಿ ಬಂದಾಗ ಅಕ್ರಮ ಮಗಳು ಸಾಗಾಟ ಮಾಡುವುದು ಬಂದ್ ಆಗಿ–ತ್ತು ಮತ್ತೆ ಅಕ್ರಮ ಮರಳು ಸಾದಾಟ ಮಾಡೋದು ಹಾಡು ಆಗಲೇ ನೆಡೀತಾ ಇದೆ ಎ ಸುದ್ದಿಯನ್ನು ಆದರು ನೋಡ್ರಿ ಪೊಲೀಸ್ ಇಲಾಖೆ ಹಾಗೂ ಗಡಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಎಚ್ಚೆತ್ತುಕೊಳ್ಳುತ್ತಾರಾ ಎಂದು ಕಾದು ನೋಡಬೇಕಾಗಿದೆ

ಅಕ್ರಮ ಮರಳು ಸಾಗಾಟ ಮಾಡುವ ಸ್ಥಳಕ್ಕೆ 112 ತುರ್ತು ಪೊಲೀಸರು ಸ್ಥಳಕ್ಕೆ ಆಗಮಿಸಿದರು ಆದರೆ ಅಕ್ರಮ ಮರಳು ಸಾದಾಟ ಮಾಡುವ ಸ್ಥಳಕ್ಕೆ ಭೇಟಿ ನೀಡಲಿಲ್ಲ ಹಿರಿಯ ಅಧಿಕಾರಿಗಳಿಗೆ ಕರೆ ಮಾಡಿ ಮಾತಾಡಿದ ಮೇಲೆ ಸ್ಥಳಕ್ಕೆ ಬಂದಂತ ಪೋಲೀಸರು ಅಕ್ರಮಗಳು ಅಡ್ಡೆಕ್ಕೆ ಬೇಟೆ ನೀಡಿಲ್ಲ ಇದು ಸಾರ್ವಜನಿಕರ ಅನುಮಾನಕ್ಕೆ ಕಾರಣವಾಗಿದೆ ಬ್ರಿಜ್ ಮೇಲೆ ನಿಂತು ಫೋಟೋ ತೆಗೆದುಕೊಂಡು ಹೋಗಿದ್ದಾರೆ ಪೊಲೀಸರಿಗೆ ಮಾಹಿತಿ ನೀಡಿದರು ಪ್ರಯೋಜನ ಆಗಿಲ್ಲ ಎಂದು ಸಾರ್ವಜನಿಕರು ಆರೋಪಿಸಿದರು ನೈಸರ್ಗಿಕ ಸಂಪತ್ತು ಲೂಟಿ ತಡೆಯುವುದು ಪೊಲೀಸರ ಪ್ರಮುಖ ಜವಾಬ್ದಾರಿ. ಆದರೆ, ಕೈಚೆಲ್ಲಿ ಕುಳಿತುಕೊಂಡಿರುವುದು ಮಾತ್ರ ನಿಜಕ್ಕೂ ಹಲವು ಅನುಮಾನಗಳಿಗೆ ಎಡೆಮಾಟ್ಟಿಕೊಟ್ಟಿದೆ. ಇನ್ನಾದರೂ ಇಲಾಖೆ ಎಚ್ಚೆತ್ತುಕೊಳ್ಳಬೇಕಿದೆ.

## ರೈತರ ಬೆಳೆಗಳಿಗೆ ಸಮರ್ಪಕವಾಗಿ ನೀರು ಹರಿಸದೆ ರೈತರನ್ನು ಕಡೆಗಣಿಸಿದ ಸಚಿವ ಶಿವರಾಜ ತಂಗಡಗಿ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ:



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಗಂಗಾವತಿಯಲ್ಲಿ 2024 ರ ಜುಲೈ, ಆಗಸ್ಟ್ ತಿಂಗಳಿನಲ್ಲಿ 100 ಟಿಎಂಸಿ ನೀರು ತುಂಬಿದ ತುಂಗಭದ್ರ ಜಲಾಶಯದಿಂದ ರಾಜ್ಯ ಸರ್ಕಾರ ರೈತರ ಎರಡು ಬೆಳೆಗಳಿಗೆ ಸಮರ್ಪಕ ನೀರು ಒದಗಿಸಬಹುದಾಗಿತ್ತು, ಆದರೆ ಹಿಂಗಾರು ಹಂಗಾಮಿಯ ಎರಡನೆಯ ಬೇಸಿಗೆ ಬೆಳೆಗೆ ಎಡದಂಡೆ ಭಾಗದ ಪಾಲಿನ ನೀರು ಇದ್ದರೂ ಕೂಡ ರೈತರ ಬೆಳೆಗಳಿಗೆ ನೀರು ಹರಿಸಲು ತುಂಗಭದ್ರ ನೀರಾವರಿ ಅಧಿಕಾರಿಗಳು ಮತ್ತು ಸಚಿವರಾದ ಶಿವರಾಜ ತಂಗಡಗಿ ಅವರಿಂದ ಉದಾಸೀನತೆ ಮತ್ತು ನಿರ್ಲಕ್ಷ ವಹಿಸಲಾಗುತ್ತಿದೆ, ಅದರಲ್ಲೂ ನೀರಾವರಿ ಸಲಹಾ ಸಮಿತಿಗಳನ್ನು ಕಾಡ ಕಚೇರಿಯಲ್ಲಿ ನಡೆಸದೆ ರೈತರನ್ನು ಕಡೆಗಣಿಸಿ ಬೆಂಗಳೂರಲ್ಲಿ ನಡೆಸಿ ನೀರಿನ ಹಂಚಿಕೆಯ ತಪ್ಪು ಲೆಕ್ಕಗಳನ್ನು ನೀಡಿ ಅನ್ನದಾತರನ್ನು ಒಕ್ಕಲಿಬ್ಬಿಸುವ ಹುನ್ನಾರ ನಡೆಸಲಾಗುತ್ತಿದೆ ಎಂದು ಅಖಿಲ ಕರ್ನಾಟಕ ರಾಜ್ಯ ಅನ್ನದಾತ ರೈತ ಸಂಘ (ರಿ.) ರಾಜ್ಯಾಧ್ಯಕ್ಷ ಶರಣೆಗೌಡ ಅವರು ನಗರದ ಸಿಬಿಎಸ್ ವೃತ್ತದಲ್ಲಿ ರೈತರನ್ನು ಉದ್ದೇಶಿಸಿ ಮಾತನಾಡಿದರು. ನಂತರ ಪ್ರಗತಿಪರ ಹೋರಾಟಗಾರರು, ಕನ್ನಡ ಸೇನೆ ಉತ್ತರ ಕರ್ನಾಟಕದ ಅಧ್ಯಕ್ಷರಾದ ಚನ್ನಬಸವ ಜೆಕಿನ ಮಾತನಾಡಿ ರಾಜಕಾರಣಿಗಳು ಮತ್ತು ಅಧಿಕಾರಿಗಳು ಜಲಾಶಯದ ಮೇಲ್ಭಾಗದ ಕಾರ್ಖಾನೆಗಳಿಗೆ ಮಾರಾಟ ಮಾಡುತ್ತಿದ್ದಾರೆ ಈ ಕುರಿತು ಕೂಡಲೇ ತುಂಗಭದ್ರಾ ಜಲಾಶಯದ ನೀರು ಹಂಚಿಕೆಯಲ್ಲಿ ಆಗುತ್ತಿರುವ ಅಕ್ರಮಗಳ ಕುರಿತು ವಿಶೇಷ ತನಿಖಾ ತಂಡವನ್ನು ರಚನೆ ಮಾಡಿ ಎಡದಂಡೆ ಭಾಗದ ರೈತರಿಗೆ ಜಲಾಶಯದ ಅಚ್ಚುಕಟ್ಟು ಪ್ರದೇಶದ ರೈತರಿಗೆ ಸಮರ್ಪಕ ನೀರು ನೀಡಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ತುಂಗಭದ್ರಾ ಜಲಾಶಯದ ಎಡದಂಡೆ ಭಾಗದಲ್ಲಿ ಮುನಿರಾಬಾದ್ ನಿಂದ ರಾಯಚೂರು ವರೆಗೆ ಸುಮಾರು 100ಕ್ಕೂ ಅಧಿಕ ಉಪ ಕಾಲುವೆಗಳು ಇದ್ದು, ಪ್ರತಿಯೊಂದು ಉಪ ಕಾಲುವೆಗಳ ಕೊನೆ ಭಾಗದ ರೈತರಿಗೆ ಬೆಳೆ ಕೈಗೆ ಬರಬೇಕಾದರೆ ಇನ್ನೂ 15 ರಿಂದ 20 ದಿನಗಳು ಬೇಕಾಗುತ್ತದೆ, ಆದರೆ ರಾಜ್ಯ ಸರ್ಕಾರ 123 ನೆಯ ನೀರಾವರಿ ಸಲಹಾ ಸಮಿತಿಯಲ್ಲಿ ಏಪ್ರಿಲ್ 10 ವರೆಗೆ ನೀರು ಬಿಡಲು ತೀರ್ಮಾನಿಸಿ ಆದೇಶ ಹೊರಡಿಸಲಾಗಿದೆ, ಇದು ರೈತರ ಬದುಕಿಗೆ ಬರೆ ಎಳೆದಂತೆ ಆಗುತ್ತದೆ, ಒಂದು ವೇಳೆ ಏಪ್ರಿಲ್ 10 ಕ್ಕೆ ನೀರು ಬಂದ್ ಮಾಡಿದರೆ ಲಕ್ಷಾಂತರ ರೈತರು ಸಾಲದ ಸುಳಿಯಲ್ಲಿ ಸಿಲುಕುತ್ತಾರೆ, ರೈತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗುತ್ತಾರೆ, ರೈತರ ಮೇಲೆ ವ್ಯತಿರಿಕ್ತ ಪರಿಣಾಮಗಳು ಉಂಟಾಗುತ್ತದೆ, ಇದನ್ನು ತಡೆ–ಯ ಬೇಕಾದರೆ ಏಪ್ರಿಲ್ 20 ವರೆಗೆ ನೀರು ಬಿಡಬೇಕು, ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಯವರು ರೈತರನ್ನು ಸಂಪೂರ್ಣವಾಗಿ ಕಡೆಗಣಿಸಿದ್ದು, ರೈತರ ಪರ ಇರುವ ಸರ್ಕಾರದ ಯೋಜನೆಗಳನ್ನು ರೈತರಿಗೆ ತಲುಪಿಸುವಲ್ಲಿ ವಿಫಲರಾಗಿದ್ದಾರೆ. ರೈತರ ಪರ ಯೋಜನೆಗಳನ್ನು ಕಾರ್ಯಕತಗೊಳಿಸುವಲ್ಲಿ ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಕಾರ್ಮಿಕ ಮುಖಂಡ ಏ. ಹುಲುಗಪ್ಪ ಮಾತನಾಡಿದರು.

ಈ ಸಂದರ್ಭದಲ್ಲಿ ಹಲವಾರು ಸಂಘಟನೆಯ ಮುಖಂಡರು, ಮಹಿಳಾ ಸಂಘಟನೆಗಳು, ಕರವೇ ಮುಖಂಡರು, ದಲಾಲಿ ವರ್ತಕರು, ರೈತರು ಉಪಸ್ಥಿತರಿದ್ದರು.

ಹಕ್ಕೊತ್ತಾಯಗಳು:

ತುಂಗಾ ಭದ್ರಾ ಎಡದಂಡೆ ಕಾಲುವೆಗೆ ಏಪ್ರಿಲ್ 20 ವರೆಗೆ ನೀರು ಬಿಡಬೇಕು.

*ಒಂದು ವೇಳೆ ನೀರು ಬಿಡದೇ ರೈತರು ಸಾಲದ ಸುಳಿಯಲ್ಲಿ ಸಿಲುಕಿ ಆತ್ಮಹತ್ಯೆ ಯಂತಹ ಘಟನೆಗಳು ನಡೆದರೆ ಅದಕ್ಕೆ ಸರ್ಕಾರ ಮತ್ತು ಸಚಿವ ಶಿವರಾಜ್ ಎಸ್ ತಂಗಡಗಿ ಅವರನ್ನು ನೇರ ಹೊಣೆ ಮಾಡಬೇಕು

*ಕೊನೆ ಭಾಗದ ರೈತರ ಬೆಳೆ ಒಣಗಿದರೆ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು

*ಎಡ ದಂಡೆ ಭಾಗದ ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿ ಪಡಿಸಬೇಕು ಭತ್ತ ಖರೀದಿ ಕೇಂದ್ರಗಳು ಸ್ಥಾಪಿಸಬೇಕು

ತುಂಗಾ ಭದ್ರಾ ಜಲಾಶಯದ ನೀರು ಹಂಚಿಕೆಯಲ್ಲಿ ಆಗುತ್ತಿರುವ ಅಕ್ರಮಗಳ ಕುರಿತು ವಿಶೇಷ ತನಿಖಾ ತಂಡ ರಚನೆ ಮಾಡಿ ಕ್ರಮ ಕೈಗೊಳ್ಳಬೇಕು

*ನೀರಾವರಿ ಭಾಗದಲ್ಲಿ ರೈತರನ್ನು ಒಕ್ಕಲೆಬ್ಬಿಸುವ ಅಕ್ರಮ ಕಾನೂನು ಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು

*ಜಲಾಶಯದ ನೀರನ್ನು ಕಾರ್ಖಾನೆಗಳಿಗೆ ಮಾರಾಟ ಮಾಡುವ ಅಧಿಕಾರಿಗಳ ರಾಜಕಾರಣಿಗಳ ಮೇಲೆ ಕ್ರಮ ಜರುಗಿಸಬೇಕು.

# ಬೇವೂರ ಕಾಲೇಜಿಗೆ ಶಶಿಕಲಾ ಪ್ರಥಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.8–ತಾಲೂಕಿನ ಬೇವೂರಿನ ಆದರ್ಶ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಕಲಾ ವಿಭಾಗದಲ್ಲಿ ಉತ್ತಮ ಸಾಧನೆ ಮಾಡಿದ್ದು, ಶಶಿಕಲಾ ದುರಗಪ್ಪ ಮಾದರ 553 ಅಂಕಗಳನ್ನು (ಶೇ.92.16)ಗಳಿಸಿ ವಿದ್ಯಾಲಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾಳೆ.

ಪ್ರತಿಭಾ ಪಾಟೀಲ 552 ಅಂಕ(ಶೇ.92)ಪಡೆದು ದ್ವಿತೀಯ ಸ್ಥಾನ ಹಾಗೂ ಈಶ್ವರ ಚಲವಾದಿ 537 ಅಂಕ(ಶೇ.89.5) ಪಡೆದು ತೃತೀಯ ಸ್ಥಾನ ಪಡೆದ್ದಿದ್ದಾರೆ.





ಪರೀಕ್ಷೆಗೆಕುಳಿತ ವಿದ್ಯಾರ್ಥಿಗಳಲ್ಲಿ 5 ವಿದ್ಯಾರ್ಥಿಗಳು ಪ್ರಶಸ್ತಿ ಸಹಿತ ಪ್ರಥಮ ಸ್ಥಾನ, 18 ವಿದ್ಯಾರ್ಥಿಗಳು ಪ್ರಥಮ ಸ್ಥಾನ, 9 ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಹಾಗೂ 11 ವಿದಾರ್ಥಿಗಳು ತೃತೀಯ ಸ್ಥಾನದಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ಜಿ.ಜಿ.ಮಾಗನೂರ ಹಾಗೂ ಕಾರ್ಯಕಾರಿ ಮಂಡಳಿಯ ಪ್ರಾಚಾರ್ಯ ವ್ಹಿ.ಬಿ.ಅರಹುಣಸಿ ತಿಳಿಸಿದ್ದಾರೆ.

# ಗಾರ್ಡನ ಜಾಗ ತೆರವುಗೊಳಿಸಲು ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ನಗರದಹೊರಹೊಲಯದಲ್ಲಿ ಬರುವ, ಸರ್ವೆ ನಂ, 526/6 ಲೇಔಟನಲ್ಲಿರುವ ಸಾರ್ವತ್ರಿಕ ಮೈಧಾನದ ಜಾಗವನ್ನು ಪಕ್ಕದ ರೆಸ್ಟೂರೆಂಟು ಮಾಲಿಕರು ಅಕ್ರಮವಾಗಿ ಕಬಳಿಕೆ ಮಾಡಿಕೊಂಡು ಅನಧಿಕೃತವಾಗಿ ಕುಟೀರಗಳನ್ನು ನಿರ್ಮಾಣ ಮಾಡಿಕೊಂಡಿದ್ದಾರೆ, ಇಂದಿನವರೆಗೂ ನಗರಸಭೆ ಅಧಿಕಾರಿಗಳು ಯಾವುದೆ ಕ್ರಮಕ್ಕೆ ಮುಂದಾಗುತ್ತಿಲ್ಲವೆಂದು ಆರೋಪಿಸಿ, ಕರ್ನಾಟಕ ಮಾದಿಗರ ಸಂಘ.[ರಿ.] ನಗರಸಭೆ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ನಡೆಸಿದರು, ಹತ್ತಾರು ವರ್ಷಗಳು ಕಳೆದರೂ ಇಲ್ಲಿನ ಅಧಿಕಾರಿಗಳು ಗಾರ್ಡನ ಜಾಗ ತೆರವುಗೊಳಿಸಲು ಮುಂದಾಗಿಲ್ಲ. ಅಕ್ರಮ ಅನಧಿಕೃತ ಜಾಗಗಳನ್ನು ರಕ್ಷಣೆ ಮಾಡುವ ನಗರಸಭೆ ಅಧಿಕಾರಿಗಳು ಅಲ್ಲಿನ ರೆಸ್ಟುರೆಂಟು ಮಾಲೀಕರ ಅವ್ಯವಹಾರಗಳಿಗೆ ಜೊತು ಬಿದ್ದಿದ್ದಾರೆ, ಕೂಡಲೆ ಸದರಿ ಸರ್ವೆ ನಂ, 526/5 ರ ಮೈಧಾನ ತೆರು ಕಾರ್ಯಚರಣೆ ಕೈಗೊಳ್ಳದಿದ್ದಲ್ಲಿ ನಗರಸಭೆ ಅಧಿಕಾರಿಗಳನ್ನೆಹೊಣೆಗಾರರನ್ನಾಗಿಸಿ. ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಧರಣಿ ಕುಳಿತುಕೊಳ್ಳುತ್ತೇವೆ ಎಂದು ಸಂಘದ ಅಧ್ಯಕ್ಷರಾದ ಶಿವುಕುಮಾರ ದೊಡ್ಮನಿ ಎಚ್ಚರಿಕೆ ನೀಡಿದರು, ಈ ಸಮಯದಲ್ಲಿ ಸತ್ಯಾಗ್ರಹ ಸ್ಥಳಕ್ಕೆ ಆಗಮಿಸಿದ ನಗರಸಭೆ ಪೌರಾಯುಕ್ತರಾದ ರಮೇಶ ಬಡಿಗೇರವರು ಏ,30 ರ ಒಳಗಾಗಿ ತೆರವುಗೊಳಿಸುವದಾಗಿ ಭರವಸೆ ನೀಡಿದ ಹಂಬರಹ ನೀಡಿದರು, ತಹಿಸಲ್ದಾರ ಉಮಾಕಾಂತ ಹಳ್ಳೆ ಮನವಿ ಪತ್ರ ಸ್ವೀಕರಿಸಿದರು, ಪ್ರತಿಭಟನೆಯಲ್ಲಿ ಡಿಎಸ್,ಎಸ್,ಜಿಲ್ಲಾ ಸಂಚಾಲಕರಾದ ವ್ ೋ ಹ್ ನ್ ರಾ ಜ ಗೌ ಡ್ , ಜಿ,ಸಂ,ಸಂಚಾಲಕರಾದ ಪರಶುರಾಮ ಮಹಲರೋಜಾ,ಧರ್ಮರಾಜ ನಾಟೇಕಾರ,ಹೊನ್ನಪ್ಪ ನಾಟೇಕಾರ, ಶರಣು ಶೆಟ್ಟಕೇರಿ, ಶಿವುಕುಮಾರ ಇಂದ್ರನಗರ,ಕಂಡಪ್ಪ ಕಂಚನಕವಿ, ಜಗದೀಶ ನುವಾರ,ಮಾಹಾದೇವಪ್ಪ ದೊಡ್ಡಮನಿ, ಸಣ್ಣ ವಸಂತ ಸುರುಪುರಕರ್, ಬಸವರಾಜ ಗುತ್ತಿಪೇಟ, ರಡ್ಡಿ ಚಟನಳ್ಳಿ, ವಿಶ್ವ ಶೆಟ್ಟಿಕೇರಿ, ದೇವು ಮಸರಕಲ್, ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು,

# ಸ್ತ್ರೀಯರ ಆರೋಗ್ಯಕರ ಜೀವನಕ್ಕೆ ಮುಟ್ಟಿನ ನೈರ್ಮಲ್ಯದ ಅರಿವು ಅಗತ್ಯ–ಡಾ.ರಾಜೇಶ್ವರಿ




ದೋರನಹಳ್ಳಿ– ಸ್ತ್ರೀಯರ ಬದುಕಿನುದ್ದಕ್ಕೂ ಆರೋಗ್ಯಕರ ಬದುಕು ಸಾಗಿಸುವಲ್ಲಿ ಮುಟ್ಟಿನ ಸಂದರ್ಭ, ನೈರ್ಮಲ್ಯ ಕಾಪಾಡಿಕೊಳ್ಳುವುದು ತುಂಬಾ ಮಹತ್ವದ್ದಾಗಿದೆ. ಹಾಗೂ ಈ ಮುಟ್ಟಿನ ಕುರಿತು ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರಾದ ಡಾ. ರಾಜೇಶ್ವರಿ ಗುತೆ–ೀದಾರ ಅವರು ಅಭಿಪ್ರಾಯಪಟ್ಟರು.

ಇತ್ತೀಚಿಗೆ ದೋರನಹಳ್ಳಿ ಗ್ರಾಮದಲ್ಲಿ ಬಾಪುಗೌಡ ದರ್ಶನಾಪುರ ಸ್ಮಾರಕ ಮಹಿಳಾ ಪದವಿ ಕಾಲೇಜಿನ ಎನ್.ಎಸ್.ಎಸ್. 'ಎ' ಮತ್ತು 'ಬಿ' ಘಟಕಗಳ ವತಿಯಿಂದ ಹಮ್ಮಿಕೊಂಡ ವಾರ್ಷಿಕ ವಿಶೇಷ ಶಿಬಿರದಲ್ಲಿ 'ಗ್ರಾಮೀಣ ಮಹಿಳೆಯರ ಆರೋಗ್ಯ' ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದ ಅವರು ಹದಿ ವಯಸ್ಸಿನವರು ಮುಟ್ಟಿನ ಸಮಸ್ಯೆಗಳನ್ನು ಹೇಳಿಕೊಳ್ಳದೇ ಇರುವುದರಿಂದ ಹಲವು ದೈಹಿಕ ಹಾಗೂ ಮಾನಸಿಕ ಕಾಯಿಲೆಗೆ ಒಳಗಾಗುತ್ತಾರೆ. ಮುಟ್ಟು ಋತು ಚಕ್ರದ ಒಂದು ಭಾಗವಾಗಿದೆ. ಮತ್ತು ಮಾನವನ ಘನತೆಗೆ ಅಂತರ್ಗತವಾಗಿ ಸಂಬಂಧಿಸಿದೆ ಎಂಬುದು ಮರೆಯಬಾರದು.

ಲಿಂಗ ಅಸಮಾನತೆ, ಮೌಢ್ಯತೆ, ಗೊಡ್ಡು ಸಂಪ್ರದಾಯಗಳು ಮುಂತಾದವು ಮುಟ್ಟನ್ನು ಕುರಿತು ಕಳಂಕವಾಗಿ ಕಾಣಲಾಗುತ್ತದೆ. ಮುಟ್ಟಿನ ನೈರ್ಮಲ್ಯವನ್ನು ನಿರ್ವಹಿಸುವ ಸುರಕ್ಷಿತ ಮತ್ತು ಪರಿಣಾಮಕಾರಿ ವಿಧಾನಗಳ ಬಗ್ಗೆ ತಿಳಿದುಕೊಳ್ಳಬೇಕು. ಇದರಿಂದ ಮುಟ್ಟನ್ನು ಮಹಿಳೆಯರು ಘನತೆಯಿಂದ ನಿರ್ವಹಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಹಾಯಕ ಕೃಷಿ ನಿರ್ದೇಶಕ ಸುನೀಲಕುಮಾರ ಯರಗೋಳ ಅವರು ಕೃಷಿ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಎಂಬ ವಿಷಯದ ಮೇಲೆ ಉಪನ್ಯಾಸ ನೀಡಿದರು. ಹಿರಿಯ ಜಾನಪದ ಕಲಾವಿದ ಲಕ್ಷ್ಮೀಶ ಕವಿಯ ಜೈಮಿನಿ ಭಾರತದ ಕಾವ್ಯವನ್ನು ವಾಚಿಸಿದರು. ಆಂಗ್ಲಭಾಷೆಯ ಉಪನ್ಯಾಸಕ ಮಾನಯ್ಯ ಗೌಡಗೇರಾ ಅವರು ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಪ್ರೊ ಶಿವಲಿಂಗಣ್ಣ ಸಾಹು, ಡಿ.ಡಿ.ಯು. ಕಾಲೇಜಿನ ಪ್ರಾಂಶುಪಾಲ ಮಹೇಶ ಪತ್ತಾರ, ಉಪನ್ಯಾಸಕರಾದ ಡಾ. ದೇವಿಂದ್ರಪ್ಪ ಬಿರಾದಾರ, ಡಾ. ಗಂಗಪ್ಪ ಹೊಸ್ಮನಿ, ಪ್ರೊ. ದೇವಿಂದ್ರ ಆಲ್ದಾಳ, ಡಾ. ಸತೀಶ ತುಳೇರ, ಪ್ರೊ. ಸಂಗಣ್ಣ ದಿಗ್ಗಿ, ಎನ್.ಎಸ್.ಎಸ್. 'ಎ' ಘಟಕದ ಅಧಿಕಾರಿ ಡಾ. ರಾಘವೇಂದ್ರ ಹಾರಣಗೇರಾ, ಎನ್.ಎಸ್.ಎಸ್. 'ಬಿ' ಘಟಕದ ಅಧಿಕಾರಿ ಡಾ. ಭೀಮಪ್ಪ ಭಂಡಾರಿ ಮುಂತಾದವರು ಉಪಸ್ಥಿತರಿದ್ದರು.

ಶಿಬಿರದ ಪಿ.ಟಿ. ಉಷಾ ತಂಡದವರು ಕಾರ್ಯಕ್ರಮ ನಿರ್ವಹಿಸಿದರು. ಕು. ನಿರ್ಮಲಾ ಮತ್ತು ಜ್ಯೋತಿ ನಿರೂಪಿಸಿದರು. ಕು. ಕವಿತಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಭಾಗ್ಯಶ್ರೀ ಹಾಗೂ ಸಂಗಡಿಗರು ಎನ್.ಎಸ್.ಎಸ್. ಗೀತೆಯನ್ನು ಪ್ರಸ್ತುತಪಡಿಸಿದರು. ರಂಜಿತಾ ಮತ್ತು ಮಹಾಲಕ್ಷ್ಮೀ ಸ್ವಾಗತಿಸಿದರು. ಕು. ರೂಪಾ ಪ್ರತಿಜ್ಞಾ ವಿಧಿ ಬೋಧಿಸಿದರು. ಕು. ಶೃತಿ ರೈತನ ಛದ್ಮ ವೇಷದಲ್ಲಿ ಎಲ್ಲರ ಗಮನ ಸೆಳೆದರು. ತಂಡದ ಸದಸ್ಯರಾದ ಲಕ್ಷ್ಮೀ, ಮೈನಾ, ಭಾಗ್ಯಶ್ರೀ, ರಾಜೇಶ್ವರಿ, ಅಂಜಲಿ ನಿರ್ವಹಣೆ ಮಾಡಿದರು.

# ಆರೋಗ್ಯ ಶಿಬಿರ, ರಕ್ತ ತಪಾಸಣಾ ಶಿಬಿರಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಅಕ್ಕ ಕೆಫೆ ಹಾಗೂ ಜಲಶಕ್ತಿ ಕೇಂದ್ರ ಉದ್ಘಾಟನೆ ಹಿನ್ನೆಲೆ ಆರೋಗ್ಯ ಶಿಬಿರ ಮತ್ತು ರಕ್ತ ತಪಾಸಣಾ ಶಿಬಿರವನ್ನು 2025ರ ಏಪ್ರಿಲ್ 7ರ ಸೋಮವಾರ ರಂದು ಯಾದಗಿರಿ ಜಿಲ್ಲಾ ಪಂಚಾಯತ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ತಿಳಿಸಿದ್ದಾರೆ.

# ಮಠಗಳ ಏಳಿಗೆಯಲ್ಲಿ ಭಕ್ತರ ಶ್ರಮ, ಸೇವೆ ಅನುಪಮ–ಕಾಶಪ್ಪನವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.8–ಮಠಗಳ ಏಳಿಗೆಯಲ್ಲಿ ಭಕ್ತರ ಶ್ರಮ ಹಾಗೂ ಸೇವೆ ಅನುಪಮವಾಗಿರುತ್ತದೆ ಎಂದು ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ ಹೇಳಿದ್ದಾರೆ.

ತಾಲೂಕಿನ ಬಿಲ್ ಕೆರೂರ ಬಿಲ್ವಾಶ್ರಮದಲ್ಲಿ ಸೋಮವಾರ ನಡೆದ ಜಾತ್ರಾಮಹೋತ್ಸವ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕತೆ ವಹಿಸಿ ಮಾತನಾಡಿದ ಅವರು, ಶ್ರೀಮಠದ ಹಿಂದಿನ ಪೂಜ್ಯರಾದ ರುದ್ರಮುನಿ ಶಿವಾಚಾರ್ಯರ ಸ್ಮರಣೋತ್ಸವ, ನೂತನವಾಗಿ ರಥೋತ್ಸವ, ಪೀಠಾಧಿಪತಿ ಪೂಜ್ಯ ಸಿದ್ಧಲಿಂಗ ಶಿವಾಚಾರ್ಯರ ಪಟ್ಟಾಧಿಕಾರದ ರಜತ ಮಹೋತ್ಸವ ಕಾರ್ಯಕ್ರಮಗಳನ್ನು ಅತ್ಯಂತ ಸಂಭ್ರಮದಿಂದ ಆಚರಿಸಲು ಸಕಲ ಸದ್ಭಕ್ತರು ಶ್ರಮವಹಿಸಬೇಕು ಎಂದರು.

ಬರುವ ಜೂನ್ 9 ಹಾಗೂ 10 ರಂದು ಎರಡು ದಿನಗಳ ಕಾಲ ನಡೆಯುವ ಜಾತ್ರಾಮಹೋತ್ಸವದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಶ್ರೀಮಠದ ಭಕ್ತರು ಎಲ್ಲ ಕಾರ್ಯಗಳಿಗೂ ತನು, ಮನ, ಧನದ ಸೇವೆ ನೀಡಿ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಶ್ರೀಮಠದ ಸಿದ್ದಲಿಂಗ ಶಿವಾಚಾರ್ಯರು ಮಾತನಾಡಿ,ಶ್ರೀಮಠದಲ್ಲಿ ರಥೋತ್ಸವ ಜರುಗಬೇಕು ಎನ್ನುವ ಪೂಜ್ಯ ರುದ್ರಮುನಿ ಶಿವಾಚಾರ್ಯರ ಸಂಕಲ್ಪ ಈ ವರ್ಷ ಸಾಕಾರಗೊಳ್ಳಲಿದ್ದು, ಜೂನ್ 10 ರಂದು ಪ್ರಪ್ರಥಮ ಬಾರಿಗೆ ನೂತನ ರಥೋತ್ಸವ ಜರುಗಲಿದೆ. ಹೊಸರಥ ನಿರ್ಮಾಣ ಕಾರ್ಯ ಅಂತಿಮ ಹಂತದಲ್ಲಿದೆ. ತಿಂಗಳೊಳಗೆ ಪೂರ್ಣಗೊಳ್ಳಲಿದೆ ಎಂದು ತಿಳಿಸಿದರು.

ಗಿರಿಸಾಗರದ ರುದ್ರಮುನಿ ಶಿವಾಚಾರ್ಯರು, ಬೇವೂರಿನ ಗ್ಯಾನಪ್ಪಜ್ಜನವರು ಮಾತನಾಡಿದರು. ಅನೇಕ ಭಕ್ತರು, ಹಿರಿಯರು ಹಲವಾರು ವಿಷಯಗಳ ಕುರಿತು ಸಲಹೆ, ಸೂಚನೆ ನೀಡಿದರು. ಜಿಪಂ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ಪ್ರಭುಸ್ವಾಮಿ ಸರಗಣಾಚಾರಿ, ಉಮೇಶ ಮೇಟಿ, ಶಂಭುಗೌಡ ಪಾಟೀಲ, ಎಂ.ಎಸ್.ಪಾಟೀಲ, ಎಸ್.ಬಿ.ರಾಂಪುರ ಇದ್ದರು.

# ಪಿಯುಸಿ ವಿಜ್ಞಾನದಲ್ಲಿ ಕು,ಸುನಿಲ ಪುರ್ಲೆ 562 ಅಂಕ ಪಡೆದು ಅಗ್ರಸ್ಥಾನ ಹರ್ಷ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಶಹಾಪುರ ತಾಲುಕಿನ ಕು,ಸುನಿಲ ತಂದೆ ಸಾಹೆಬಣ್ಣ ಪುರ್ಲೆ ಯವರು ದುದ್ದಪುಡಿ ಕಂಪೋಜಲ್ ಪಿಯುಸಿ, ವಿಜ್ಞಾನ ಕಾಲೇಜು ವಿಧ್ಯಾರ್ಥಿಯಾಗಿದ್ದು ಪ್ರಸಕ್ತ ಸಾಲಿನಲ್ಲಿ ಮಾರ್ಚ ತಿಂಗಳಲ್ಲಿ ನಡೆದ ಪಿಯುಸಿ ಪರೀಕ್ಷೆಯಲ್ಲಿ ವಿಜ್ಞಾನ ವಿಭಾಗದಲ್ಲಿ 600ಕ್ಕೆ 562 ಅಂಕಗಳನ್ನು ಪಡೆದುಕೊಂಡು ಶೇ% 93.6 ಸ್ಥಾನದಲ್ಲಿ ಹೆಚ್ಚು ಅಂಕ ಪಡೆದುಕೊಂಡು ಕಾಲೇಜು ಕಿರ್ತಿಗೆ ಪಾತ್ರನಾಗಿದ್ದಾನೆ,ಮಗುವಿನ ಸಾಧನೆಗೆ ಕಾಲೇಜಿನ ಸಿಓ ಶಿವನಾರಾಯಣ ರಾಜರವರು ಹರ್ಷ ವ್ಯಕ್ತಪಡಿಸಿ ಹಾರೈಸಿದ್ದಾರೆ, ಕು, ಸುನಿಲ ರವರು ಶಹಾಪುರ ತಾಲುಕಿನ ವಿರುಪಾಪೂರ ಗ್ರಾಮದವರಾಗಿದ್ದು, ತಂದೆ ಸಾಹೆಬಣ್ಣ ಪುರ್ಲೆ ಶಿಕ್ಷಣ ಪ್ರೇಮಿಗಳಾಗಿದ್ದಾರೆ, ಅವರು ಸುರುಪುರ ತಾಲುಕಿನ ರಂಗಂಪೇಟದಲ್ಲಿ ಕಳೆದ ಹತ್ತಾರು ದಶಕಗಳಿಂದ ಸುದೀಪ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾಗಿ ಸಾವಿರಾರು ಪುಟ್ಟ ಮಕ್ಕಳಿಗೆ ಮಾದರಿಯಾಗಿದ್ದಾರೆ, ಮಗನ ಈ ಸಾಧನೆಗೆ ತಂದೆ ಸಾಹೇಬಣ್ಣ ದಂಪತಿಗಳು ತುಂಬಾ ಹರ್ಷ ವ್ಯಕ್ತಪಡಿಸಿ ಮಗನ ಮಹತ್ವದ ಶ್ರಮಕ್ಕೆ ಶುಭ ಹಾರೈಸಿದ್ದಾರೆ,



# ಕರ್ನಾಟಕ ಪ್ರಾಂತ ರೈತ ಸಂಘ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರ್ ಸಂಘ ಜಂಟಿ ಹೋರಾಟ ಪ್ರತಿಫಲ ಭೀಮರಾಯ ಪೂಜಾರಿ ಹರ್ಷ




ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ : ಕನ್ಯಾಕುಳೂರು ಗ್ರಾಮದ ಅನುಮಾನ ಗುಡಿಯಿಂದ ಪಂಚಾಯತಿವರೆಗೆ ಮೆರವಣಿಗೆ ಮುಖಾಂತರ ಹೋರಾಟವನ್ನು ಪ್ರಾರಂಭ ಮಾಡಲಾಯಿತು ಫಾರಂ ನಂಬರ್ 6 ಕೊಟ್ಟರು ಕೆಲಸ ಕೊಡದೆ ಸತಾಯಿಸುತ್ತಿರುವುದು ಖಂಡಿಸಿ.1) ಏಪ್ರಿಲ್ ಒಂದರಿಂದ ಜೂನ್ 30ರವರೆಗೆ ಸತತ ಕೆಲಸ ಕೊಡುವ ಬಗೆ. 2)ಕನ್ಯಾಕುಳ್ಳೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಆರೋ ಪ್ಲಾಂಟ್ ಗಳನ್ನು ದುರಸ್ತಿ ಮಾಡಿ ಶುದ್ಧ ಕುಡಿಯುವ ನೀರು ಕುಡಿಯಲು ಅನು ಮಾಡಿಕೊಡಬೇಕು.3) ಪಿಎಂಇಜಿ ಅವಾಜ್ ಯೋಜನೆಯಲ್ಲಿ ನಿವೇಶನಗಳ ಬಂದಿದ್ದು ಬಡ ಕೂಲಿಕಾರ ರೈತರಿಗೆ ಜಿಪಿಎಸ್ ಮಾಡಿ ಸರ್ವೆ ಮಾಡುವುದರ ಮುಖಾಂತರ ನಿವೇಶನ ಕಲ್ಪಿಸಿ ಕೊಡಬೇಕು.4) ಫಾರಂ ನಂಬರ್ ಸಿಕ್ಸ್ ಕೊಟ್ಟರು ಕೆಲಸ ಕೊಡದೆ ಇರುವ ಅಭಿವೃದ್ಧಿ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಿ ನಿರುದ್ಯೋಗ ಬತ್ತೆ ಕೊಡಿಸಬೇಕು.5) ಉದ್ಯೋಗ ಖಾತ್ರಿಯಲ್ಲಿ ಕೆಲಸ ಮಾಡುತ್ತಿರುವ ಕೂಲಿಕಾರರಿಗೆ ಟೆಂಟ್ ವ್ಯವಸ್ಥೆ ಮತ್ತು ನೀರಿನ ವ್ಯವಸ್ಥೆ ಮಾಡಬೇಕು. 6)ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೆಲಸ ಮಾಡುವ ಕೂಲಿ ಕಾರ್ಮಿಕರಿಗೆ ದಕ್ಷಿಣ ಹೊಸ ಜಾಬ್ ಕಾರ್ಡುಗಳನ್ನು ಮಾಡಿಕೊಡಬೇಕು .7) ಗ್ರಾಮದ ಕೂಲಿಕಾರರು ವಲಸೆ ಹೋಗುವುದನ್ನು ತಡೆಗಟ್ಟಿ ತಕ್ಷಣ ಕೆಲಸ ಕೊಡಬೇಕು.8) ಕೆಲಸದ ಸಮಯದಲ್ಲಿ ಸರಿಯಾಗಿ ಜಿಪಿಎಸ್ ಫೋಟೋವನ್ನು ತೆಗಿಯಬೇಕು ಲೇಟಾಗಿ ಮಾಡುವುದನ್ನು ಕೂಡಲ ಕೈಬಿಡಬೇಕು.9) ಕಾಮಗಾರಿ ಬೋರ್ಡ್ ಗಳನ್ನು ಪಂಚಾಯಿತಿ ಮುಖಾಂತರನೇ ಕಳಿಸಬೇಕು. ಈ ಹೋರಾಟಕ್ಕೆ ಮನೆದು ತೊರಿತವಾಗಿ ಸ್ಥಳದಲ್ಲಿಯೇ ಮೂರು ಬೇಡಿಕೆ ಈಡೇರಿಸಿ. ಉಳಿದ ಬೇಡಿಕೆಗಳನ್ನು ಲಿಖಿತ ಬರವಣಿಗೆ ಮೂಲಕ ಬರೆದು ಕೊಟ್ಟು 15 ದಿನದ ಒಳಗಾಗಿ ಈಡೇರಿಸುತ್ತೇವೆ ಎಂದು ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿಯ ಹನುಮಂತ ದೇವರ ಮನೆ ಅವರು ಹೇಳಿದರು. ಏಕಖಖ. ತಾಲೂಕಾಧ್ಯಕ್ಷರಾದ ಭೀಮಣ್ಣ ತಪ್ಪೆದಾರ. ಏಕಖಖ. ತಾಲೂಕ್ ಕಾರ್ಯದರ್ಶಿಯಾದ ಭೀಮರಾಯ ಪೂಜಾರಿ. ತಾಲೂಕ ಅಧ್ಯಕ್ಷರಾದ ರಂಗಮ್ಮ ಕಟ್ಟಿಮನಿ. ಏಕಖಖ ಜಿಲ್ಲಾಧ್ಯಕ್ಷರಾದ ಚೆನ್ನಪ್ಪ ಆನೆಗುಂದಿ. ಏಕಖಖ. ಜಿಲ್ಲಾ ಕಾರ್ಯದರ್ಶಿಯಾದ ಎಸ್ ಎನ್ ಸಾಗರ್. ಕೂಲಿಕಾರ್ ಮುಖಂಡರಾದ ದೇವು ಹಳ್ಳಿ. ಕಾರ್ಮಿಕ ಮುಖಂಡರಾದ ದೇವೇಂದ್ರಪ್ಪ ಒತ್ತಪೇಟೆ. ವಿದ್ಯಾರ್ಥಿ ಯುವಜನ ಮುಖಂಡರಾದ ಇಮಾನ್ ಸಾಬ್ ನದಾಫ್. ವಿವಿಧ ಗ್ರಾಮದ ಮುಖಂಡರಾದ ವಿಜಯಕುಮಾರ್ ನಾಗರತ್ನ ಭೀಮರಾಯ ಶಿವಮ್ಮ ಸುಮಿತ್ರ ಶರಣಪ್ಪ ಪೂಜಾರಿ ಹನುಮಂತ ದೋರನಹಳ್ಳಿ ಇತರರು ರೈತ ಕಾರ್ಮಿಕರು ಭಾಗವಹಿಸಿದ್ದರು.

# ಮಿನಿ ವಿಧಾನಸೌಧವನ್ನು ಹಳೇ ಕೋರ್ಟ್ ಕಟ್ಟಡಕ್ಕೆ ಸ್ಥಳಾಂತರಿಸಲು ಕರವೇ ಒತ್ತಾಯ.




ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು:ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕ ಲಿಂಗಸುಗೂರು ಇವರು,ಸಹಾಯಕ ಆಯುಕ್ತರು ಉಪ ವಿಭಾಗ ಲಿಂಗಸುಗೂರು ಇವರ ಮುಖಾಂತರ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು, ರಾಯಚೂರು. ಇವರಿಗೆ ಮಿನಿ ವಿಧಾನಸೌಧವನ್ನು ಹಳೇ ಕೋರ್ಟ್ ಕಟ್ಟಡಕ್ಕೆ ಸ್ಥಳಾಂತರಿಸಲು ಮನವಿಯನ್ನು ಸಲ್ಲಿಸಿದರು

ಲಿಂಗಸೂಗೂರು ಪಟ್ಟಣದಲ್ಲಿರುವ ಮಿನಿ ವಿಧಾನಸೌಧ ಪಟ್ಟಣದ ಹೊರವಲಯದಲ್ಲಿದ್ದು, ಗ್ರಾಮೀಣ ಭಾಗದ ಬಡವರು ತಹಶೀಲ್ದಾರರ ಕಾರ್ಯಾಲಯದಲ್ಲಿ ಜಾತಿ ಆದಾಯ ಹಾಗೂ ಇತರೆ ದಾಖಲಾತಿಗಳ ಅಲ್ಲದೇ ಜಮೀನು ಸರ್ವೇ ಕಾರ್ಯಕ್ಕಾಗಿ ದೂರದ ಮಿನಿ ವಿಧಾನಸೌಧಕ್ಕೆ ತೆರಳಬೇಕಾದ ಅನಿವಾರ್ಯತೆಯಿಂದ ಬಡಜನರು 100 ರಿಂದ 200 ರೂ.ಗಳನ್ನು ಖರ್ಚು ಮಾಡಬೇಕಾದ ಪರಿಸ್ಥಿತಿ ಇದೆ. ಮಹಿಳೆ ಹಾಗೂ ವಿಶೇಷ ಚೇತನರು ಮಿನಿ ವಿಧಾನಸೌಧಕ್ಕೆ ತೆರಳಲು ಹರಸಾಹಸ ಪಡಬೇಕಾಗುತ್ತದೆ. ಅಲ್ಲದೇ ಅಲ್ಲಿ ಕೆಲಸ ಕಾರ್ಯಗಳು ಮುಗಿಯುವ ವರೆಗೆ ವಿಶ್ರಾಂತಿ ಪಡೆಯಲು ಸರಿಯಾದ ಸ್ಥಳವಿಲ್ಲ, ಹೊಟೆ ಹಸಿದರೆ ಊಟ ಮಾಡಲು ಹೋಟಲ್ಗಳಿಲ್ಲ. ಪರಿಣಾಮವಾಗಿ ಕೆಲಸ ಕಾರ್ಯಗಳು ಮುಗಿಯುವ ವರೆಗೆ ಹಸಿದ ಹೊಟ್ಟೆಯಲ್ಲಿ ಸಂಜೆ–ಯ ವರೆಗೆ ಅಲ್ಲಿಯೇ ಕುಳಿತು ಕೆಲಸ ಮಾಡಿಕೊಂಡು ಬರಬೇಕಾದ ಪರಿಸ್ಥಿತಿ ಇದೆ. ಮಿನಿ ವಿಧಾನಸೌಧ ನಿರ್ಜನ ಪ್ರದೇಶದಲ್ಲಿರುವುದರಿಂದ ಮಹಿಳೆಯರಿಗೆ ಸರಿಯಾದ ಭದ್ರತೆ ಇರುವುದಿಲ್ಲ. ಮಹಿಳೆಯರು ಜೀವ ಭಯದಲ್ಲಿಯೇ ಮಿನಿ ವಿಧಾನಸೌದಕ್ಕೆ ಹೋಗಬೇಕಾಗಿದೆ. ಬಡವರು ಮಹಿಳೆಯರು ತುಂಬ ತೊಂದರೆ ಅನುಭವಿಸುತ್ತಿದ್ದಾರೆ. ಕೂಡಲೇ ಮಿನಿ ವಿಧಾನಸೌಧವನ್ನು ಹಳೆಯ ಕೋರ್ಟ್ ಕಟ್ಟಡಕ್ಕೆ, ಅಥವಾ ಈ ಹಿಂದೆ ಇದ್ದ ತಹಶೀಲ್ದಾರರ ಕಛೇರಿಗೆ ಅಥವಾ ತಾಲೂಕ ಪಂಚಾಯತಿಯ ಹಳೇ ಕಟ್ಟಡಕ್ಕೆ ಸ್ಥಳಾಂತರ ಮಾಡಿ. ಮಹಿಳೆಯರಿಗೆ, ಗ್ರಾಮೀಣ ಭಾಗದ ಬಡ ಕೂಲಿ ಕಾರ್ಮಿಕರಿಗೆ ಹಾಗೂ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು. ಇಲ್ಲವಾದಲ್ಲಿ ಹೋರಾಟ ಮಾಡಬೇಕಾದ ಅನಿವಾರ್ಯತೆ ಎದುರಾಗಬಹುದು. ಕೂಡಲೇ ಮಿನಿ ವಿಧಾನಸೌಧವನ್ನು ಮೇಲ್ಕಾಣಿಸಿದ ಯಾವುದಾದರು ಒಂದು ಸ್ಥಳಕ್ಕೆ ಸ್ಥಳಾಂತರ ಮಾಡಬೇಕೆಂದು ಒತ್ತಾಯಿಸಿ ಕರವೇ ತಾಲೂಕು ಅಧ್ಯಕ್ಷರಾದ ಜಿಲಾನಿ ಪಾಶ ನೇತೃತ್ವದಲ್ಲಿ ಮನವಿ ಯನ್ನು ಸಲ್ಲಿಸಿದರು ಈ ಸಂದರ್ಭದಲ್ಲಿ ಕರವೇ ಕಾರ್ಯ ಕರ್ತ ರಾದ ರವಿ ಬರಗುಡಿ ಹನುಮಂತ ನಾಯಕ ಅಜೀಜ್ ಪಾಶಾ ಅಲ್ಲಾವುದ್ದಿನ ಬಾಬಾ ರೈಮುದ್ದಿನ ಪಾಶಾ ಮೊಸಿನ ಖಾನ್ ಅಜ್ಜು ಆಟೋ ಚಾಲಕ ಪರಮಣ್ಣ ಐದಭಾವಿ ಪ್ರಭುಗೌಡ ಪೈದೊಡ್ಡಿ ಲಿಂಗಪ್ಪ ನಾಯಕ ರಾಮದುರ್ಗ ವಿರಯ್ಯಸ್ವಾಮಿ ಐದನಾಳ ಪ್ರಭು ಕಾಳಪೂರ ಬಸವರಾಜ ಯಲಗಲದಿನ್ನಿ ಅವಜಪ್ಪ ಜಂಗಿರಾಂಪುರ್ ತಾಂಡ ನಬಿ ಜಾವೂರ್ ಇಲಿಯಾಸ್ ಇದ್ದರು.

# ಸರ್ಕಾರಿ ಆಸ್ಪತ್ರೆಯಲ್ಲಿ ಸಂತಾನ ಶಸ್ತ್ರಚಿಕಿತ್ಸೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಕಳೆದಹತ್ತುತಿಂಗಳಿಂದಲೂ ಸರ್ಕಾರಿ ಆಸ್ಪತ್ರೆಯಲ್ಲಿ ಸ್ಥಗಿತಗೊಂಡಿ–ದ್ದ, ಸಂತಾನ ಶಸ್ತ್ರಚಿಕಿತ್ಸೆ ಪುನಃ ಆರಂಭಗೊಂಡಿದ್ದು,ಮಹಿಳೆಯರಿಗೆ ಅನೂಕೂಲವಾಗಿದೆ, ಪ್ರತಿ ಮಂಗಳವಾರಕೊಮ್ಮೆ ಈ ಶಸ್ತ್ರಚಿಕಿತ್ಸೆ ನಡೆಯಲ್ಲಿದ್ದು. ಸಾರ್ವತ್ರಿಕವಾಗಿ ಜಾಗ್ರತಿ ಮೂಡಿಸಿಕೊಂಡು ಆಸಕ್ತರು ಪ್ರತಿ ವಾರ ನಡೆಯುವ ಸಂತಾನ ಶಸ್ತ್ರಚಿಕಿತ್ಸೆಗಾಗಿ ಪೂರ್ವ ತಯ್ಯಾರಿಯೊಂದಿಗೆ ತಮ್ಮ ಆಶಾ ಕಾರ್ಯಕರ್ತರೊಂದಿಗೆ ಸರ್ಕಾರಿ ಆಸ್ಪತ್ರೆ ಬಂದ ಹೆಸರನ್ನು ನೊಂದಣಿ ಮಾಡಬಹುದಾಗಿದೆ ಎಂದು ಸರ್ಕಾರಿ ಸಾರ್ವತ್ರಿಕ ಆಸ್ಪತ್ರೆ ಶಹಾಪುರ ಆಡಳಿತ ವೈಧ್ಯಾಧಿಕಾರಿಳಾದ ಡಾ, ಪದ್ಮನಾಂದ ಗಾಯಕವಾಡ್ ರವರು ಜನರಿಗೆ ಕರೆ ನೀಡಿದ್ದಾರೆ, ಪ್ರಥಮ ಮಂಗಳವಾರವಾಗಿದ್ದರಿಂದ 37 ಜನರಿಗೆ ಸಂತಾನ ಶಸ್ತ್ರಚಿಕಿತ್ಸೆ ಮಾಡಲಾಯಿತು, ಎಲ್ಲಾ ಮಕ್ಕಳ ತಾಯಿಂದಿರು ಆರೋಗ್ಯವಾಗಿದ್ದಾರೆ ಎಂದು ವೈಧ್ಯರು ತಿಳಿಸಿದರು,

# ದಡಾರ ರುಬೆಲ್ಲಾ ನಿರ್ಮೂಲನೆಗಾಗಿ ವಿಶೇಷ 3ನೇ ಸುತ್ತಿನ ವಿಶೇಷ ಲಸಿಕಾ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಯಾದಗಿರಿ ಜಿಲ್ಲೆಯ ದಡಾರ ರುಬೆಲ್ಲಾ ನಿರ್ಮೂಲನೆಗಾಗಿ ವಿಶೇಷ 3ನೇ ಸುತ್ತಿನ ವಿಶೇಷ ಲಸಿಕಾ ಅಭಿಯಾನವನ್ನು 2025ರ ಏಪ್ರಿಲ್ 4 ರಿಂದ 11ರ ವರೆಗೆ ನಡೆಯಲಿದೆ ಎಂದು ಯಾದಗಿರಿ ಜಿಲ್ಲಾ ಸಂತಾನೋತ್ಪತ್ತಿ ಮಕ್ಕಳ ಆರೋಗ್ಯ ಅಧಿಕಾರಿ ಡಾ.ಮಲ್ಲಪ್ಪ ಕೆ ಅವರು ತಿಳಿಸಿದ್ದಾರೆ.

ಸಾರ್ವಜನಿಕ ಲಸಿಕಾ ಕಾರ್ಯಕ್ರಮದಡಿಯಲ್ಲಿ ಒಟ್ಟು 12 ಮಾರಕ ರೋಗಗಳನ್ನು ತಡೆಯಲು ಲಸಿಕಾಕರಣ ನಡೆಸುತ್ತಿದ್ದು, ಈ ಲಸಿಕಾಕರಣದಲ್ಲಿ ಕಾರಣಾಂತರಗಳಿಂದ ಲಸಿಕೆಯನ್ನು ಬಿಟ್ಟು ಹೋದ, ತಪಿಸಿಕೊಂಡ ಮಕ್ಕಳನ್ನು ಗುರುತಿಸಿ ಯಾದಗಿರಿ ಜಿಲ್ಲೆಯಾದ್ಯಂತ ಹದಡಾರ–ರುಬೆಲ್ಲಾ ನಿರ್ಮೂಲನೆಗಾಗಿ 3ನೇ ಸುತ್ತಿನ ವಿಶೇಷ ಅಭಿಯಾನವನ್ನು 2025ರ ಏಪ್ರಿಲ್ 4 ರಿಂದ ಆರಂಭಗೊಂಡು 11ರ ವರೆಗೆ ನಡೆಯಲಿದೆ ಈ ಅಭಿಯಾನದಲ್ಲಿ 5 ವರ್ಷದೊಳಗಿನ ಲಸಿಕೆಗೆ ಬಾಕಿ ಇರುವ ಮಕ್ಕಳ ಗುರಿ 9162 ಯಾಗಿದ್ದು, 725 ಲಸಿಕಾ ಸತ್ರಗಳಲ್ಲಿ ಲಸಿಕೆಯನ್ನು ನೀಡುತ್ತಿದ್ದು, ಎಲ್ಲಾ ಸಾರ್ವಜನಿಕರು ತಮ್ಮ ಹತ್ತಿರದ ಆಶಾ ಕಾರ್ಯಕರ್ತೆಯರನ್ನು ಸಂಪರ್ಕಿಸಿ ತಮ್ಮ ಮಕ್ಕಳಿಗೆ ಲಸಿಕೆ ಪಡೆಯಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ವೋತ್ತಮ ಸೇವಾ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್ 08– ಸರ್ಕಾರಿ ಸೇವೆಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕರ್ನಾಟಕ ರಾಜ್ಯ ಸರ್ಕಾರವು ನೀಡುವ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ 2024–2025ನೇ ಸಾಲಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತ ಅರ್ಹ ಸರ್ಕಾರಿ ಅಧಿಕಾರಿ, ಸಿಬ್ಬಂದಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಅವರು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲ ಅಧಿಕಾರಿ, ನೌಕರರು ಆನ್‌ಲೈನ್ ಮೂಲಕ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ಹಾಗೂ ಜಿಲ್ಲಾಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ಪ್ರತ್ಯೇಕವಾಗಿ ಅರ್ಜಿಗಳನ್ನು https://dparar.karnataka.gov.in ಮತ್ತು https://sarvothamaawards.karnataka.gov.in ವೆಬ್‌ಸೈಟ್ ಮೂಲಕ ಏಪ್ರೀಲ್ 14ರೊಳಗಾಗಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಕನ್ನಡ ಅಥವಾ ಇಂಗ್ಲೀಷ್‌ದಲ್ಲಿ ಮಾಹಿತಿಯನ್ನು ತುಂಬಿ ಅರ್ಜಿ ಸಲ್ಲಿಸಬೇಕು. ಕನ್ನಡದಲ್ಲಿ ಅರ್ಜಿ ಸಲ್ಲಿಸುವಾಗ ಮಾಹಿತಿಯನ್ನು ನುಡಿ 6.0 ತಂತ್ರಾಂಶ ಬಳಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಏಪ್ರೀಲ್ 15ರ ಬೆಳಿಗ್ಗೆ 11ಗಂಟೆಯೊಳಗಾಗಿ ನಾಮನಿರ್ದೇಶಿತ ಆನ್‌ಲೈನ್ ಪ್ರತಿಗಳನ್ನು ಜಿಲ್ಲಾಧಿಕರಿಗಳ ಕಚೇರಿಯ ಆಡಳಿತ ಶಾಖೆಗೆ ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಜ್ಞಾನ ವಿಭಾಗದಲ್ಲಿ ಅರ್ಚನಾ, ಕಲಾ ವಿಭಾಗದಲ್ಲಿ ಶಿಫಾ ಟಾಪರ್
## ದ್ವಿತೀಯ ಪಿಯುಸಿ ಪರೀಕ್ಷೆ: ಶಾಹೀನ್‌ಗೆ 154 ಅಗ್ರಶ್ರೇಣಿ


ಅರ್ಚನಾ


ಫರಾಹಾ


ಖುಷಿ ಹೂಗಾರ್


ಸೃಷ್ಟಿ


ಶಿಫಾ


ಭಾಗ್ಯಶ್ರೀ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 08 : ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ನಗರದ ಶಾಹೀನ್ ಪದವಿಪೂರ್ವ ವಿಜ್ಞಾನ ಹಾಗೂ ಕಲಾ ಕಾಲೇಜು ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ತೋರಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಅರ್ಚನಾ ಶೇ 96.83 ರಷ್ಟು ಅಂಕ ಗಳಿಸಿ ಕಾಲೇಜಿಗೆ ಟಾಪರ್ ಆಗಿ

ಹೊರ ಹೊಮ್ಮಿದ್ದಾರೆ. ಫರಾಹಾ ಶೇ 96, ಖುಷಿ ಮಲ್ಲಿಕಾರ್ಜುನ ಹೂಗಾರ್ ಶೇ 95.50,

ಸೃಷ್ಟಿ ಶೇ 95.17 ರಷ್ಟು ಅಂಕ ಪಡೆದು ಗಮನ ಸೆಳೆದಿದ್ದಾರೆ.

ಕಲಾ ವಿಭಾಗದಲ್ಲಿ ಶಿಫಾ ಶೇ 92.66 ರಷ್ಟು ಅಂಕ ಪಡೆದು ಕಾಲೇಜಿಗೆ ಮೊದಲಿಗರಾಗಿದ್ದಾರೆ. ಭಾಗ್ಯಶ್ರೀ ಶೇ 90.16 ರಷ್ಟು ಅಂಕ ಗಳಿಸಿದ್ದಾರೆ. ಭಾಗ್ಯಶ್ರೀ ಇತಿಹಾಸದಲ್ಲಿ 100ಕ್ಕೆ 100 ಅಂಕ ಪಡೆದು ಸಾಧನೆ ಮೆರೆದಿದ್ದಾರೆ.

ಕಾಲೇಜಿಗೆ ಶೇ 91.25 ರಷ್ಟು ಫಲಿತಾಂಶ ಲಭಿಸಿದೆ. 154 ವಿದ್ಯಾರ್ಥಿಗಳು ಅಗ್ರಶ್ರೇಣಿ,

846 ಪ್ರಥಮ ದರ್ಜೆ ಹಾಗೂ 65 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ತೇರ್ಗಡೆಯಾಗಿದ್ದಾರೆ.

ಪ್ರತಿ ವರ್ಷದಂತೆ ಈ ವರ್ಷವೂ ಕಾಲೇಜಿನ ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅಮೋಘ ಸಾಧನೆ ಮಾಡಿದ್ದಾರೆ ಎಂದು ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ

ಅಧ್ಯಕ್ಷ ಡಾ. ಅಬ್ದುಲ್ ಖದೀರ್ ತಿಳಿಸಿದ್ದಾರೆ. ಗುಣಮಟ್ಟದ ಸ್ಪರ್ಧಾತ್ಮಕ ಶಿಕ್ಷಣ, ಉತ್ತಮ ಶೈಕ್ಷಣಿಕ ವಾತಾವರಣ, ಆಡಳಿತ ಮಂಡಳಿ ಮಾರ್ಗದರ್ಶನ, ಉಪನ್ಯಾಸಕರು, ವಿದ್ಯಾರ್ಥಿಗಳ ಶ್ರಮ ಹಾಗೂ ಪಾಲಕರ ಸಹಕಾರದಿಂದಾಗಿ

ಕಾಲೇಜು ಪರೀಕ್ಷೆಯಲ್ಲಿ ಸಾಧನೆಗೈಯ್ಯಲು ಸಾಧ್ಯವಾಗಿದೆ ಎಂದು ಹೇಳಿದ್ದಾರೆ.

## 185 ಗ್ರಾಮ ಪಂಚಾಯತಿಗಳಿಂದ 15.22 ಕೋಟಿ ರೂ. ತೆರಿಗೆ ಸಂಗ್ರಹ: ತೆರಿಗೆ ಸಂಗ್ರಹದಿಂದ ಗ್ರಾಮಗಳ ಅಭಿವೃದ್ಧಿ ಸಾಧ್ಯ:ಸಿಇಓ ಡಾ.ಗಿರೀಶ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಏ.8: ಬೀದರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ 185 ಗ್ರಾಮ ಪಂಚಾಯತಿಗಳಲ್ಲಿ 2024-25ನೇ ಸಾಲಿನಲ್ಲಿ 15.22 ಕೋಟಿ ರೂ. ತೆರಿಗೆ ಬಾಕಿ ವಸೂಲಾತಿ ಸಂಗ್ರಹವಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

ಬೀದರ ಜಿಲ್ಲೆಯಲ್ಲಿ ಎಂಟು ತಾಲ್ಲೂಕುಗಳಿದ್ದು, ಈ ತಾಲ್ಲೂಕುಗಳಲ್ಲಿ ಬರುವ ಗ್ರಾಮ ಪಂಚಾಯತಗಳಲ್ಲಿ ತೆರಿಗೆ ವಸೂಲಾತಿ ಮಂದಗತಿಯಲ್ಲಿ ಸಾಗುತ್ತಿರುವುದನ್ನು ಕಂಡು ಜಿಲ್ಲೆಯಲ್ಲಿ ತೆರಿಗೆ ವಸೂಲಾತಿ ಅಭಿಯಾನ ಹಮ್ಮಿಕೊಳ್ಳಾಯಿತು. ಈ ವಿಶೇಷ ಅಭಿಯಾನದ ಫಲವಾಗಿ ಈ ಸಾಧನೆ ಸಾಧ್ಯವಾಗಿದೆ. ಗ್ರಾಮೀಣ ಭಾಗದ ಹಳ್ಳಿಗಳ ಅಭಿವೃದ್ಧಿಗೆ ಪೂರಕವಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಿಗದಿತ ಸಮಯದಲ್ಲಿ ಸರಿಯಾಗಿ ತೆರಿಗೆ ಸಂಗ್ರಹ ವಸೂಲಾತಿ ಬಹುಮುಖ್ಯ ಹಾಗೂ ಗ್ರಾಮದಲ್ಲಿ ಸೂಕ್ತ ಸೌಲಭ್ಯಗಳನ್ನು ಒದಗಿಸಬೇಕು ಎಂದಾಗ ಗ್ರಾಮ ಪಂಚಾಯತಿ ಅಧಿಕಾರಿಗಳ ಉತ್ತಮ ಸೇವೆಯ ಜೊತೆಗೆ ಸ್ಥಳೀಯ ಸಾರ್ವಜನಿಕರ ಸಹಕಾರ ತುಂಬಾ ಮುಖ್ಯವಾಗುತ್ತದೆಂದರು.

ಈ ಅಭಿಯಾನದ ಮೂಲಕ 2024-25ನೇ ಸಾಲಿನಲ್ಲಿ ಒಟ್ಟು ರೂ 15.22 ಕೋಟಿಗಳನ್ನು (ಶೇ 70%) ವಸೂಲಿ ಮಾಡಿ ರಾಜ್ಯದಲ್ಲಿ ಉತ್ತಮ ಸ್ಥಾನ ಪಡೆದಿರುತ್ತೇವೆ

ಇದರಿಂದಾಗಿ ಗ್ರಾಮ ಪಂಚಾಯಿತಿಗಳ ಆರ್ಥಿಕ ಬಲ ಹೆಚ್ಚಾಗಿರುತ್ತದೆ. ಜೊತೆಗೆ ಈ ತೆರಿಗೆ ವಸೂಲಾತಿ ಅಭಿಯಾನದಲ್ಲಿ ಚಿಟಗುಪ್ಪಾ ತಾಲ್ಲೂಕು ರೂ 1.19 ಕೋಟಿ ತೆರಿಗೆ ವಸೂಲಿ ( ಶೇ83.37 ) ಮಾಡುವ ಮೂಲಕ ಜಿಲ್ಲೆಯಲ್ಲಿ ಮೊದಲನೆ ಸ್ಥಾನದಲ್ಲಿದೆ. 2023-24 ಮತ್ತು 2024-25 ನೇ ಸಾಲಿನಲ್ಲಿ ವಸೂಲಾತಿಯ ಮೊತ್ತದ ಶೇಕಡವನ್ನು ಪರಿಶೀಲಿಸಿದಾಗ ಒಟ್ಟು ಶೇ 38% ಹೆಚ್ಚಳವಾಗಿರುತ್ತದೆ ಎಂದು ತಿಳಿಸಿದ್ದಾರೆ. ಬೀದರ ಜಿಲ್ಲೆಯು 2023-24 ನಲ್ಲಿ ಒಟ್ಟು ರೂ 8.44 ಕೋಟಿಗಳ ತೆರಿಗೆ ವಸೂಲಾತಿ ಮಾಡಿದ್ದು.( ಶೇ32.01) ಈ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ತೆರಿಗೆ ವಸೂಲಾತಿಯ ಕುರಿತು ಮಾರ್ಗದರ್ಶನಗಳನ್ನು ನೀಡಿ ಅರಿವು ಮೂಡಿಸಿ ತೆರಿಗೆ ಪಾವತಿಸಲು ಗ್ರಾಮದ ಸಾರ್ವಜನಿಕರಿಗೆ ಅರಿವು ಮೂಡಿಸಲು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ ಪಂಚಾಯತ ಅಭಿವೃದ್ಧಿ ಅಧಿಕಾರಿಗಳನ್ನು ಮತ್ತು ಗ್ರಾಮ ಪಂಚಾಯತ ಸಿಬ್ಬಂದಿಗಳನ್ನು ತಿಳಿಸಲಾಗಿರುತ್ತದೆ. 2023-2024 ನೇ ಸಾಲಿನಲ್ಲಿ ಡಿಸೆಂಬರ್ ಮಾಹೆ ಅಂತ್ಯಕ್ಕೆ ಅಧಿಕಾರ ಸ್ವೀಕರಿಸಿದ ನಾನು 2024 ರ ನೂತನ ವರ್ಷದಲ್ಲಿ ಸತತ 5 ಬಾರಿ ಗ್ರಾಮ ಪಂಚಾಯತಿ ಕರ ವಸೂಲಾತಿ ಅಭಿಯಾನಗಳನ್ನು ಆರಂಭಿಸಿ, ಜಿಲ್ಲೆಯ ಎಲ್ಲಾ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಮೊಬೈಲ್ ಟವರ್‌ಗಳು, ಕೈಗಾರಿಕಾ ಕಾರ್ಖಾನೆಗಳಿಗೆ ಹಾಗೂ ವಾಣಿಜ್ಯ ಅಸ್ತಿಗಳಿಗೆ ಹೆಚ್ಚು ಹೊತ್ತು ನೀಡಿ, ಕರ ವಸೂಲಾತಿ ಪ್ರಮಾಣ ಹೆಚ್ಚಿಸಲು ಪ್ರತಿ ತಾಲೂಕಿಗೆ ಒಬ್ಬರಂತೆ ನೋಡಲ್ ಅಧಿಕಾರಿಗಳನ್ನು ನೇಮಿಸಿ ಸ್ಥಳೀಯವಾಗಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿ, ಕರವಸೂಲಿಗಾರರು ಮತ್ತು ಡಿ.ಇ.ಓ ಹಾಗೂ ಸ್ವಸಹಾಯ ಸಂಘಗಳ ಮಹಿಳೆಯರನ್ನು ನೇಮಿಸಿ, ಮನೆ ಮನೆಗೆ ತೆರಳಿ ಕರ ವಸೂಲಾತಿ ಬಗ್ಗೆ, ಸಾರ್ವಜನಿಕರಲ್ಲಿ ಜಾಗೃತಿ ಮತ್ತು ತೆರಿಗೆ ಸಂಗ್ರಹ ಮಾಡಲು ಸೂಚಿಸಿದರು. ಇದರ ಜೊತೆಗೆ ಹಲವಾರು ಬಾರಿ ಖುದ್ದಾಗಿ ನಾನು ಸಹ ಕರ ವಸೂಲಾತಿ ಅಭಿಯಾನದಲ್ಲಿ ಭಾಗಿಯಾಗಿ ಪರಿಣಾಮವಾಗಿ ತೆರಿಗೆ ವಸೂಲಾತಿ ಅಭಿಯಾನ ಬಹುತೇಕ ಯಶಸ್ವಿ ಕಂಡಿದೆ ಎಂದರು. ಜಿಲ್ಲೆಯ 185 ಗ್ರಾಮ ಪಂಚಾಯತಿಗಳಲ್ಲಿ ಕರ ವಸೂಲಾತಿ ಹೆಚ್ಚಿನ ಮಟ್ಟದಲ್ಲಿ ಪ್ರಗತಿ ಸಾಧಿಸಲು ತಾಲ್ಲೂಕು ಪಂಚಾಯಿತಿ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಕರ ವಸೂಲಿಗಾರರು ಗ್ರಾಮ ಪಂಚಾಯತಿಗಳಲ್ಲಿ ಸಭೆ ನಡೆಸಿ ಉತ್ತಮ ಪ್ರಗತಿ ಸಾಧಿಸಲು ವಿಶೇಷ ಶ್ರಮವಹಿಸಿ ಅಭಿಯಾನಗಳನ್ನು ಯಶಸ್ವಿಗೊಳಿದ್ದಾರೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಸಾಗರ ಈಶ್ವರ ಖಂಡ್ರೆ ಪ್ರಯತ್ನ: ಯಶವಂತಪುರ-ಬೀದರ್ ರೈಲು ಪುನಾರಂಭ






ಮಲ್ಲಮ್ಮ ನುಡಿ ವಾರ್ತೆ

ಬೀದರ : ಏ.8: ಬೀದರ್ ಸಂಸದರಾದ ಸಾಗರ ಈಶ್ವರ ಖಂಡ್ರೆ ಅವರ ನಿರಂತರ ಪ್ರಯತ್ನ ಮತ್ತು ಮನವಿಯ ಫಲವಾಗಿ ಸ್ಥಗಿತಗೊಂಡಿದ್ದ ಯಶವಂತಪುರ-ಬೀದರ್-ಯಶವಂತಪುರ (16577/78) ರೈಲು ಸೇವೆ ಪುನಾರಂಭವಾಗಿದೆ.

ವಾರದಲ್ಲಿ ಎರಡು ದಿನಗಳ ಕಾಲ ಅಂದರೆ ಪ್ರತಿ ಶನಿವಾರ ಬೆಂಗಳೂರಿನ ಯಶವಂತಪುರದಿಂದ-ಬೀದರಗೆ ಪ್ರಯಾಣಿಸುವ ಈ ರೈಲು, ಮಾರನೇ ದಿನ ಭಾನುವಾರ ಬೀದರನಿಂದ-ಬೆಂಗಳೂರಿಗೆ ಸಂಚರಿಸಲಿದೆ. ಸ್ಥಗಿತಗೊಂಡಿದ್ದ ಈ ರೈಲು ಸೇವೆಯನ್ನು ಪುನಾರಂಭ ಮಾಡುವಂತೆ ಬೀದರ್ ಸಂಸತ್ ಸದಸ್ಯ ಸಾಗರ ಖಂಡ್ರೆ ಅವರು ಕೇಂದ್ರ ರೈಲ್ವೆ ಸಚಿವ ಅಶ್ವನಿ ವೈಷ್ಣವ್ ಅವರಿಗೆ ಮನವಿ ಪತ್ರ ಸಲ್ಲಿಸಿದ್ದರು. ಸಂಸತ್ ಅಧಿವೇಶನದ ಸಂದರ್ಭದಲ್ಲಿ ಸಚಿವರನ್ನು ಭೇಟಿ ಮಾಡಿ ಮರು ಮನವಿ ಮಾಡಿದ್ದರು. ಪ್ರಸ್ತುತ ರೈಲು ಸಂಚಾರ ಪುನಾರಂಭವಾಗಿದ್ದು, ಜಿಲ್ಲೆಯ ಜನತೆಗೆ ಅನುಕೂಲವಾಗಿದೆ.

## ಸಿಂಧನೂರು ಕೊಲೆ ಪ್ರಕರಣದ ತೀರ್ಪು ಪ್ರಕಟ : ಮೂವರಿಗೆ ಮರಣದಂಡನೆ, 9 ಮಂದಿಗೆ ಜೀವಾವಧಿ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಏ.8:2020ರಲ್ಲಿ ರಾಯಚೂರು ಜಿಲ್ಲೆಯನ್ನೇ ಬೆಚ್ಚಿಬೀಳಿಸಿದ್ದ ಸಿಂಧನೂರಿನ ಸುಕಾಲಪೇಟೆಯಲ್ಲಿ ನಡೆದ ಐವರ ಕೊಲೆ ಪ್ರಕರಣದ ತೀರ್ಪು ಇಂದು ಪ್ರಕಟವಾಗಿದೆ.

ಐವರ ಕೊಲೆ ಹಾಗೂ ಇಬ್ಬರ ಕೊಲೆ ಯತ್ನ ಪ್ರಕರಣದಲ್ಲಿ ಮೂವರು ಆರೋಪಿಗಳಿಗೆ ಮರಣದಂಡನೆ, 9 ಜನರಿಗೆ ಜೀವಾವಧಿ ಶಿಕ್ಷೆ ಹಾಗೂ ದಂಡ ವಿಧಿಸಿ ಸಿಂಧನೂರಿನ 3ನೇ ಅಧಿಕ ಜಿಲ್ಲಾ ಮತ್ತು ಸೆಷನ್ ಕೋರ್ಟ್ ಪೀಠ ತೀರ್ಪು ನೀಡಿದೆ.

ಪ್ರೇಮ ಪ್ರಕರಣ ಹಿನ್ನೆಲೆ ಮದುವೆಗೆ ಒಪ್ಪಿಗೆಯಿಲ್ಲದ ಹಿನ್ನೆಲೆ ನಡೆದಿದ್ದ ಗಲಾಟೆ ಕೊಲೆಗಳಲ್ಲಿ ಅಂತ್ಯವಾಗಿತ್ತು. 1ನೇ ಆರೋಪಿ ಸಣ್ಣಫಕೀರಪ್ಪನ ಮಗಳು ಪ್ರೀತಿಸಿ ಮದುವೆಯಾಗಿದ್ದಕ್ಕೆ ಹುಡುಗನ ಮನೆಯವರ ಮೇಲೆ ಹಲ್ಲೆ ನಡೆಸಿ ನಡುರಸ್ತೆಯಲ್ಲಿ ಕೊಲೆ ಮಾಡಲಾಗಿತ್ತು. ಈ ಸಂಬಂಧ ಸಿಂಧನೂರು ನಗರ ಠಾಣೆಯಲ್ಲಿ ದಾಖಲಾಗಿದ್ದ ಪ್ರಕರಣದಲ್ಲಿ 12 ಜನ ಆರೋಪಿಗಳಿಗೆ ಈಗ ಶಿಕ್ಷೆ ಪ್ರಕಟವಾಗಿದೆ.

ಸುಕಾಲಪೇಟೆಯ ಈರಪ್ಪ, ಆತನ ಪತ್ನಿ ಸುಮಿತ್ರಮ್ಮ, ಮಕ್ಕಳಾದ ನಾಗರಾಜ್, ಶ್ರೀದೇವಿ, ಹನುಮೇಶ್ ಕೊಲೆಯಾದವರು. ಸೊಸೆ ರೇವತಿ, ಮಗಳು ತಾಯಮ್ಮ ಅವರ ಮೇಲೆ ಮಾರಣಾಂತಿಕ ಹಲ್ಲೆ ನಡೆದಿತ್ತು. ಮೊದಲ ಮೂವರು ಆರೋಪಿಗಳಾದ ಸಣ್ಣಫಕೀರಪ್ಪ, ಅಮ್ಮಣ್ಣ, ಸೋಮಶೇಖರ್‌ಗೆ ಮರಣದಂಡನೆ ಹಾಗೂ ತಲಾ 47 ಸಾವಿರ ರೂ. ದಂಡ, 4 ರಿಂದ 12ನೇ ಆರೋಪಿತರಿಗೆ ಜೀವಾವಧಿ ಹಾಗೂ ತಲಾ 97,500 ರೂ. ದಂಡ ವಿಧಿಸಿ 3ನೇ ಅಧಿಕ ಜಿಲ್ಲಾ ಮತ್ತು ಸೆಷನ್ ಕೋರ್ಟ್ ಸಿಂಧನೂರು ಪೀಠ ತೀರ್ಪು ನೀಡಿದೆ.

## ಶರಣಬಸವೇಶ್ವರ ಕಾಲೇಜಿಗೆ ಶೇ 97.18 ಫಲಿತಾಂಶ












ಮಲ್ಲಮ್ಮ ನುಡಿ ವಾರ್ತೆ

ಬೀದರ್:ಏ.8:ತಾಲ್ಲೂಕಿನ ಗೋರನಳ್ಳಿ ಸಮೀಪದ ಶರಣಬಸವೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಕಾಲೇಜಿಗೆ ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 97.18 ರಷ್ಟು ಫಲಿತಾಂಶ ದೊರೆತಿದೆ.

ಪರೀಕ್ಷೆ ಬರೆದ 142 ವಿದ್ಯಾರ್ಥಿಗಳಲ್ಲಿ 138 ವಿದ್ಯಾರ್ಥಿಗಳು ಪಾಸಾಗಿದ್ದಾರೆ.

16 ವಿದ್ಯಾರ್ಥಿಗಳು ಅಗ್ರಶ್ರೇಣಿ, 110 ಪ್ರಥಮ ದರ್ಜೆ ಹಾಗೂ 10 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ತೇರ್ಗಡೆಯಾಗಿದ್ದಾರೆ. ಗಣಿತ ಹಾಗೂ ಜೀವ ವಿಜ್ಞಾನದಲ್ಲಿ ತಲಾ ಒಬ್ಬರು ವಿದ್ಯಾರ್ಥಿಗಳು ಗರಿಷ್ಠ ಅಂಕ ಗಳಿಸಿ ಸಾಧನೆಗೈದಿದ್ದಾರೆ ಎಂದು ಪ್ರಾಚಾರ್ಯ ಡಾ. ಸತೀಶ ಪ್ರತಾಪುರ ತಿಳಿಸಿದ್ದಾರೆ.

ದರ್ಶನ್ ಶಿವಕುಮಾರ ಶೇ 95.11, ವೆಂಕಟೇಶ್ ಮರಕುಂದಾ ಶೇ 93.83, ಸುಷ್ಮಾ ಶೇ 93.5, ನವೀನ್ ಕೇಶು ಶೇ 91.83, ಸುಶೀಲ್ ಹಣಮಂತ ಶೇ 91.5, ರಕ್ಷಿತಾ ಜಗದೀಶ್ ಶೇ 91.16, ಕಮಲಾಕರ್ ಅಮೃತಪ್ಪ 90.16, ಸುಮೀತ್ ಸಂತೋಷ್ 89.83, ಶ್ರೀಕಾಂತ ರೇವಣಸಿದ್ದಪ್ಪ 88.67 ರಷ್ಟು ಅಂಕ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಸಾಧನೆಯನ್ನು ಕಲಬುರಗಿಯ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಾ. ಶರಣಬಸವಪ್ಪ ಅಪ್ಪ, ಮಾತೆ ಡಾ. ದಾಕ್ಷಾಯಿಣಿ, ಚಿ. ದೊಡ್ಡಪ್ಪ ಅಪ್ಪ, ಕಾರ್ಯದರ್ಶಿ ಬಸವರಾಜ ದೇಶಮುಖ ಕೊಂಡಾಡಿದ್ದಾರೆ.

ಶರಣಬಸವೇಶ್ವರ ಪದವಿಪೂರ್ವ ಕಾಲೇಜು ಆರಂಭದಿಂದಲೂ ಉತ್ತಮ ಫಲಿತಾಂಶ ಕೊಡುತ್ತ ಬಂದಿದೆ. ಈ ಬಾರಿಯ ಫಲಿತಾಂಶ ಕಾಲೇಜು ಗುಣಮಟ್ಟದ ಶಿಕ್ಷಣಕ್ಕೆ ನಿರ್ದೇಶನವಾಗಿದೆ.


ಡಾ. ಶರಣಬಸವಪ್ಪ ಅಪ್ಪ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷ

ಶರಣಬಸವೇಶ್ವರ ಪದವಿಪೂರ್ವ ಕಾಲೇಜು ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ತನ್ನದೇ ಆದ ಕೊಡುಗೆ ನೀಡುತ್ತಿದೆ. ಪ್ರತಿಭಾವಂತ ವಿದ್ಯಾರ್ಥಿಗಳ ಉಜ್ವಲ ಭವಿಷ್ಯದ ಕನಸು ನನಸಾಗಿಸಲು ಶ್ರಮಿಸುತ್ತಿದೆ.


ಮಾತೆ ಡಾ. ದಾಕ್ಷಾಯಿಣಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್ ಪರ್ಸನ್

## ಚಲಿಸುತ್ತಿದ್ದಾಗಲೇ ಎರಡು ತುಂಡಾದ ಫಲಕ್‌ನುಮಾ ಎಕ್ಸ್‌ಪ್ರೆಸ್ ರೈಲು: ನೂರಾರು ಪ್ರಯಾಣಿಕರು ಪಾರು




ಮಲ್ಲಮ್ಮ ನುಡಿ ವಾರ್ತೆ

ಹೈದರಾಬಾದ್:ಏ.8:ಆಂಧ್ರಪ್ರದೇಶದ ಶ್ರೀಕಾಕುಳಂ ಜಿಲ್ಲೆಯ ಪಲಾಸಾ ಬಳಿ ಇಂದು ಬೆಳಗ್ಗೆ ಬೆಚ್ಚಿ ಬೀಳಿಸುವ ಘಟನೆ ನಡೆದಿದೆ. ವಿಶಾಖಪಟ್ಟಣಂ ಮಾರ್ಗವಾಗಿ ಪಶ್ಚಿಮ ಬಂಗಾಳದ ಶಾಲಿಮಾರ್‌ಗೆ ಪ್ರಯಾಣಿಸುತ್ತಿದ್ದ ಫಲಕ್‌ನುಮಾ ಎಕ್ಸ್‌ಪ್ರೆಸ್ ರೈಲು ಅನಿರೀಕ್ಷಿತವಾಗಿ ಬೇರ್ಪಟ್ಟಿದೆ (2 ತುಂಡಾಗಿ ). ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸದೇ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ರೈಲ್ವೆ ಅಧಿಕಾರಿಗಳು , ರೈಲಿನಲ್ಲಿ ಯಾವುದೇ ಅಲರ್ಟ್ ತಿಳಿಯದೇ ಏಕಾಏಕಿ ಎರಡು ಎಸಿ ಬೋಗಿಗಳು ಬೇರ್ಪಟ್ಟಿವೆ. ಕೂಡಲೇ ಎಚ್ಚೆತ್ತ ಚಾಲಕ ತಕ್ಷಣ ರೈಲನ್ನು ನಿಲ್ಲಿಸಿ, ದೊಡ್ಡ ಅನಾಹುತ ಆಗುವುದನ್ನು ತಪ್ಪಿಸಿದ್ದಾರೆ. ಘಟನೆಯಲ್ಲಿ ಯಾವುದೇ ಪ್ರಯಾಣಿಕರಿಗೆ ಗಾಯಗಳಾಗಲಿ, ಸಾವು-ನೋವುಗಳಾಗಲಿ ಸಂಭವಿಸಿಲ್ಲ ಎಂದು ತಿಳಿಸಿದ್ದಾರೆ.

ಬಳಿಕ ಏನಾಯ್ತು?

ವಿಷಯ ತಿಳಿಯುತ್ತಿದ್ದಂತೆ ರೈಲ್ವೇ ಸಿಬ್ಬಂದಿ ಘಟನಾ ಸ್ಥಳಕ್ಕೆ ತ್ವರಿತವಾಗಿ ಭೇಟಿ ನೀಡಿದ್ದಾರೆ. ಅಗತ್ಯ ರಿಪೇರಿ ಮಾಡಿ ಬೇರ್ಪಟ್ಟ ಬೋಗಿಗಳನ್ನು ಮತ್ತೆ ಜೋಡಿಸಿದ್ದಾರೆ. ಸುರಕ್ಷತೆಯ ಎಲ್ಲಾ ಪ್ರೋಟೋಕಾಲ್ (ಶಿಷ್ಟಾಚಾರ) ಪಾಲಿಸಿದ್ದು, ಯಾವುದೇ ಸಮಸ್ಯೆಗಳಿಲ್ಲ ಎಂದು ಖಚಿತಪಡಿಸಿಕೊಂಡ ಬಳಿಕ ರೈಲು ತನ್ನ ಪ್ರಯಾಣವನ್ನು ಪುನರಾರಂಭಿಸಿದೆ. ಆದಾಗ್ಯೂ ಏಕಾಏಕಿ ಬೋಗಿಗಳು ಬೇರ್ಪಡಲು ಕಾರಣವೇನು ಅನ್ನೋದರ ಕುರಿತು ರೈಲ್ವೇ ಅಧಿಕಾರಿಗಳು ಮೇಲ್ವಿಚಾರಣೆ ನಡೆಸುತ್ತಿದ್ದಾರೆ.

ರೈಲು ಸಂಚಾರದ ಮೇಲೆ ಪರಿಣಾಮ ಫಲಕ್‌ನುಮಾ ಸೂಪರ್ ಫಾಸ್ಟ್ ಎಕ್ಸ್‌ಪ್ರೆಸ್ ರೈಲು ಬೇರ್ಪಟ್ಟ ಕಾರಣದಿಂದಾಗಿ ಬ್ರಹ್ಮಪುರ ಮತ್ತು ವಿಶಾಖಪಟ್ಟಣಂ ನಡುವಿನ ರೈಲು ಸೇವೆಗಳಲ್ಲಿ ತಾತ್ಕಾಲಿಕ ಅಡಚಣೆ ಉಂಟಾಗಿತ್ತು.

## ದ್ವಿತೀಯ ಪಿಯುಸಿ ಪರೀಕ್ಷೆ-1ರ ಫಲಿತಾಂಶ ಪ್ರಕಟ
## ಶೇಕಡ 73.45 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏ.08:ಇಂದು ರಾಜ್ಯಾದ್ಯಂತ ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು, ಶೇಕಡ 73.45 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಉಡುಪಿ ಜಿಲ್ಲೆಯು ಶೇಕಡ 93.90 ರಷ್ಟು ಫಲಿತಾಂಶ ಪಡೆಯುವ ಮೂಲಕ ಪ್ರಥಮ ಸ್ಥಾನದಲ್ಲಿದೆ, ದಕ್ಷಿಣ ಕನ್ನಡ ಶೇಕಡ 93.57 ರಷ್ಟು ಪಡೆಯುವ ಮೂಲಕ ದ್ವಿತೀಯ ಸ್ಥಾನದಲ್ಲಿದ್ದು, ಬೆಂಗಳೂರು ದಕ್ಷಿಣ ಶೇ 85.36ರಷ್ಟು ಪಡೆದು ತೃತೀಯ ಸ್ಥಾನದಲ್ಲಿದೆ. ಯಾದಗಿರಿ ಜಿಲ್ಲೆಯು ಶೇಕಡ 48.45 ರಷ್ಟು ಪಡೆಯುವ ಮೂಲಕ ಕೊನೆಯ ಸ್ಥಾನದಲ್ಲಿದೆ.

ಕಲಾ, ವಾಣಿಜ್ಯ, ವಿಜ್ಞಾನ ವಿಭಾಗದಲ್ಲಿ ಒಟ್ಟು 6,37,805 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 4,68,439 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. 2,69,212 ಬಾಲಕಿಯರು ಉತ್ತೀರ್ಣರಾಗಿದ್ದು, 1,99,227 ಬಾಲಕರು ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದಾರೆ ನಗರ ಪ್ರದೇಶದಲ್ಲಿ 5,03,300 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಆ ಪೈಕಿ 3,75,188 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಗ್ರಾಮಾಂತರ ಪ್ರದೇಶದಲ್ಲಿ 1,34,505 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು ಆ ಪೈಕಿ 92,251 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ದ್ವಿತೀಯ ಪಿಯುಸಿ ಪರೀಕ್ಷೆ-1ನ್ನು 2025 ಮಾರ್ಚ್ 01 ರಿಂದ ಮಾರ್ಚ್ 20 ರವರೆಗೆ ಒಟ್ಟು 1171 ಪರೀಕ್ಷಾ ಕೇಂದ್ರಗಳಲ್ಲಿ ರಾಜ್ಯಾದಂತ ನಡೆಸಲಾಗಿತ್ತು. ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ಒಟ್ಟು 76 ಮೌಲ್ಯಮಾಪನ ಕೇಂದ್ರಗಳಲ್ಲಿ ಮಾರ್ಚ್ 21 ರಿಂದ ಏಪ್ರಿಲ್ 02 ರವರೆಗೆ 28,092 ಮೌಲ್ಯಮಾಪಕರಿಂದ ನಡೆಸಲಾಗಿದೆ.

ದ್ವಿತೀಯ ಪಿಯುಸಿ ಫಲಿತಾಂಶಕ್ಕಾಗಿ, ವಿದ್ಯಾರ್ಥಿಗಳು https://karresults.nic.in ವೆಬ್ಸೈಟ್‌ನಲ್ಲಿ ವೀಕ್ಷಿಸಬಹುದು. 2025ರ ದ್ವಿತೀಯ ಪಿಯುಸಿ ಪರೀಕ್ಷೆ-2 ನ್ನು 2025 ರ ಏಪ್ರಿಲ್ 24 ರಿಂದ ಮೇ 08 ನಡೆಸಲಾಗುವುದು.

2025ರ ದ್ವಿತೀಯ ಪಿಯುಸಿ ಪರೀಕ್ಷೆ-2/ ಪರೀಕ್ಷೆ-3ಕ್ಕೆ ಎಲ್ಲಾ ವರ್ಗದ ಬಾಲಕಿಯರು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ವರ್ಗ-1ರ ಬಾಲಕರಿಗೆ ಪುನರಾವರ್ತಿತ/ಅಪೂರ್ಣ ಅಭ್ಯರ್ಥಿಯಾಗಿ ನೋಂದಾಯಿಸಿಕೊಳ್ಳಲು ಪರೀಕ್ಷಾ ಶುಲ್ಕ ಇರುವುದಿಲ್ಲ.

2025ರ ದ್ವಿತೀಯ ಪಿಯುಸಿ ಪರೀಕ್ಷೆ-3 ನ್ನು 2025 ಜೂನ್ 9 ರಿಂದ 21ರವರೆಗೆ ನಡೆಸಲಾಗುವುದು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.